
ಆಧುನಿಕ ಶಿವಮೊಗ್ಗದ ನಿರ್ಮಾತೃ ಬಿ.ಎಸ್.ಯಡಿಯೂರಪ್ಪ

ಕೇಳಿದ್ದನ್ನು ಕೊಡುವ ಕಾಮಧೇನು ಯಡಿಯೂರಪ್ಪ | ನಗರದ ಅಭಿವೃದ್ಧಿಗಳಲ್ಲಿ ಸದಾ ಜೀವಂತ ಮಾಜಿ ಸಿಎಂ

2006ಕ್ಕೆ ಮುನ್ನ ಜಿಲ್ಲೆಯಿಂದ ಮೂರು ಮಂದಿ ಮುಖ್ಯಮಂತ್ರಿಯಾಗಿ ರಾಜ್ಯಭಾರ ನಡೆಸಿದರೂ ಅಭಿವೃದ್ಧಿ ಎಂಬುದು ಮಾತ್ರ ಕನಸೇ ಆಗಿತ್ತು. ಅಭಿವೃದ್ಧಿ ಎಂಬುದು ಮರೀಚಿಕೆಯೇ ಆಗಿದ್ದ ಅಂತಹದೊಂದು ಆಸೆ ಆಕಾಂಕ್ಷೆಯನ್ನೂ ಜಿಲ್ಲೆಯ ಜನತೆ ಇಟ್ಟುಕೊಳ್ಳದ ಸಂದರ್ಭದಲ್ಲಿ ಹೀಗೊಂದು ತಿರುವು ಸಿಗಬಹುದು, ಅಭಿವೃದ್ಧಿಯ ಬಂಪರ್ ಲಾಟರಿ ಹೊಡೆಯಬಹುದೆಂದು ಯಾರೂ ನಿರೀಕ್ಷಿಸಿಯೂ ಇರಲಿಲ್ಲ.



ಮಲೆನಾಡಿನ ಹೆಬ್ಬಾಗಿಲು, ಸಾಂಸ್ಕೃತಿಕ ರಾಜಧಾನಿ, ಹೋರಾಟಗಳ ತವರು ಎಂದೆಲ್ಲ ವಿಶೇಷಣಗಳಿಂದ ಕರೆಯಲ್ಪಡುತ್ತಿದ್ದ ಶಿವಮೊಗ್ಗ ನಗರ ಮತ್ತು ಜಿಲ್ಲೆ ಅಭಿವೃದ್ಧಿ ದೃಷ್ಟಿಯಿಂದ ಮಾತ್ರ ಪಾಳುಬಿದ್ದ ಊರಿನಂತೆಯೇ ಇತ್ತು. ಶಿವಪ್ಪನಾಯಕನ ಕಾಲದ ಊರೇ ಇದಾಗಿರಬೇಕು ಎಂದು ತಮಾಷೆ ಮಾಡುವ ಹೊರ ಊರಿನವರ ಧ್ವನಿಗೆ, ತಮನ್ನು ತಾವೇ ಗೇಲಿ ಮಾಡಿಕೊಳ್ಳುವ ಅನಿವಾರ್ಯತೆಗೆ ಸಿಲುಕಿದ್ದ ಸ್ಥಳೀಯರು ದನಿಗೂಡಿಸಿ ಮುಖ ಬಾಡಿಸುತ್ತಿದ್ದುದು ಈಗ ಇತಿಹಾಸ.

ಸ್ವಾತಂತ್ರ್ಯದ ಬಳಿಕ ಯಾವೊಂದು ಸರ್ಕಾರದ ಅವಧಿಯಲ್ಲಿಯೂ ಜಿಲ್ಲೆಗೆ ಅಭಿವೃದ್ಧಿಯ ಅನುದಾನ ಎಂಬುದು ಬರಲೇ ಇಲ್ಲ. 2006ಕ್ಕೆ ಮುನ್ನ ಜಿಲ್ಲೆಯಿಂದ ಮೂರು ಮಂದಿ ಮುಖ್ಯಮಂತ್ರಿಯಾಗಿ ರಾಜ್ಯಭಾರ ನಡೆಸಿದರೂ ಅಭಿವೃದ್ಧಿ ಎಂಬುದು ಮಾತ್ರ ಕನಸೇ ಆಗಿತ್ತು. ಅಭಿವೃದ್ಧಿ ಎಂಬುದು ಮರೀಚಿಕೆಯೇ ಆಗಿದ್ದ, ಅಂತಹದೊಂದು ಆಸೆ ಆಕಾಂಕ್ಷೆಯನ್ನೂ ಜಿಲ್ಲೆಯ ಜನತೆ ಇಟ್ಟುಕೊಳ್ಳದ ಸಂದರ್ಭದಲ್ಲಿ ಹೀಗೊಂದು ತಿರುವು ಸಿಗಬಹುದು, ಅಭಿವೃದ್ಧಿಯ ಬಂಪರ್ ಲಾಟರಿ ಹೊಡೆಯಬಹುದೆಂದು ಯಾರೂ ನಿರೀಕ್ಷಿಸಿಯೂ ಇರಲಿಲ್ಲ.

ಅದು 2006, ಜೆಡಿಎಸ್ ಮತ್ತು ಬಿಜೆಪಿ ಜೊತೆಗೂಡಿ ಸಮ್ಮಿಶ್ರ ಸರ್ಕಾರ ರಚಿಸಿತು. ಜೆಡಿಎಸ್‌ನಿಂದ ಕುಮಾರಸ್ವಾಮಿ ಮುಖ್ಯಮಂತ್ರಿಯಾದರೆ, ಬಿಜೆಪಿಯ ಪ್ರಶ್ನಾತೀತ ನಾಯಕ ಬಿ.ಎಸ್.ಯಡಿಯೂರಪ್ಪ ಉಪ ಮುಖ್ಯಮಂತ್ರಿಯಾದರು. ಉಪಮುಖ್ಯಮಂತ್ರಿಯ ಜೊತೆಗೆ ಹಣಕಾಸು ಖಾತೆಯನ್ನು ಕೂಡ ಪಡೆದ ಯಡಿಯೂರಪ್ಪನವರು ಅಭಿವೃದ್ಧಿ ಎಂಬುದನ್ನು ತಮ್ಮೊಳಗೆ ಆಹ್ವಾನಿಸಿಕೊಂಡಂತೆ ಕೆಲಸ ಶುರು ಮಾಡಿದರು. ಇಡೀ ರಾಜ್ಯದ ತುಂಬೆಲ್ಲ ಅಭಿವೃದ್ಧಿಯ ಬೀಜ ಬಿತ್ತತೊಡಗಿದರೂ, ತವರು ಜಿಲ್ಲೆಯ ಮೇಲೆ ಮಾತ್ರ ಅವರಿಗೆ ಇದ್ದ ವಿಶೇಷ ಪ್ರೇಮ ಢಾಳಾಗಿ ಕಾಣಲಾರಂಭಿಸಿತು.

ಮೂಗಿನ ಮೇಲೆ ಬೆರಳಿಟ್ಟ ಜನ


ಉಪ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ತವರಿಗೆ ಆಗಮಿಸಿದ ಯಡಿಯೂರಪ್ಪ ಅವರು ಹಾರ-ತುರಾಯಿಯ ಕಾರ್ಯಕ್ರಮದಲ್ಲಿ ಭಾಗಿಯಾಗಲಿಲ್ಲ. ಬದಲಿಗೆ ಅಧಿಕಾರಿಗಳ, ನಗರದ ಗಣ್ಯರ, ಅಭಿವೃದ್ಧಿ ಆಸಕ್ತರ, ವಿವಿಧ ಸಂಘ-ಸಂಸ್ಥೆಗಳ ಮುಖಂಡರ ಸಭೆಯನ್ನು ನಡೆಸಿದರು. ಜಿಲ್ಲೆಗೆ ಏನೇನು ಆಗಬೇಕು ಎಂದು ಪಟ್ಟಿ ಮಾಡಿ ಎಂದು ತಾಕೀತು ಮಾಡಿದರು. ಇದೆಲ್ಲ ಆರಂಭದ ಶೂರತ್ವ ಎಂದುಕೊಂಡವರಿಗೇನೂ ಕಡಿಮೆಯಿರಲಿಲ್ಲ. ಆದರೆ, ದಿನ ಕಳೆದಂತೆ ಒಂದೊಂದೇ ಯೋಜನೆಗಳಿಗೆ ರೂಪ ಸಿಗತೊಡಗಿತು. ಹಣಕಾಸು ಇಲಾಖೆಯ ಅನುಮೋದನೆ ದೊರೆಯತೊಡಗಿತು. ಟೆಂಡರ್ ಆಗಿ ಕಾಮಗಾರಿಗಳೂ ಆರಂಭವಾದವು. ನೋಡ ನೋಡುತ್ತಿದ್ದಂತೆ ಎಲ್ಲ ಕಡೆ ಜಲ್ಲಿ ಕಲ್ಲುಗಳ ಸದ್ದು, ಸಿಮೆಂಟ್ ಧೂಳು ಏಳತೊಡಗಿತು. ಕಟ್ಟಡಗಳು, ರಸ್ತೆಗಳು ಮಿಂಚತೊಡಗಿದವು. ಹಣದ ಹರಿವು ಹೆಚ್ಚಾಯಿತು. ಉದ್ಯೋಗ ಸೃಷ್ಟಿಯಾಯಿತು. ಜನರು ನಿಧಾನವಾಗಿ ಮೂಗಿನ ಮೇಲೆ ಬೆರಳಿಟ್ಟು ನೋಡತೊಡಗಿದರು.

ವಾರಂತ್ಯದಲ್ಲಿ ಜಿಲ್ಲೆಯಲ್ಲಿಯೇ ವಾಸ್ತವ್ಯ

ಬಹುತೇಕ ಪ್ರತಿ ಶನಿವಾರ ಮತ್ತು ಭಾನುವಾರ ಜಿಲ್ಲೆಯಲ್ಲಿಯೇ ವಾಸ್ತವ್ಯ ಹೂಡತೊಡಗಿದರು. ಶನಿವಾರ ಮುಂಜಾನೆ ರೈಲಿನಿಂದ ಇಳಿದರೆ ಯಡಿಯೂರಪ್ಪ ಮನೆ ಕಡೆಗೆ ಹೋಗುತ್ತಿರಲಿಲ್ಲ. ಬದಲಾಗಿ ನೇರವಾಗಿ ಕಾಮಗಾರಿಯ ವೀಕ್ಷಣೆಗೆ ತೆರಳುತ್ತಿದ್ದರು. ಮೊದಲಿಗೆ ಇದು ಆಶ್ಚರ್ಯದಂತೆ ಕಂಡರೂ ಬರು ಬರುತ್ತಾ ಅಧಿಕಾರಿಗಳಿಗೆ ಇದೇ ಅಭ್ಯಾಸವಾಗತೊಡಗಿತು. ಶನಿವಾರ ಮುಂಜಾನೆಯೇ ಕಾಮಗಾರಿ ಸ್ಥಳದಲ್ಲಿ ಸಿದ್ಧವಾಗಿ ಬಿಡುತ್ತಿದ್ದರು. ಪ್ರತಿವಾರ ಕಾಮಗಾರಿಯ ಪ್ರಗತಿ ವೀಕ್ಷಿಸಿ ತಡವಾಗಿದ್ದರೆ ಸ್ಥಳದಲ್ಲಿಯೇ ಸಿಟ್ಟಿನ ಪ್ರದರ್ಶನವೂ ಇರುತ್ತಿತ್ತು. ಹೀಗಾಗಿ ಅಧಿಕಾರಿಗಳು ಕಾಮಗಾರಿ ವೇಗ ಮತ್ತು ಗುಣಮಟ್ಟದ ವಿಚಾರದಲ್ಲಿ ಯಡಿಯೂರಪ್ಪನವರ ವೇಗಕ್ಕೆ ಹೊಂದಿಕೊಂಡರು. ವಾರಾಂತ್ಯದಲ್ಲಿ ರಜೆ ಎಂಬುದನ್ನು ಅಧಿಕಾರಿಗಳು, ಪತ್ರಕರ್ತರು ಮರೆತೇ ಬಿಟ್ಟಿದ್ದರು.

ತವರು ಜಿಲ್ಲೆಗೆ ಒತ್ತುಕೊಟ್ಟ ಮೊದಲ ಸಿಎಂ

ಮುಖ್ಯಮಂತ್ರಿಯಾದ ಬಳಿಕ ಅಭಿವೃದ್ಧಿಗೆ ಇನ್ನೂ ವೇಗ ಸಿಗತೊಡಗಿತು. ಯಡಿಯೂರಪ್ಪನವರ ಅಭಿವೃದ್ಧಿ ಪರ ನಿಲುವು, ಹಿಡಿದ ಹಠ, ಛಲ, ಮುಂದಾಲೋಚನೆಗಳು ಶ್ಲಾಘಿಸಲ್ಪಡಲು ಶುರುವಾದವು. ಇದೇ ವೇಳೆಗೆ ಇದುವರೆಗೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಪ್ರತಿ ಮುಖ್ಯಮಂತ್ರಿಯೂ ತವರು ಜಿಲ್ಲೆಯ ಕಡೆ ಇದೇ ರೀತಿಯ ಅಭಿವೃದ್ಧಿಯ ಮಮತೆ ತೋರಿದ್ದರೆ ಇಡೀ ರಾಜ್ಯವೇ ಅಭಿವೃದ್ಧಿಯ ಉತ್ತುಂಗಕ್ಕೆ ತಲುಪುತ್ತಲಿತ್ತು ಎಂಬ ಮಾತನ್ನು ಇವರೇ ಆಡಿದರು. ಪ್ರತಿ ಬಾರಿ ಶಿವಮೊಗ್ಗಕ್ಕೆ ಬಂದಾಗಲೂ ಇನ್ನೇನು ಆಗಬೇಕು ಎಂಬುದರ ಪಟ್ಟಿ ಕೊಡಿ ಎಂದು ಕೇಳುತ್ತಿದ್ದರು. ಯಾರೇ ಆಗಲಿ ಇಂತಹ ಅಭಿವೃದ್ಧಿ ಆಗಬೇಕೆಂದರೆ ತಡಮಾಡದೆ ಸಿದ್ಧತೆ ಆರಂಭಿಸಿಯೇ ಬಿಡುತ್ತಿದ್ದರು. ಭರಪೂರ ಅಭಿವೃದ್ಧಿ ಕಾಮಗಾರಿಗಳಿಂದಾಗಿ ವಿಪರೀತ ಎನ್ನುವಷ್ಟು ಉದ್ಯೋಗ ಸೃಷ್ಟಿಯಾಗತೊಡಗಿತು. ಹಣದ ಹರಿವು ಜೋರಾಗಿತ್ತು. ಎಲ್ಲ ವ್ಯಾಪಾರ, ಉದ್ದಿಮೆಗಳ ವಹಿವಾಟು ಚಿಗುರತೊಡಗಿತು. ಬೆನ್ನಲ್ಲೇ ರಿಯಲ್ ಎಸ್ಟೇಟ್ ಉದ್ಯಮ ಅಬ್ಬರಿಸತೊಡಗಿತು. ನಗರಕ್ಕೆ ಹೊಂದಿಕೊಂಡಂತೆ ಭೂಮಿ ಹೊಂದಿದ್ದ ರೈತರ ಜಮೀನುಗಳಿಗೆ ಬಂಪರ್ ಬೆಲೆ ಬಂದಿತು.


ಉಡುತಡಿಯ ಅಕ್ಕಮಹಾದೇವಿ ಜನ್ಮಸ್ಥಳ ಅಭಿವೃದ್ಧಿ

ದೇಶದ ಎರಡನೇ ದೊಡ್ಡ ಸಿಗಂದೂರು ಸೇತುವೆಗೆ ನೆರವು



ಇದೆಲ್ಲದಕ್ಕೆ ಮುಕುಟವಿಟ್ಟಂತೆ ನನಸಾಗಲು ಸಾಧ್ಯವೇ ಇಲ್ಲ ಎಂಬಂತಿದ್ದ ಸಿಗಂದೂರು ಸೇತುವೆ ನಿರ್ಮಾಣಕ್ಕೆ ಕೇಂದ್ರ ಸರ್ಕಾರದ ನೆರವು ಪಡೆದು, ರಾಜ್ಯದ ಸಹಕಾರ ನೀಡುವುದರೊಂದಿಗೆ ಕಾಮಗಾರಿ ಶಂಕುಸ್ಥಾಪನೆ ಮಾಡಿಸಿಯೇ ಬಿಟ್ಟರು. ಇದು 2025ರಲ್ಲಿ ಲೋಕಾರ್ಪಣೆಗೊಳ್ಳುವುದರೊಂದಿಗೆ ದೇಶದ ಎರಡನೇ ಅತಿ ದೊಡ್ಡ ಸೇತುವೆ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. ಜಿಲ್ಲೆಯಲ್ಲಿ ಯಡಿಯೂರಪ್ಪನವರ ಅಭಿವೃದ್ಧಿ ಶುರು ಮಾಡುತ್ತಿದ್ದಂತೆ ಖಾಸಗಿ ಹೂಡಿಕೆಯೂ ಹರಿದು ಬರತೊಡಗಿತು. ಸಾವಿರಾರು ಜನರಿಗೆ ಉದ್ಯೋಗ ನೀಡುವ ಶಾಹಿ ಗಾರ್ಮೆಂಟ್, ಐಟಿ ಕಂಪನಿಗಳು ಆಗಮಿಸಿದವು. ಎಷ್ಟೋ ದಶಕದಿಂದ ಖಾಲಿಯಾಗಿಯೇ ಬಿಟ್ಟಿದ್ದ ನಿವೇಶನಗಳಲ್ಲಿ ದೊಡ್ಡ ದೊಡ್ಡ ಕಟ್ಟಡಗಳು ತಲೆ ಎತ್ತಿದವು. ಹೊಸ ಹೊಸ ಶೋ ರೂಮ್‌ಗಳು ಸೇರಿ ಇನ್ನಿತರೆ ಉದ್ಯಮಗಳು ಬಂದವು. ಹೋಟೆಲ್ ಉದ್ಯಮ ಚಿಗುರಿತು.

ಶಿಕಾರಿಪುರಕ್ಕೆ ಆಧುನಿಕ ಸ್ಪರ್ಶ

ತವರು ಕ್ಷೇತ್ರ ಶಿಕಾರಿಪುರ ಎಂದರೆ ಯಡಿಯೂರಪ್ಪನವರಿಗೆ ಇನ್ನಷ್ಟು ಅಚ್ಚುಮೆಚ್ಚು. ಚಿಕ್ಕದಾದ ಶಿಕಾರಿಪುರ ಪಟ್ಟಣಕ್ಕೆ ಕಾಯಕಲ್ಪ ನೀಡಲು ಆರಂಭಿಸಿದರು. ಒಳಚರಂಡಿ ವ್ಯವಸ್ಥೆ, ಉತ್ತಮ ರಸ್ತೆ, ನೀರಾವರಿ ಯೋಜನೆಗೆ ವಿಶೇಷ ಆದ್ಯತೆ, ಶಿಕಾರಿಪುರ ಪಟ್ಟಣದಲ್ಲಿ ಶಾಹಿ ಗಾರ್ಮೆಂಟ್ ಸ್ಥಾಪನೆ ಮೂಲಕ ಸಾವಿರಾರು ಉದ್ಯೋಗ ಸೃಷ್ಟಿ, ಆಧುನಿಕ ವ್ಯವಸ್ಥೆಯುಳ್ಳ ಸರ್ಕಾರಿ ಕಟ್ಟಡಗಳು, ಬಹುಶಃ ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ತಾಲೂಕು ಕೇಂದ್ರವೊಂದರಲ್ಲಿ ಸಂಗೀತ ಕಾರಂಜಿ ನಿರ್ಮಾಣ.. ಹೀಗೆ ಸಾಲು ಸಾಲು ಅಭಿವೃದ್ಧಿಯನ್ನು ತಂದರು. ಬೇಕಾದಷ್ಟು ಅನುದಾನ ಹರಿದು ಬಂದಿತು. ಆಸ್ಪತ್ರೆ ಮೇಲ್ದರ್ಜೆಗೇರಿತು. ಉಡುತಡಿಯಲ್ಲಿ ಅಕ್ಕಮಹಾದೇವಿ ಜನಸ್ಥಳದ ಅಭಿವೃದ್ಧಿ ಗಮನ ಸೆಳೆಯುವಂತಿದೆ. ಹೀಗೆ ಸಾಲುಸಾಲು ಅಭಿವೃದ್ಧಿಯಿಂದಾಗಿ ಶಿವಮೊಗ್ಗ ಜಿಲ್ಲೆಯಲ್ಲಿ ಓಡಾಡಿದವರಿಗೆ ಹೊಸ ಜಗತ್ತಿಗೆ ಬಂದ ಅನುಭವವಾಗುತ್ತಿರುವುದು ಸುಳ್ಳಲ್ಲ. ಹೀಗಾಗಿಯೇ ಯಡಿಯೂರಪ್ಪನವರನ್ನು ಶಿವಮೊಗ್ಗದ ಜನತೆ ಆಧುನಿಕ ಶಿವಮೊಗ್ಗದ ನಿರ್ಮಾತೃ ಎಂದು ಯಾವುದೇ ಪಕ್ಷ ಭೇದವಿಲ್ಲದೆ ಕರೆಯುತ್ತಿದ್ದಾರೆ.

ಶಿಥಿಲ ಸರ್ಕಾರಿ ಕಟ್ಟಡಳಿಗೆ ಹೊಸ ರೂಪ, ರಸ್ತೆ ಅಭಿವೃದ್ಧಿಗೆ ಕಾಯಕಲ್ಪ

ಸ್ವಾತಂತ್ರ್ಯ ಪೂರ್ವದಲ್ಲಿ ನಿರ್ಮಾಣವಾಗಿ ಶಿಥಿಲಾವಸ್ಥೆಯಲ್ಲಿದ್ದ ಡಿಸಿ ಕಚೇರಿ, ಸಾರಿಗೆ ಇಲಾಖೆ, ಜಿಲ್ಲಾ ತರಬೇತಿ ಕೇಂದ್ರ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಲೋಕೋಪಯೋಗಿ ಇಲಾಖೆ (ವಿಶೇಷ ವಿಭಾಗ) ಕಚೇರಿಗಳಿಗೆ ಹೊಸ ಕಟ್ಟಡಗಳನ್ನು ನಿರ್ಮಿಸಿದರು. ಅನೇಕ ಕಟ್ಟಡಗಳಿಗೆ ನವೀಕರಣ ಭಾಗ್ಯ ದೊರಕಿತು. ಹಳೆಯ ಖಾಸಗಿ ಬಸ್ ನಿಲ್ದಾಣ ಮತ್ತು ಸರ್ಕಾರಿ ಬಸ್ ನಿಲ್ದಾಣಗಳನ್ನು ಆಧುನಿಕ ರೀತಿಯಲ್ಲಿ ಅಕ್ಕಪಕ್ಕದಲ್ಲಿಯೇ ನಿರ್ಮಿಸಿದರು. ಕೆಎಸ್ಆರ್‌ಟಿಸಿ ಡಿಪೋ ನಿರ್ಮಾಣ, ನೆಹರು ಒಳಾಂಗಣ ಕ್ರೀಡಾಂಗಣ ಹೀಗೆ ಸಾಲು ಸಾಲು ಅಭಿವೃದ್ಧಿಯ ಸಂಕೇತಗಳು ಎದ್ದು ಕಾಣತೊಡಗಿದವು.

ಕೃಷಿ ವಿವಿಯು ಕೃಷಿ ಮತ್ತು ತೋಟಗಾರಿಕಾ ವಿವಿಯಾಗಿ ಮೇಲ್ದರ್ಜೆಗೇರಿತು. ಸಾಗರ ತಾಲೂಕಿನ ಆನಂದಪುರ ಸಮೀಪದ ಇರುವಕ್ಕಿಯಲ್ಲಿ ಸುಮಾರು 800 ಎಕರೆ ಜಾಗ ನೀಡಲಾಯಿತು. ಪಶು ವೈದ್ಯಕೀಯ ಮಹಾವಿದ್ಯಾಲಯ, ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ ಸ್ಥಾಪನೆಗೆ ಒಪ್ಪಿಗೆ ಮತ್ತು ಅನುದಾನ ಬಿಡುಗಡೆಯಾಯಿತು. ನಗರದ ಒಳಗೇ ಇದ್ದ ಜಿಲ್ಲಾ ಕೇಂದ್ರ ಕಾರಾಗೃಹವನ್ನು ದೂರದ ಸೋಗಾನೆಗೆ ಸ್ಥಳಾಂತರಿಸುವ ಆದೇಶ ಹೊರಡಿಸಿದರು. ಅಲ್ಲಿ ಆಧುನಿಕ ರೀತಿಯಲ್ಲಿ ಎಲ್ಲ ರೀತಿಯ ಸೌಲಭ್ಯ ಒಳಗೊಂಡ ಕಟ್ಟಡ ನಿರ್ಮಿಸಿದರು. ಇತ್ತ ಕಾರಾಗೃಹ ಇದ್ದ ಜಾಗವನ್ನು ಫ್ರೀಡಂ ಪಾರ್ಕ್ ಆಗಿ ಅಭಿವೃದ್ಧಿಪಡಿಸಿದರು. ನಗರ ಎದೊಳಗಿನ ಬಿ.ಎಚ್.ರಸ್ತೆಯ ಅಗಲೀಕರಣ ಮತ್ತು ಕಾಂಕ್ರೀಟೀಕರಣ, ರಿಂಗ್ ರೋಡ್ ನಿರ್ಮಾಣ, ಎಲ್ಲ ರಸ್ತೆಗಳ ಅಭಿವೃದ್ಧಿಗೆ ವಿಶೇಷ ಅನುದಾನ ನೀಡಿದರು.




ಜಿಲ್ಲಾಧಿಕಾರಿಗಳ ಕಚೇರಿ ಕಟ್ಟಡ



ನೀರಾವರಿ ಯೋಜನೆಗಳಿಗೆ ಭಾರಿ ಅನುದಾನ ಬಿಡುಗಡೆ

ಬರೀ ನಗರಕ್ಕೆ ಮಾತ್ರವಲ್ಲ, ಸೊರಬ, ಶಿಕಾರಿಪುರ, ಸಾಗರ ಹೀಗೆ ಅವಶ್ಯಕತೆ ಇರುವ ಕಡೆಗಳಲ್ಲಿ ನೀರಾವರಿ ಯೋಜನೆಗಳಿಗೆ ದೊಡ್ಡ ಮಟ್ಟದ ಅನುದಾನ ಬಿಡುಗಡೆಗೊಳಿಸಿದರು. ತುಂಗಾ ಏತ ನೀರಾವರಿ ಯೋಜನೆ ಸೇರಿ ದಶಕಗಳ ಕಾಲ ನೆನೆಗುದಿಗೆ ಬಿದ್ದ ಕಾಮಗಾರಿಗಳು ಜಾರಿಯಾದವು. ಪ್ರತಿ ತಾಲೂಕಿನಲ್ಲಿಯೂ ಐಟಿಐ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪನೆ, ಹೊಸ ಕಟ್ಟಡ ನಿರ್ಮಾಣ, ಒಳಚರಂಡಿ ನಿರ್ಮಾಣ, ಕುಡಿಯುವ ನೀರಿನ ವ್ಯವಸ್ಥೆ, ಹಳೇ ಸರ್ಕಾರಿ ಕಟ್ಟಡಗಳ ಜಾಗದಲ್ಲಿ ಹೊಸ ಕಟ್ಟಡಗಳು ತಲೆ ಎತ್ತಿದವು. ಶಿವಮೊಗ್ಗದಲ್ಲೊಂದು ವೈದ್ಯಕೀಯ ಕಾಲೇಜು ಮತ್ತು ವಿಮಾನ ನಿಲ್ದಾಣ ನಿರ್ಮಾಣ ಎಂಬ ದಶಕಗಳ ಕನಸನ್ನು ನನಸು ಮಾಡುವ ವಿಚಾರದಲ್ಲಿ ತಮ ಬದ್ಧತೆಯನ್ನು ಮೆರೆದರು. ರಾಜ್ಯ ಮುಖ್ಯಕಾರ್ಯದರ್ಶಿಯವರನ್ನೇ ಜಿಲ್ಲೆಗೆ ಕರೆಸಿ ಎಲ್ಲ ಅಡೆತಡೆಗಳನ್ನು ನಿವಾರಿಸಿದರು. ವಿಮಾನ ನಿಲ್ದಾಣಕ್ಕೆ ಬೇಕಾದ ಸುಮಾರು 800 ಎಕರೆ ಜಾಗದ ಭೂಸ್ವಾದೀನ ಪ್ರಕ್ರಿಯೆಯಲ್ಲಿ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಬಗರ್ ಹುಕುಂ ರೈತರಿಗೂ ಪರಿಹಾರ ನೀಡಿ ರೈತರ ಮನ ಗೆದ್ದರು.

ಶಿವಮೊಗ್ಗ ನಗರಕ್ಕೆ ಬಿಎಸ್‌ವೈ ಕೊಡುಗೆಗಳು



- ರಾಜ್ಯದಲ್ಲೇ ದೊಡ್ಡದಾದ ಖಾಸಗಿ ಬಸ್ ನಿಲ್ದಾಣ ನಿರ್ಮಾಣ
- ಆಧುನಿಕವಾದ ಕೆಎಸ್ಆರ್‌ಟಿಸಿ ವಿವಿಧೋದ್ದೇಶ ಬಸ್ ನಿಲ್ದಾಣ
- ಕೆಎಸ್ಆರ್‌ಟಿಸಿ ಡಿಪೋ
- ಅಮೀರ್‌ಅಹಮದ್ ವೃತ್ತದಲ್ಲಿ ವಿವಿಧೋದ್ದೇಶ ಅತ್ಯಾಧುನಿಕ ಮಾರುಕಟ್ಟೆ ನಿರ್ಮಾತೃ
- ಸರ್ಕಾರಿ ಪಶು ವೈದ್ಯಕೀಯ ಮಹಾವಿದಾಲಯ
- ಕೆಎಸ್ಆರ್‌ಟಿಸಿ ಬಸ್ ನಿಲ್ದಾಣದಿಂದ ಮಿಳಘಟ್ಟ ಮೂಲಕ 100 ಅಡಿ ರಸ್ತೆ
- ಅಗ್ನಿಶಾಮಕ ದಳದ ಕಟ್ಟಡಗಳು ಮತ್ತು ವಸತಿ ಗೃಹಗಳ ನಿರ್ಮಾಣ
- ಸುವರ್ಣ ಕರ್ನಾಟಕ ಸಂಸ್ಕೃತಿ ಭವನ
- ನೆಹರೂ ಕ್ರೀಡಾಂಗಣದ ಅಭಿವೃದ್ಧಿ ಮತ್ತು ಒಳ ಕ್ರೀಡಾಂಗಣ
- ಮಾಚೇನಹಳ್ಳಿಯಲ್ಲಿ ಕೇಂದ್ರ ಕಾರಾಗೃಹ
- ರಾಜ್ಯ ಮಹಿಳಾ ಕಾರಾಗೃಹ
- ವಿಶೇಷ ಕೈಗಾರಿಕಾ ವಲಯ
- ದೇವಕಾತಿಕೊಪ್ಪ-ಸಿದ್ಲೀಪುರ ವಿಶೇಷ ಕೈಗಾರಿಕಾ ವಲಯ
- ಹಳೇ ಜೈಲು ಆವರಣದಲ್ಲಿ ಫ್ರೀಡಂ ಪಾರ್ಕ್
- ಸರ್ಕಾರಿ ಆಯುರ್ವೇದ ಆಸ್ಪತ್ರೆ ಉನ್ನತೀಕರಣ ಮತ್ತು ಮಹಾವಿದ್ಯಾಲಯ
- ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ದೊಡ್ಡಿಬೀಳು ಬಳಿ 100 ಎಕರೆ ಭೂಮಿ ಮೀಸಲು
- ಮೆಗ್ಗಾನ್ ಆಸ್ಪತ್ರೆ ಆವರಣದಲ್ಲಿ ಹೃದ್ರೋಗ ವಿಭಾಗಕ್ಕೆ ಪ್ರತ್ಯೇಕ ಕಟ್ಟಡ
- ಮೆಗ್ಗಾನ್ ಆಸ್ಪತ್ರೆ ಕಟ್ಟಡದಲ್ಲಿ ಮತ್ತೊಂದು ಅಂತಸ್ತು ವಿಸ್ತರಣೆ
- ಸರ್ಕಾರಿ ವೈದ್ಯಕೀಯ ವಿಜ್ಞಾನಗಳ ಕಾಲೇಜು ಅಭಿವೃದ್ಧಿ
- ನಗರದೊಳಗೆ ಬಿ.ಎಚ್.ರಸ್ತೆ, ಅಮೀರ್‌ಅಹಮದ್, ಶಿವಪ್ಪನಾಯಕ ವೃತ್ತ ಅಭಿವೃದ್ಧಿ
- ಹೊನ್ನಾಳಿ ರಸ್ತೆಯಲ್ಲಿ ರೈಲ್ವೆ ಮೇಲ್ಸೇತುವೆ
- ಜಿಲ್ಲಾ ತರಬೇತಿ ಕೇಂದ್ರಕ್ಕೆ ನೂತನ ಕಟ್ಟಡ ನಿರ್ಮಾಣ
- ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಕೇಂದ್ರಕ್ಕೆ ನೂತನ ಕಟ್ಟಡ
- 100 ಅಡಿ ವರ್ತುಲ ರಸ್ತೆ ಅಭಿವೃದ್ಧಿ
- ತ್ಯಾವರೆಕೊಪ್ಪ ಹುಲಿ-ಸಿಂಹಧಾಮಕ್ಕೆ ನೀರು ಸರಬರಾಜು
- ತುಂಗಾ ನದಿಗೆ ಪ್ರವಾಹ ತಡೆಗೋಡೆ
- ಶಿವಮೊಗ್ಗ ಕೃಷಿ ವಿಶ್ವವಿದ್ಯಾಲಯ
- ಕೃಷಿ ವಿಶ್ವವಿದ್ಯಾಲಯಕ್ಕೆ ಇರುವಕ್ಕಿಯಲ್ಲಿ ನೂತನ ಕ್ಯಾಂಪಸ್
- ಶಿವಮೊಗ್ಗ- ತಾಳಗುಪ್ಪಕ್ಕೆ ಬ್ರಾಡ್ ಗೇಜ್ ರೈಲ್ವೆ ಮಾರ್ಗ
- ಭದ್ರಾ ಕಾಲುವೆಗಳ ಆಧುನೀಕರಣ
- ಶಿವಮೊಗ್ಗ-ಹಾನಗಲ್ ರಸ್ತೆ ನಿರ್ಮಾಣ
- ನಗರದಲ್ಲಿ ತುಂಗಾ ನದಿಗೆ ಸೇತುವೆ ನಿರ್ಮಾಣ
- ಹೊಳಲೂರು ಬಳಿ ತುಂಗಾಭದ್ರಾ ನದಿಗೆ ಸೇತುವೆ
- ಶಿವಮೊಗ್ಗ ನಗರದ ಹೊರವರ್ತುಲ ರಸ್ತೆ ನಿರ್ಮಾಣಕ್ಕೆ ಕ್ರಮ
- ಮಾಚೇನಹಳ್ಳಿಯಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್
- ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ಖಾಸಗಿ ಸಂಸ್ಥೆ ಸಹಭಾಗಿತ್ವದಲ್ಲಿ ಜವಳಿ ಪಾರ್ಕ್
- ಶಿವಮೊಗ್ಗ ನಗರದ ಒಳಚರಂಡಿ ಯೋಜನೆ
- ಲೋಕೋಪಯೋಗಿ ಇಲಾಖೆ ಕಚೇರಿ ಸಂಕೀರ್ಣ
- ಸೋಗಾನೆಯಲ್ಲಿ ವಿಮಾನ ನಿಲ್ದಾಣ
- ನೆಹರೂ ರಸ್ತೆ ಅಭಿವೃದ್ಧಿ
- ಶಂಕರಮಠ ರಸ್ತೆ ಅಭಿವೃದ್ಧಿ
- ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜಿಗೆ ಹೆಚ್ಚುವರಿ ಕಟ್ಟಡ
- ಶಿವಮೊಗ್ಗ ನಗರದಲ್ಲಿ ಲೋಕೋಪಯೋಗಿ ಇಲಾಖೆ ನೌಕರರಿಗೆ ವಸತಿ ಗೃಹಗಳ ಸಂಕೀರ್ಣ
- ಪ್ರವಾಸಿ ಮಂದಿರದ ಸಿಬ್ಬಂದಿಗೆ ವಸತಿ ಗೃಹಗಳ ಸಂಕೀರ್ಣ
- ಶಿವಮೊಗ್ಗ ನಗರದ ಕುವೆಂಪು ರಸ್ತೆಯಲ್ಲಿ ನ್ಯಾಯಾಧೀಶರಿಗೆ ವಸತಿ ಗೃಹ
- ಸರ್ಕ್ಯೂಟ್ ಹೌಸ್ ಆವರಣದಲ್ಲಿ ವಿವಿಐಪಿ ಅತಿಥಿ ಗೃಹ
- ಸರ್ಕ್ಯೂಟ್ ಹೌಸ್ ಆವರಣದಲ್ಲಿ ಹೆಲಿಪ್ಯಾಡ್
- ಸಾರಿಗೆ ಇಲಾಖೆ ಕಚೇರಿ ಮತ್ತು ಟ್ರ್ಯಾಕ್ ನಿರ್ಮಾಣ
- ಡಿಸಿ ಕಚೇರಿ ಸಂಕೀರ್ಣ

ಶಿಕಾರಿಪುರ ಪಟ್ಟಣದ ಅಭಿವೃದ್ಧಿ

- ಪಟ್ಟಣದಲ್ಲಿ ರಂಗಮಂದಿರ ನಿರ್ಮಾಣ
- ತಾಲೂಕು ಕಚೇರಿ ಕಟ್ಟಡಗಳ ಸಂಕೀರ್ಣ ನಿರ್ಮಾಣ
- ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣ
- ಸರ್ಕಾರಿ ಕೈಗಾರಿಕೆ ತರಬೇತಿ ಸಂಸ್ಥೆ ಮತ್ತು ಕಾಲೇಜು ಕಟ್ಟಡ
- ಉದ್ಯಾನವನ ಅಭಿವೃದ್ಧಿ
- ಪಶು ಆಹಾರ ಘಟಕ
- ಶಿಕಾರಿಪುರ ನಗರದ ಒಳಚರಂಡಿ ಯೋಜನೆ
- ಅತಿಥಿ ಗೃಹಗಳ ನಿರ್ಮಾಣ
- ಪ್ರವಾಸಿ ಮಂದಿರದಲ್ಲಿ ವಿವಿಐಪಿ ಅತಿಥಿ ಗೃಹ
- ಅಗ್ನಿಶಾಮಕ ಠಾಣೆ ಮತ್ತು ವಸತಿಗೃಹ
- ಸರ್ಕಾರಿ ನೌಕರರ ವಸತಿ ಗೃಹ
- ಲೋಕೋಪಯೋಗಿ ಇಲಾಖೆ ಸಿಬ್ಬಂದಿಗೆ ವಸತಿ ಗೃಹ
- ಶಿರಾಳಕೊಪ್ಪದಲ್ಲಿ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಕಾಲೇಜು, ಹಾಸ್ಟೆಲ್
- ಶಿರಾಳಕೊಪ್ಪದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ

ಇತರೆ ತಾಲೂಕುಗಳಲ್ಲಿ...

ಸಾಗರ:-

- ಪಟ್ಟಣದಲ್ಲಿ ಸರ್ಕಾರಿ ಪಿಯು ಕಾಲೇಜು ಕಟ್ಟಡಕ್ಕೆ ಹೆಚ್ಚುವರಿ ಕೊಠಡಿಗಳು
- ಸರ್ಕಾರಿ ಪಿಯು ಕಾಲೇಜು ಕಟ್ಟಡ
- ತುಮರಿಯಲ್ಲಿ ಸರ್ಕಾರಿ ಪಿಯು ಕಾಲೇಜು ಕಟ್ಟಡ ನಿರ್ಮಾಣ
- ಬರೂರು ಗ್ರಾಮದಲ್ಲಿ ಸರ್ಕಾರಿ ಪಿಯು ಕಾಲೇಜು
- ಲಿಂಗನಮಕ್ಕಿ ಹಿನ್ನೀರಿನಲ್ಲಿ ಅಂಬಾರಗೋಡ್ಲು- ಕಳಸವಳ್ಳಿ ಸೇತುವೆ
- ನಗರದ ಕುಡಿಯುವ ನೀರು ಹಾಗೂ ಒಳಚರಂಡಿ ಯೋಜನೆ
- ಪಟ್ಟಣದ ಸರ್ಕಾರಿ ನೌಕರರ ವಸತಿ ಗೃಹಗಳ ನಿರ್ಮಾಣ
- ಪಟ್ಟಣದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಮತ್ತು ಟ್ರ್ಯಾಕ್

ಹೊಸನಗರ:-

- ಹೊಸನಗರದಲ್ಲಿ ಮಿನಿ ವಿಧಾನಸೌಧ ನಿರ್ಮಾಣ
- ಚಕ್ರಾ ನಗರಲ್ಲಿ ವನ್ಯಜೀವಿ ಸಂಶೋಧನ ಕೇಂದ್ರ
- ಲಿಂಗನಮಕ್ಕಿ ಹಿನ್ನೀರು ಪಟಗುಪ್ಪ ಸೇತುವೆ
- ಕೊಡಚಾದ್ರಿ ಬೆಟ್ಟಕ್ಕೆ ಸಂಪರ್ಕ ರಸ್ತೆ

ಭದ್ರಾವತಿ:-

- ಭದ್ರಾವತಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣ
- ಭದ್ರಾವತಿ ನಗರದ ಒಳಚರಂಡಿ ಯೋಜನೆ
- ಭದ್ರಾವತಿ ವಿಐಎಸ್ಎಸ್ಜೆ ಸರಕಾರಿ ಪಾಲಿಟೆಕ್ನಿಕ್‌ಗೆ ವಿದ್ಯಾರ್ಥಿ ನಿಲಯ

ಸೊರಬ: -

- ಸೊರಬದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಕಟ್ಟಡಕ್ಕೆ ಕಾರ್ಯಗಾರ, ಗ್ರಂಥಾಲಯ ಹಾಗೂ ಕಾಂಪೌಂಡ್ ನಿರ್ಮಾಣ
- ಆನವಟ್ಟಿಯಲ್ಲಿ ಪ್ರಥಮ ದರ್ಜೆ ಕಾಲೇಜು ಕಟ್ಟಡ
- ಆನವಟ್ಟಿಯಲ್ಲಿ ಟಿಸಿಎಚ್ ಕಾಲೇಜು ಕಟ್ಟಡದ ಉಳಿಕೆ ಕಾಮಗಾರಿ

ತೀರ್ಥಹಳ್ಳಿ:-

- ತೀರ್ಥಹಳ್ಳಿ ಪಟ್ಟಣದಲ್ಲಿ ಪ್ರಥಮ ದರ್ಜೆ ಕಾಲೇಜು ಕಟ್ಟಡ


ಆಯುರ್ವೇದ ಕಾಲೇಜು



ಕೆಎಸ್ಆರ್‌ಟಿಸಿ ಬಸ್ ಸ್ಟ್ಯಾಂಡ್


ಶಿವಮೊಗ್ಗ ಸರ್ಕಾರಿ ಮೆಡಿಕಲ್ ಕಾಲೇಜು


ಅಗಲೀಕರಣಗೊಂಡ ಬಿ.ಹೆಚ್. ರಸ್ತೆ

ಗರಿಷ್ಠ 36°c | ಕನಿಷ್ಠ 23°c

ಸುದ್ದಿ ಸಿಂಚನ

ವಾಟ್ಸಾಪ್ ಮೂಲಕ ದೂರು ದಾಖಲಿಸಲು ಬೆಸ್ಕಾಂ ಮನವಿ

ಬೆಂಗಳೂರು: ವಿದ್ಯುತ್ ಸಂಬಂಧಿತ ದೂರುಗಳನ್ನು ವಾಟ್ಸ್‌ಪ್ ಸಹಾಯವಾಣಿ ಸಂಖ್ಯೆಗಳು ಹಾಗೂ ಬೆಸ್ಕಾಂ ಸಾಮಾಜಿಕ ಜಾಲತಾಣಗಳ ಮೂಲಕ ದಾಖಲಿಸಲು ಗ್ರಾಹಕರಿಗೆ ಬೆಸ್ಕಾಂ ಮನವಿ ಮಾಡಿದೆ. ಬೆಸ್ಕಾಂನ 1912 ಸಹಾಯವಾಣಿ ಸಂಖ್ಯೆಯ ಸಂಪರ್ಕ ಸಾಧ್ಯವಾಗದಿದ್ದರೆ, 11 ವಾಟ್ಸ್‌ಪ್ ಸಹಾಯವಾಣಿ ಸಂಖ್ಯೆಗಳು. ಸಾಮಾಜಿಕ ಜಾಲತಾಣಗಳಾದ ನಮ್ಮ ಬೆಸ್ಕಾಂ ಫೇಸ್‌ಬುಕ್ ಖಾತೆ: https://www.facebook.com/bescomblr ನಮ್ಮ ಬೆಸ್ಕಾಂ ಎಕ್ಸ್ (ಟ್ವಿಟರ್) ಖಾತೆ: https://x.com/NammaBESCOM ದೂರು ದಾಖಲಿಸಲು ಕೋರಲಾಗಿದೆ. ಚಿತ್ರದುರ್ಗ ಜಿಲ್ಲೆ : 8277884020 ಮತ್ತು ದಾವಣಗೆರೆ ಜಿಲ್ಲೆ : 8277884021. ಗ್ರಾಹಕರು ವಾಟ್ಸ್‌ಪ್ ಸಹಾಯವಾಣಿ ಸಂಖ್ಯೆಗಳಿಗೆ ಸಂದೇಶದ ಜೊತೆಗೆ ವಿದ್ಯುತ್ ಸಂಬಂಧಿತ ದೂರಗಳ ಫೋಟೋ ಹಾಗೂ ವಿಡಿಯೋಗಳನ್ನು ಸಹ ಕಳುಹಿಸಬಹುದಾಗಿದೆ.

ಯಾದವ ಗೊಲ್ಲರ ಸಂಘಕ್ಕೆ ಚುನಾವಣೆ

ಚಿತ್ರದುರ್ಗ: ಜಿಲ್ಲಾ ಯಾದವ ಗೊಲ್ಲರ ಸಂಘದ ಆಡಳಿತ ಮಂಡಳಿಯ 15 ಸ್ಥಾನಗಳಿಗೆ ಚುನಾವಣೆ ಘೋಷಣೆಯಾಗಿದ್ದು, ಮೇ 17ರಂದು ಮತದಾನ ನಡೆಯಲಿದೆ ಎಂದು ಜಿಲ್ಲಾ ಯಾದವ ಗೊಲ್ಲರ ಸಹಕಾರ ಸಂಘದ ಚುನಾವಣಾಧಿಕಾರಿ ಹಾಗೂ ಚಿತ್ರದುರ್ಗ ತಹಶೀಲ್ದಾರ್‌ಬಿ.ಎಂ.ಗೋವಿಂದರಾಜು ತಿಳಿಸಿದ್ದಾರೆ. ಸಂಘದ ಬೈಲಾ ಪ್ರಕಾರ 15 ಸ್ಥಾನಗಳಿಗೆ ಚುನಾವಣೆ ಮೇ 17ರಂದು ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪ್ರೌಢಶಾಲೆ ಕಟ್ಟಡದ ಆವರಣದಲ್ಲಿ ನಡೆಸಲಾಗುವುದು. ಚುನಾವಣೆಯ ಉಳಿದ ಪ್ರಕ್ರಿಯೆಗಳನ್ನು ಚುನಾವಣಾಧಿಕಾರಿಗಳ ಕಾರ್ಯಾಲಯ, ತಾಲ್ಲೂಕು ಕಚೇರಿ ಸಭಾಂಗಣ, ಚಿತ್ರದುರ್ಗ ಇಲ್ಲಿ ಜರುಗಿಸಲಾಗುವುದು. ಈಗಾಗಲೇ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಿದೆ. ಮೇ 8 ರವರೆಗೆ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಚಿತ್ರದುರ್ಗ ತಾಲ್ಲೂಕು ಕಛೇರಿಯಲ್ಲಿ ನಾಮಪತ್ರ ಸಲ್ಲಿಸಬಹುದಾಗಿದೆ. ಮೇ 9 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ನಾಮಪತ್ರ ಪರಿಶೀಲನೆ ನಂತರ ಕ್ರಮಬದ್ಧವಾಗಿ ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆಯನ್ನು ಪ್ರಕಟಿಸಲಾಗುವುದು. ಮೇ 11ರ ಮಧ್ಯಾಹ್ನ 3 ಗಂಟೆಯೊಳಗೆ ನಾಮಪತ್ರ ವಾಪಸ್ ಪಡೆಯಲು ಅವಕಾಶವಿದೆ. ಅಂದೇ ಮಧ್ಯಾಹ್ನ 3 ಗಂಟೆಯ ನಂತರ ಚುನಾವಣಾ ಚಿಹ್ನೆಗಳನ್ನು ಹಂಚಿಕೆ ಮಾಡಿ ಅಂತಿಮ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುವುದು. ಮೇ.13ರಂದು ಸಂಜೆ 4ಕ್ಕೆ ಮಾದರಿ ಮತಪತ್ರದ ನಮೂನೆ ಪ್ರಕಟಣೆ ಮಾಡಲಾಗುವುದು. ಮೇ 17ರಂದು ಭಾನುವಾರ ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಚಿತ್ರದುರ್ಗ ನಗರಸಭೆ ಮುಂಭಾಗದ ಬಿ.ಡಿ. ರಸ್ತೆಯಲ್ಲಿರುವ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಮತದಾನ ನಡೆಯಲಿದೆ.

ದುರ್ಗೋತ್ಸವ ಆಚರಣೆಗೆ ಸಚಿವ ಶಿವರಾಜ್‌ಗೆ ಮನವಿ

ಚಿತ್ರದುರ್ಗ: ದುರ್ಗೋತ್ಸವ ವನ್ನು ಮರು ಪ್ರಾರಂಭಿಸಲು ಅಗತ್ಯ ಕ್ರಮಗಳನ್ನು ಕೈಗೊಂಡು, ಸರ್ಕಾರದ ವತಿಯಿಂದ ಸೂಕ್ತ ಅನುದಾನ ಮಂಜೂರು ಮಾಡುವಂತೆ ಪಪ್ಪಿಸ್ ಸ್ಟೂಡೆಂಟ್ ವಿಂಗ್ ತಂಡದವರು ಕನ್ನಡ ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ್ ತಂಗಡಿಗೆ ಅವರಿಗೆ ಮನವಿ ಮಾಡಿದ್ದಾರೆ. ಚಿತ್ರದುರ್ಗ ಜಿಲ್ಲೆ ತನ್ನ ವೈಭವಮಯ ಇತಿಹಾಸ, ಕೋಟೆಗಳು ಹಾಗೂ ಸಂಸ್ಕೃತಿಗೆ ಪ್ರಸಿದ್ಧವಾಗಿದೆ. ಇಲ್ಲಿ ನಡೆಯುತ್ತಿದ್ದ ದುರ್ಗೋತ್ಸವವು ಹಂಪಿ ಉತ್ಸವಕ್ಕಿಂತಲೂ ಹಳೆಯ ಪರಂಪರೆ ಹೊಂದಿದೆ . ಈ ಉತ್ಸವವು ಜಿಲ್ಲೆ ಜನತೆಗೆ ಮಾತ್ರವಲ್ಲದೆ, ರಾಜ್ಯದ ಸಂಸ್ಕೃತಿ ವೈಭವವನ್ನು ಪ್ರತಿಬಿಂಬಿಸುವ ಮಹತ್ವದ ಕಾರ್ಯಕ್ರಮವಾಗಿತ್ತು. 2006ರಲ್ಲಿ ದುರ್ಗೋತ್ಸವವು ಅತ್ಯಂತ ಸಂಭ್ರಮದಿಂದ ನಡೆದಿದ್ದು, ಮೂರು ವರ್ಷಕ್ಕೊಮ್ಮೆ ಆಚರಿಸಲಾಗುತ್ತಿದ್ದ ಈ ಉತ್ಸವವು ನಂತರ ನಾನಾ ಕಾರಣಗಳಿಂದ ಸ್ಥಗಿತ ಗೊಂಡಿದೆ. ಉತ್ಸವವನ್ನು ಮತ್ತೆ ಆರಂಭಿಸುವಂತೆ ಪಪ್ಪಿಸ್ ಸ್ಟೂಡೆಂಟ್ ವಿಂಗ್ ಸದಸ್ಯರು ಸಚಿವರಿಗೆ ಮನವರಿಕೆ ಮಾಡಿದರು. ಶಾಸಕ ಕೆ.ಸಿ ವೀರೇಂದ್ರ ಪಪ್ಪಿ, ಪಪ್ಪಿಸ್ ಸ್ಟೂಡೆಂಟ್ ವಿಂಗ್ ಅಧ್ಯಕ್ಷ ರವಿ ಚಿನ್ನು, ಕಾರ್ಯದರ್ಶಿ ಸಲೀಂ, ಸದಸ್ಯರಾದ ನಿಜಾಂ ಮತ್ತು ದರ್ಶನ್ ಇದ್ದರು.



ಚಿತ್ರದುರ್ಗಕ್ಕೆ ಆಗಮಿಸಿದ ಸೋಮನಾಥ ಜ್ಯೋತಿರ್ಲಿಂಗವನ್ನು ಐಯಪ್ಪ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಸಾರ್ವಜನಿಕರ ದರ್ಶನಕ್ಕೆ ಇಡಲಾಗಿದ್ದು ಆಯೋಜಕರಾದ ಮಹಂತೇಶ್, ಶ್ರವಣ್ ಕುಮಾರ್, ನಗರಸಭ ಮಾಜಿ ಸದಸ್ಯ ಸುರೇಶ್, ಆರ್ಟ್ ಆಫ್ ಲಿವಿಂಗ ಸಂಸ್ಥೆ ಮುಂಜುನಾಥ್, ನಾಗರಾಜ್ ಇತರರಿದ್ದರು.



ಚಿತ್ರದುರ್ಗ ಉತ್ಸವವವನ್ನು ಮರು ಪ್ರಾರಂಭಿಸಲು ಅಗತ್ಯ ಕ್ರಮಗಳನ್ನು ಕೈಗೊಂಡು, ಸರ್ಕಾರದಿಂದ ಸೂಕ್ತ ಅನುದಾನ ಮಂಜೂರು ಮಾಡುವಂತೆ ಪಪ್ಪಿಸ್ ಸ್ಟೂಡೆಂಟ್ ವಿಂಗ್ ತಂಡದವರು ಕನ್ನಡ ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಿ ಅವರಿಗೆ ಮನವಿ ಮಾಡಿದರು. ಶಾಸಕ ವೀರೇಂದ್ರ ಪಪ್ಪಿ ಇದ್ದರು.



ಬಸವಕುಮಾರ ಶ್ರೀಗೆ ಆಹ್ವಾನ

ಚಿತ್ರದುರ್ಗ: ಮಾಜಿ ಮುಖ್ಯಮಂತ್ರಿ, ದಣಿವರಿಯದ ನಾಯಕ ಬಿ.ಎಸ್.ಯಡಿಯೂರಪ್ಪನವರು ರಾಜಕಾರಣಕ್ಕೆ ಬಂದು 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವ ಕಾರ್ಯ ಕ್ರಮಕ್ಕೆ ತಾವು ಪಾಲ್ಗೊಳ್ಳುವಂತೆ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ವಿಜಯೇಂದ್ರ ಮುರುಘಾ ಮಠದ ಆಡಳಿತ ಮಂಡಳಿ ಸದಸ್ಯ ಡಾ.ಬಸವಕುಮಾರ ಸ್ವಾಮೀಜಿ ಅವರಲ್ಲಿ ಮನವಿ ಮಾಡಿದರು. ಈ ಸಂಬಂಧ ಭಾನುವಾರ ಮಠಕ್ಕೆ ತೆರಳಿ ಮನವಿ ಮಾಡಿದ ವಿಜಯೇಂದ್ರ, ತುಂಬಾ ಅಪರೂಪದ ಕಾರ್ಯಕ್ರಮ ಇದಾಗಿದ್ದು ಪಕ್ಷಾತೀತವಾಗಿ ಸಂಘಟಿಸಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ಹರಗುರು ಚರಮೂರ್ತಿ ಆಗಮಿಸಲಿದ್ದಾರೆ. ತಾವುಗಳು ಪಾಲ್ಗೊಂಡು ಕಾರ್ಯಕ್ರಮಕ್ಕೆ ಶೋಭೆ ತರುವಂತೆ ವಿನಂತಿಸಿದರು. ವೀರಶೈವ ಬ್ಯಾಂಕ್ ಅಧ್ಯಕ್ಷ ಪಟೇಲ್ ಶಿವಕುಮಾರ್, ವಿಪ ಮಾಜಿ ಸದಸ್ಯ ವೈ.ಎ.ನಾರಾಯಣಸ್ವಾಮಿ ಇದ್ದರು.

ಶೋಷಿತರಿಗೆ ದನಿಯಾಗಿ ಬಿಎಸ್‌ವೈ ಕಾರ್ಯನಿರ್ವಹಣೆ

ಪೂರ್ವಭಾವಿ ಸಭೆಯಲ್ಲಿ ಸಂಸದ ಗೋವಿಂದ ಕಾರಜೋಳ ಬಣ್ಣನೆ | 9ರಂದು ಬಿಎಸ್‌ವೈ ಅಭಿಮಾನೋತ್ಸವ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಬಿ.ಎಸ್. ಯಡಿಯೂರಪ್ಪ ಅವರದು ವಿಶಿಷ್ಟ ಹೆಜ್ಜೆಗುರುತುಗಳ ಮೂಡಿಸಿದ್ದು ಶೋಷಿತರು, ಹಿಂದುಳಿದವರ ದನಿಯಾಗಿ ಕಾರ್ಯನಿರ್ವಹಿಸಿದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.

ಮಾಜಿಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷದ ರಾಜಕೀಯ ಜೀವನದ ಹಿನ್ನಲೆಯಲ್ಲಿ ಮೇ.9ರಂದು ಚಿತ್ರದುರ್ಗ ನಗರದ ಹೊರವಲಯದ ಶ್ರೀ ಮಾದರ ಚೆನ್ನಯ್ಯ ಗುರುಪೀಠದಪಕ್ಕದಲ್ಲಿರುವಮೈದಾನದಲ್ಲಿನಡೆಸಲು ಉದ್ದೇಶಿಸಿರುವ ಅಭಿಮಾನೋತ್ಸವ ಕಾರ್ಯಕ್ರಮದ ಪೂರ್ವಭಾವಿಯಾಗಿ ಭಾನುವಾರ ಚಿತ್ರದುರ್ಗ ವಿಧಾನಸಭಾಕ್ಷೇತ್ರದವ್ಯಾಪ್ತಿಯಲ್ಲಿಬರುವವಾರ್ಡ್, ಗ್ರಾಮಾಂತರ ಪ್ರದೇಶದ ಕಾರ್ಯಕರ್ತರು ಮತ್ತು ಧುರೀಣರ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹೋರಾಟದ ಮೂಲಕವೇ ಪಕ್ಷ ಸಂಘಟಿಸಿ ಅಧಿಕಾರಕ್ಕೆ ಬಂದ ಯಡಿಯೂರಪ್ಪ ಎಂದೂ ಕೂಡಾ ಅದೃಷ್ಟದ ಮುಖ್ಯಮಂತ್ರಿ ಆಗಲಿಲ್ಲವೆಂದರು.

ಬಿಎಸ್‌ವೈ ಎಂದರೆ ಹೋರಾಟ ಎಂಬ ಮನೋಭಾವ ಎಲ್ಲರಲ್ಲೂ ಮೂಡಿದೆ. ಜನ ಸೇವೆಗಾಗಿಯೇ ತಮ್ಮ ಜೀವನವನ್ನೇ ಮುಡುಪಾಗಿ ಇಟ್ಟಿದ್ದಾರೆ. ತಮ್ಮ ಅಧಿಕಾರದ ಅವಧಿಯಲ್ಲಿ ದಲಿತರು, ಪರಿಶಿಷ್ಟ ಜಾತಿ ಮತ್ತು ಪಂಗಡ, ಮಹಿಳೆಯರಿಗೆ ಧ್ವನಿಯಾಗಿ ಕೆಲಸವನ್ನು ಮಾಡಿದ್ದಾರೆ. ನಾಡಿಗೆ ಯಡಿಯೂರಪ್ಪ ನೀಡಿದ ಕೊಡುಗೆಗೆ ಎಲ್ಲ ವರ್ಗದವರೂ ಮೆಚ್ಚುಗೆ ವ್ಯಕ್ತಪಡಿಸುತ್ತಾರೆ. ಇದಕ್ಕಾಗಿ ಅರ್ಥಪೂರ್ಣ. ಭವ್ಯ ಕಾರ್ಯಕ್ರಮ ನಡೆಸುತ್ತಿದ್ದೇವೆ. ರಾಜ್ಯದ ಮೂಲೆ ಮೂಲೆಗಳಿಂದ ಅಭಿಮಾನಿಗಳು ಲಕ್ಷಾಂತರ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಬರಲಿದ್ದಾರೆ. ಒಂದು ಐತಿಹಾಸಿಕ ಕಾರ್ಯಕ್ರಮ ಇದಾಗಲಿದೆ ಎಂದರು.



ಚಿತ್ರದುರ್ಗದ ವಾಲ್ಮೀಕಿ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಬಿಎಸ್‌ವೈ ಅಭಿಮಾನೋತ್ಸವದ ಪೂರ್ವ ಸಿದ್ದತಾ ಸಭೆಯನ್ನು ಸಂಸದ ಗೋವಿಂದ ಕಾರಜೋಳ ಉದ್ಘಾಟಿಸಿದರು.

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಅಧಿಕಾರ ಇದ್ದಾಗ ಅಭಿಮಾನೋತ್ಸವ, ಸಂಭ್ರಮೋತ್ಸವ ಆಚರಣೆ ಮಾಡುವುದುಸಾಮಾನ್ಯ. ಆದರೆಯಾವುದೇಅಧಿಕಾರ ಇಲ್ಲದೆ ಇದ್ದಾಗ ಜನರು ತೋರುವ ಅಭಿಮಾನ ಮುಖ್ಯವಾಗುತ್ತದೆ. ತಮ್ಮ ಕಷ್ಟಗಳಿಗೆನೆರವನ್ನು ನೀಡಿದ ವ್ಯಕ್ತಿಗೆ ಜನತೆ ಅಭಿಮಾನ ತೋರಿಸುವುದರ ಮೂಲಕ ಮೇ 9 ರಂದು ಸಂಭ್ರಮಿಸಲಿದ್ದಾರೆ ಎಂದರು.

ಯಡಿಯೂರಪ್ಪ ಅವರು ಜನ ಸೇವೆಗಾಗಿಯೇ ತಮ್ಮ ಜೀವನನ್ನೇಮುಡುಪಾಗಿಇಟ್ಟಿದ್ದಾರೆ. ದಲಿತರು, ಪರಿಶಿಷ್ಟ ಜಾತಿ ಮತ್ತು ಪಂಗಡ, ಮಹಿಳೆಯರಿಗೆ ಧ್ವನಿಯಾಗಿ ಕೆಲಸವನ್ನು ಮಾಡಿದ್ದಾರೆ. ಅಧಿಕಾರಕ್ಕಾಗಿ ಎಂದು ಹೋರಾಟ ಮಾಡಲಿಲ್ಲ, ಬಡವರ ಕಣ್ಣಿರು ಒರೆಸುವ ಸಲುವಾಗಿ ಕೆಲಸವನ್ನು ಮಾಡಿದ್ದಾರೆ. ಜನರ ಪ್ರೀತಿ ವಿಶ್ವಾಸದ ಮೂಲಕ ಅಧಿಕಾರ ಹಿಡಿಯುವ ಪ್ರಯತ್ನ ಮಾಡಿದ್ದಾರೆ ಎಂದರು.

ಯಡಿಯೂರಪ್ಪರವರು ಕಡಿಮೆ ಅಧಿಯಲ್ಲಿ ಮುಖ್ಯಮಂತ್ರಿಗಳಾಗಿದ್ದರೂ ಸಹಾ ಉತ್ತಮವಾದ ಕೆಲಸವನ್ನುಮಾಡಿದ್ದಾರೆ. ಇದರಿಂದಲಕ್ಷಾಂತರಜನತೆ ಉಪಯೋಗವಾಗಿದೆ. ಸ್ಮರಣೆ ಮಾಡುವ ಕಾರ್ಯಕ್ರಮ ಇದಾಗಿದೆ. ಯಡಿಯೂರಪ್ಪರವರ ಅಭಿಮಾನಿಗಳು ರಾಜ್ಯದಲ್ಲಿ ಮಾತ್ರವಲ್ಲದೆ ಹೊರ ದೇಶದಲ್ಲಿಯೂಇದ್ದಾರೆ. ದುಬೈಯಿಂದದೂರವಾಣಿ ಮೂಲಕ ಕರೆ ಮಾಡಿ ನಾವು ಕಾರ್ಯಕ್ರಮದಲ್ಲಿ ಭಾಗಿಯಾಗುವುದಾಗಿ ತಿಳಿಸಿದ್ದಾರೆ ಎಂದರು.

ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಮಾತನಾಡಿ, ಮೇ 9ರಂದು ನಡೆಯಲಿರುವ ಅಭಿಮಾನೋತ್ಸವ ಕಾರ್ಯಕ್ರಮನಮ್ಮ ಚಿತ್ರದುರ್ಗದಮಾರ್ಯದೆಯ ಪ್ರಶ್ನೆಯಾಗಿದೆ. ರಾಜ್ಯದ ವಿವಿಧ ಮೂಲೆಗಳಿಂದ ಆಗಮಿಸುವ ಯಡಿಯೂರಪ್ಪ ಅಭಿಮಾನಿಗಳಿಗೆ ಯಾವ ತೊಂದರೆಯಾಗದಂತೆ ಎಚ್ಚರವಹಿಸಿ ಆತಿಥ್ಯ ನೀಡುವಜವಾಬ್ದಾರಿನಮ್ಮ ಮೇಲಿದೆ. ಕಾರ್ಯಕ್ರಮಕ್ಕೆ ಸುಮಾರು 10 ಲಕ್ಷ ಜನ ಸೇರುವ ನೀರೀಕ್ಷೆ ಇದೆ. ಈ ಹಿನ್ನಲೆಯಲ್ಲಿ ಯಾವುದೇ ಲೋಪವಾಗದಂತೆ ಎಚ್ಚರವನ್ನು ವಹಿಸಬೇಕಿದೆ ಎಂದರು.

ವಿಧಾನ ಪರಿಷತ್ ಮಾಜಿ ಸದಸ್ಯ ವೈ.ಎ.ನಾರಾಯಣಸ್ವಾಮಿ, ಲಿ ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ.ಕುಮಾರಸ್ವಾಮಿ, ಖನಿಜ ನಿಮದ ಮಾಜಿ ಅಧ್ಯಕ್ಷ ಲಿಂಗಮೂರ್ತಿ, ಪ್ರೀತಂ ಗೌಡ್ರು, ಅಂಬಿಕಾ ಹುಲಿರಾಯ್ಕರ್, ಹನುಮಂತೇಗೌಡ, ವಿಭಾಗಸಹಾ ಪ್ರಬಾರಿ ಎ.ಮುರಳಿ, ಜಿಲ್ಲಾಪ್ರಧಾನಕಾರ್ಯದರ್ಶಿ ಮಾಧುರಿ ಗೀರೀಶ್, ಡಾ.ಪಿ.ಎಂ.ಮಂಜುನಾಥ್, ವೆಂಕಟೇಶ್ ಯಾದವ್, ಮೋಹನ್‌ಕುಮಾರ್, ಉಪಾಧ್ಯಕ್ಷ ಡಾ,ಸಿದ್ದಾರ್ಥ, ವೀರಶೈವ ಬ್ಯಾಂಕ್ ಅಧ್ಯಕ್ಷ ಪಟೇಲ್ ಶಿವಕುಮಾರ್, ಮಾಜಿ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ, ಎಸ್.ಸಿ ಮೋರ್ಚಾದ ಅಧ್ಯಕ್ಷ ಪರಶುರಾಮ್, ನಂದಿ ನಾಗರಾಜ್, ರಾಜ್ಯ ರೈತ ಮೋರ್ಚಾದ ಮಲ್ಲಿಕಾರ್ಜನ್, ಕೂಡಾದ ಮಾಜಿ ಅಧ್ಯಕ್ಷ ಸುರೇಶ್ ಸಿದ್ದಾಪುರ, ದಗ್ಗೆ ಶಿವಪ್ರಕಾಶ್, ಭಾರ್ಗವಿ ದ್ರಾವಿಡ್, ಶ್ಯಾಮಲಾ ಶಿವಪ್ರಕಾಶ್, ರೇಖಾ, ಸಹ ವಕ್ತಾರ ಚಾಲುಕ್ಯ ನವೀನ್, ಎಸ್.ಸಿ.ಮೋರ್ಚಾದ ಅಧ್ಯಕ್ಷ ಪರಶುರಾಮ್ ಇದ್ದರು.

ಅಂಬೇಡ್ಕರ್‌ರನ್ನು ಜಾತಿಗೆ ಸೀಮಿತ ಮಾಡುವ ಮನಸ್ಥಿತಿ ಬದಲಾಗಲಿ

ಮಾಜಿ ಸಚಿವ ಬಿ.ಶ್ರೀರಾಮುಲು ಅಭಿಮತ | ಅಂಬೇಡ್ಕರ್ ಪುತ್ಥಳಿ ಅನಾವರಣ

ಮೊಳಕಾಲ್ಮೂರು: ಸಂವಿಧಾನದಮೂಲಕ ಸರ್ವರಿಗೂ ಸಾಮಾಜಿಕ ನ್ಯಾಯ ನೀಡಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನುಕೇವಲಒಂದುಜಾತಿಗೆಸೀಮಿತಗೊಳಿಸುವ ಮನಸ್ಥಿತಿ ಗಳು ಬದಲಾಗಬೇಕೆಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದರು.

ತಾಲೂಕಿನ ದೇವಸಮುದ್ರ ಗ್ರಾಮದಲ್ಲಿಕರ್ನಾಟಕದಲಿತಸಂಘರ್ಷ ಸಮಿತಿಯ ವತಿಯಿಂದ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಪುತ್ಥಳಿ ಅನಾವರಣ ಸಮಾರಂಭದಲ್ಲಿಮಾತನಾಡಿದರು. ಧ್ವನಿಇಲ್ಲದವರಿಗೆಧ್ವನಿಯಾಗಿದ್ದಬಾಬಾಸಾಹೇಬರು ಸಮ ಸಮಾಜ ನಿರ್ಮಾಣಕ್ಕಾಗಿ ಅವಿರತವಾಗಿಶ್ರಮಿಸಿದ್ದರು. ಕಷ್ಟಕಾಲದಲ್ಲಿಯೂ ಉತ್ತಮ ವಿದ್ಯಾಭ್ಯಾಸ ಪಡೆದು ದೇಶಕ್ಕೆ ಸಂವಿಧಾನ ವನ್ನು ಕೊಡುಗೆಯಾಗಿ ನೀಡಿರುವ ಅವರನ್ನು ಒಂದು ಜಾತಿಗೆ ಸೀಮಿತಗೊಳಿ ಸುತ್ತಿದ್ದಾರೆ. ಅಲ್ಲದೆ ಕೆಲ ರಾಜಕೀಯ ಪಕ್ಷಗಳು ಅವರನ್ನು ಮತಕ್ಕಾಗಿ ಬಳಕೆ ಮಾಡಿಕೊಳ್ಳುತ್ತಿರು ವುದನ್ನು ಕಾಣುತ್ತಿದ್ದೇವೆ. ಇಂಥ ಮನಸ್ಥಿತಿ ಗಳು ಬದಲಾಗಬೇಕು. ಅವರನ್ನು ಜಾತಿಗೆ ಸೀಮಿತಗೊಳಿಸದೆ ಸರ್ವರೂ ಆರಾಧಿಸುವಂತಾಗಬೇಕು ಎಂದರು.

ಇದೇವೇಳೆ ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಮುಂಡರಗಿ ನಾಗರಾಜ ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್‌ಅವರು ನೀಡಿದ ಸಂವಿಧಾನವೇ ದೇಶದ ಧರ್ಮಗ್ರಂಥವಾಗಿದೆ. ಸಂವಿಧಾನದ ಆಶಯಗಳನ್ನು ಪ್ರತಿಯೊಬ್ಬರು ಅರಿತು ಕೊಳ್ಳಬೇಕು. ಸಮಸಮಾಜ ನಿರ್ಮಾಣ ಕ್ಕಾಗಿ ಅವಿರತ ವಾಗಿ ಹೋರಾಟ ಮಾಡಿದ್ದ ಬಾಬಾಸಾಹೇಬರ ಚಿಂತನೆಗಳು ಮತ್ತು ಅವರ ಆದರ್ಶಗಳು ಯುವಕರಿಗೆ ಸ್ಫೂರ್ತಿ ಯಾಗಬೇಕು ಎಂದರು. ಸಮಾರಂಭದಲ್ಲಿ ಸಿದ್ದಯ್ಯನ ಕೋಟೆ ಯ ಚತ್ತರಗಿ ಶ್ರೀವಿಜಯಮಹಾಂತೇಶ್ವರ ಶಾಖಾ ಮಠದ ಶ್ರೀ ಬಸವಲಿಂಗ ಸ್ವಾಮಿಜಿ ಮಾತನಾಡಿ, ಸಂವಿಧಾನವು ದೇಶದ ಪ್ರತಿಯೊಬ್ಬ ನಾಗರಿಕರಿಗೂ ಬದುಕುವ ಹಕ್ಕು ನೀಡಿದೆ. ಸಾಮಾಜಿಕ, ಆರ್ಥಿಕ ಚಿಂತಕರಾಗಿದ್ದ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಅರಿತುಕೊಂಡು ಸಾಮರಸ್ಯದಿಂದ ಬಾಳಬೇಕೆಂದು ತಿಳಿಸಿದರು.



ಮೊಳಕಾಲ್ಮೂರು ತಾಲೂಕಿನ ದೇವಸಮುದ್ರ ಗ್ರಾಮದಲ್ಲಿ ಶಾಸಕ ಎನ್.ವೈ.ಗೋಪಾಲ ಕೃಷ್ಣ ಡಾ.ಬಿ.ಆರ್.ಅಂಬೇಡ್ಕರ್‌ರವರ ಪುತ್ಥಳಿ ಅನಾವರಣ ಗೊಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಶಾಸಕ ಎನ್.ವೈ.ಗೋಪಾಲಕೃಷ್ಣಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿ ಅನಾವರಣಗೊಳಿಸಿದರು. ಈ ವೇಳೆ ತಮ್ಮೇನಹಳ್ಳಿಯ ಶ್ರೀಜಂಬಣ್ಣ ತಾತಾ, ಗ್ರಾಪಂನ ಮಾಜಿ ಅಧ್ಯಕ್ಷೆ ಲಕ್ಷ್ಮಿ ಚಂದ್ರಣ್ಣ, ತಾಪಂನ ಮಾಜಿ ಉಪಾಧ್ಯಕ್ಷ ಎ.ಕೆ.ಮಂಜುನಾಥ, ಮಾಜಿ ಸದಸ್ಯ ಎಚ್.ಮೂರ್ತಿ, ದಸಂಸ ತಾಲೂಕು ಸಂಚಾಲಕ ಓ.ಕರಿಬಸಪ್ಪ, ಬಿಜೆಪಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಮೋಹನ್, ಮಾಜಿ ಅಧ್ಯಕ್ಷ ಕೃಷ್ಣಪ್ಪ, ಉಪಾಧ್ಯಕ್ಷ ಜಿ.ಆರ್. ಕುಮಾರಸ್ವಾಮಿ, ತಿಮ್ಮಪ್ಪ, ಜಿ.ಪ್ರಕಾಶ್, ವಸಂತ ಕುಮಾರ್, ಸಿದ್ದಾರ್ಥ, ಬಿ. ಆಂಜಿನೇಯ, ಜಯರಾಂ ಇದ್ದರು.

ಬಿಎಸ್‌ವೈ ಅಭಿಮಾನೋತ್ಸವಕ್ಕೆ ಸಂಭ್ರಮ ತನ್ನಿ

ಜಿಲ್ಲೆಯ ಜನತೆಗೆ ಬಿಜೆಪಿ ಮುಖಂಡ ಸೂರನಹಳ್ಳಿ ಶ್ರೀನಿವಾಸ್ ಮನವಿ

ಚಳ್ಳಕೆರೆ: ಮಾಜಿ ಮುಖ್ಯಮಂತ್ರಿ, ರೈತರ, ದೀನ ದಲಿತರ ಪರ ಐದು ದಶಕಗಳ ಕಾಲ ಹೋರಾಟ ಮಾಡಿಕೊಂಡು ಬಂದಿರುವ ದಣಿವರಿಯದ ನಾಯಕ ಬಿ.ಎಸ್ ಯಡಿಯೂರಪ್ಪನವರು ರಾಜಕಾರಣಕ್ಕೆ ಬಂದು 50 ವರ್ಷ ತುಂಬಿದ ಹಿನ್ನೆಲೆಯಲ್ಲಿ ಮೇ 9ರಂದು ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವ ಕಾರ್ಯಕ್ರಮ ಲಕ್ಷಾಂತರ ಅಭಿಮಾನಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ನಡೆಯಲಿದೆ. ಇಂತಹ ಉತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಬೇಕು ಎಂದು ಚಳ್ಳಕೆರೆ ಬಿಜೆಪಿ ಮುಖಂಡ ಸೂರನಹಳ್ಳಿ ಶ್ರೀನಿವಾಸ್ ಹೇಳಿದ್ದಾರೆ.

ಚಳ್ಳಕೆರೆ ತಾಲೂಕಿನ ಪರಶುರಾಂಪುರ ಭಾಗದಲ್ಲಿ ಮೊದಲ ಬಾರಿಗೆ ವೇದಾವತಿ ನದಿಗೆ ಅಡ್ಡಲಾಗಿ ಬ್ರಿಡ್ಜ್ ಕಂ ಚೆಕ್ ಡ್ಯಾಂ ನಿರ್ಮಾಣಕ್ಕೆ ಬಿ.ಎಸ್.ಯಡಿಯೂರಪ್ಪ ಹಣ ನೀಡಿದ್ದರು. ಮುಖ್ಯಮಂತ್ರಿ ಆಗಿದ್ದ ಕಾಲದಲ್ಲಿ ಅಂದಿನ ಚಳ್ಳಕೆರೆ ಬಿಜೆಪಿ ಶಾಸಕರಾಗಿದ್ದ ದಿವಂಗತ ತಿಪ್ಪೇಸ್ವಾಮಿ ಅವರ ಮನವಿಯನ್ನು ಪರಿಗಣಿಸಿ ಮಂಜೂರು ಮಾಡಿದ್ದರು.

ಚಿತ್ರದುರ್ಗದ ಲೋಕಸಭಾ ಕ್ಷೇತ್ರದ ಈಗಿನ ಸಂಸದರಾದ ಗೋವಿಂದ ಎಂ. ಕಾರಜೋಳರು ಅಂದು ಯಡಿಯೂರಪ್ಪ ಸಂಪುಟದಲ್ಲಿ ಸಣ್ಣನೀರಾವರಿ ಸಚಿವರಾಗಿದ್ದರು. ಹಾಲುಗೊಂಡನಹಳ್ಳಿ ಹತ್ತಿರ ಬೃಹತ್ ಚೆಕ್ ಡ್ಯಾಂ ನಿರ್ಮಾಣ ಮಾಡುವ ಮೂಲಕ ವೇದಾವತಿಯಲ್ಲಿ ಹರಿದು ಆಂಧ್ರದ ಬೋರನತಿಪ್ಪೆ ಡ್ಯಾಂಗೆ ಹೋಗಿ ಸೇರುತ್ತಿತ್ತು. ಚೆಕ್ ಡ್ಯಾಂ ನಿರ್ಮಾಣ ಮಾಡಿದ್ದರಿಂದ ಈ ಭಾಗದ ಜನರ ಜಮೀನುಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಿ ಪಂಪ್ ಸೆಟ್ ಗಳಲ್ಲಿ ಸದಾ ನೀರಿನ ಒರತೆ ಕಾಪಾಡಲು ಕಾರಣವಾಗಿದೆ. ಪರಶುರಾಂಪುರ ಭಾಗದ ಜನರು ಇಂತಹ ಕಾರ್ಯವನ್ನು ನೆನಪಿಟ್ಟುಕೊಳ್ಳಬೇಕಾಗಿದೆ.



ಇದೀಗ ಈ ಭಾಗದ ಜನರು ಯಡಿಯೂರಪ್ಪ ಅವರ ಋಣ ಸಂದಾಯ ಮಾಡುವ ಸಮಯ ಬಂದಿದೆ. ಜಿಲ್ಲೆಯಲ್ಲಿ ನಡೆಯುವ ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕು ಎಂದು ಶ್ರೀನಿವಾಸ್ ಮನವಿ ಮಾಡಿದ್ದಾರೆ. ಹಬ್ಬದ ರೀತಿಯಲ್ಲಿ ಚಿತ್ರದುರ್ಗ ಮದುವಣಗಿತ್ತಿಯಂತೆ ಕಂಗೊಳಿಸುತ್ತಿದೆ. ರಾಜ್ಯದ ಎಲ್ಲೆಡೆ ಈ ಕಾರ್ಯಕ್ರಮಕ್ಕೆ ಅಭಿಮಾನಿಗಳು, ಕಾರ್ಯಕರ್ತರು ಆಗಮಿಸಲಿದ್ದಾರೆ. ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರೂ ಭಾಗವಹಿಸುತ್ತಿದ್ದಾರೆ. ರಾಜ್ಯ ನಾಯಕರು ಕೇಂದ್ರದ ಮಂತ್ರಿಗಳು, ಸಂಸದರು, ಶಾಸಕರು, ಮಾಜಿ ಸಚಿವರು ಸೇರಿದಂತೆ ಬಿಜೆಪಿ ದಂಡು ಚಿತ್ರದುರ್ಗದ ಕಡೆಗೆ ಧಾವಿಸುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಸಮಸಮಾಜ ನಿರ್ಮಾಣಕ್ಕೆ ನಾಂದಿ ಹಾಡಿದ ವಿಶ್ವಗುರು ಬಸವಣ್ಣ

ಶಿವನಾಗಮಯ್ಯನವರ ಜಯಂತಿಯಲ್ಲಿ ತಿಪ್ಪೇಸ್ವಾಮಿ ಅಭಿಮತ



ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾವಿಶ್ರಾಂತಿ ಸನ್ನಿಧಾನದಲ್ಲಿ ಶಿವನಾಗಮಯ್ಯನವರ ಜಯಂತಿ (ಶರಣೋತ್ಸವ) ಆಚರಿಸಲಾಯಿತು.

ಚಿತ್ರದುರ್ಗ: 12ನೇ ಶತಮಾನದ ಕಾಲಘಟ್ಟ ಸರ್ವರಿಗೂ ಸಿಹಿಯನ್ನು ಉಣಬಡಿಸಿದ ಪರ್ವ ಕಾಲ. ಸಕಲ ಜೀವರಾಶಿಗಳಿಗೂ ಲೇಸನ್ನೇ ಬಯಸಿ ಸಮಸಮಾಜದ ನಿರ್ಮಾಣಕ್ಕೆ ನಾಂದಿ ಹಾಡಿದ ಬಸವಣ್ಣನವರು ಸರ್ವರ ಉದ್ಧಾರಕ್ಕಾಗಿ ಹಗಲಿರುಳು ಶ್ರಮಿಸಿದ ದಾರ್ಶನಿಕರಾಗಿದ್ದಾರೆ ಎಂದು ಚಿತ್ರದುರ್ಗ ಅಂಚೆ ಇಲಾಖೆಯ ಆರ್.ತಿಪ್ಪೇಸ್ವಾಮಿ ಅಭಿಪ್ರಾಯಪಟ್ಟರು.

ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಮೂಲಕರ್ತೃ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳ ಲೀಲಾ ವಿಶ್ರಾಂತಿ ಸನ್ನಿಧಾನದಲ್ಲಿ ಶುಕ್ರವಾರ ಬೆಳಗ್ಗೆ ಏರ್ಪಡಿಸಿದ್ದ ಶಿವನಾಗಮಯ್ಯನವರ ಜಯಂತಿ (ಶರಣೋತ್ಸವ) ಸಮಾರಂಭದಲ್ಲಿ ಮಾತನಾಡಿದರು.

ಶರಣರ ತತ್ವಗಳು ಕೇವಲ ಇತಿಹಾಸವಲ್ಲ ಅವು ನಮ್ಮ ನಿತ್ಯ ಜೀವನದ ಮಾರ್ಗದರ್ಶಕಗಳಾಗಿವೆ. ಶರಣರುಸರಳವಾದಸುಲಲಿತವಾದವೈಚಾರಿಕಕಂಪನ್ನುಸೂಸುವವಚನಗಳನ್ನು ಬರೆಯುವಮೂಲಕಸಮಾಜಕ್ಕೆಸುಜ್ಞಾನದಬೆಳಕನ್ನುಪಸರಿಸಿದರು. ಅಂಥವಚನಕಾರರಲ್ಲಿ ಶಿವನಾಗಮಯ್ಯನವರೂ ಕೂಡ ಒಬ್ಬರು. ಅವರು ಸಾಮಾನ್ಯ ಕುಟುಂಬದಲ್ಲಿ ಜನಿಸಿ ನಂತರ ಶರಣಧರ್ಮದ ಮಾರ್ಗವನ್ನು ಅನುಸರಿಸಿದರು. ಇವರ ಕಾಲ 1160 ಇವರು ನಾಗಪ್ರಿಯ ಚನ್ನರಾಮೇಶ್ವರ ಅಂಕಿತನಾಮದಲ್ಲಿ 3 ವಚನಗಳನ್ನು ರಚಿಸಿದ್ದಾರೆ ಎಂದರು. ಎಸ್‌ಜೆಎಂ ವಿದ್ಯಾಪೀಠ ಆಡಳಿತ ಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿ ಮಾತನಾಡಿ, ಶಿವನಾಗಮಯ್ಯನವರ ಘನಸುಖ ಮಹಾಸುಖವ ಮುಟ್ಟಲು ಸಮ ಸುಖಿಂಗಳ ಸುಖಿಸಬಲ್ಲ ವಚನ ವಿಶ್ಲೇಷಿಸುತ್ತ, ನಮ್ಮ ನಾಲಿಗೆ ನಲ್ನುಡಿಗಳನ್ನು ಆಲಿಸುತ್ತದೆಯೋ ಅಥವಾ ನಾಲ್ಕು ಜನರ ಬಗ್ಗೆ ತುಚ್ಛವಾಗಿ ಮಾತನಾಡುತ್ತದೆಯೋ, ನಮ್ಮ ಕರ್ಣಂಗಳು ಶರಣರ ವಚನಗಳ ಹಿಂದಿರುವ ಆಶಯಗಳನ್ನು ಆಲಿಸುತ್ತದೆಯೋ ಅಥವಾ ಮತ್ತೊಬ್ಬರ ವಿಚಾರಗಳ ಬಗ್ಗೆ ಆಸಕ್ತಿ ತೋರುತ್ತದೆಯೋ ಎನ್ನುವುದನ್ನು ಅರಿಯಬೇಕಾಗುತ್ತದೆ. ನಮ್ಮ ಮನಸ್ಸುಗಳು ಒಳ್ಳೆಯ ಚಿಂತನೆಗಳನ್ನು ಆಲೋಚನೆಗಳನ್ನು ಆಲಿಸಬೇಕು. ಕಾಯದ ಪರಿಶುದ್ಧ ಕಾರ್ಯಗಳೇ ಕಾಯಕ ಆಗುತ್ತದೆ. ಹಾಗಾಗಿ ನಮ್ಮ ನಡುವೆ ಇರುವ ನಿಜಗುಣಗಳನ್ನು ಗುರುತಿಸುವಂತಾಗಬೇಕು ಎಂದರು. ಗೋವಿಂದ ಸ್ವಾಮೀಜಿ, ಎಸ್‌ಜೆಎಂ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎಲ್.ಈಶ್ವರಪ್ಪ, ಟಿ.ಪಿ.ಜ್ಞಾನಮೂರ್ತಿ, ಮುಖಂಡರಾದ ನಾಗರಾಜ ಸಂಗ, ಪೈಲ್ವಾನ್ ತಿಪ್ಪೇಸ್ವಾಮಿ, ಬಸವರಾಜ ಕಟ್ಟಿ, ಪ್ರೊ.ಲಿಂಗಪ್ಪ, ಸರಳಾ ಲಿಂಗಪ್ಪ, ಡಾ. ಕೆ. ಪುಷ್ಪ ಇದ್ದರು. ಜ್ಯೋತಿ ಗಿರೀಶ್ ವಚನ ಗೀತೆ ಹಾಡಿದರು.

ಕಲಾವಿದರ ಔತಣಕೂಟ | ಸಾಣೇಹಳ್ಳಿಯ ಡಾ.ಪಂಡಿತಾರಾಧ್ಯ ಸ್ವಾಮೀಜಿ ಅಭಿಮತ | ಶಿವಸಂಚಾರ ಕಲಾವಿದರಿಗೆ ಬೀಳ್ಕೊಡುಗೆ

ಸಾವಿಲ್ಲದ ಕಲೆ, ಕಲಾವಿದರಿಗೆ ಸದಾ ಪ್ರೋತ್ಸಾಹ ಅಗತ್ಯ

• **ಕನ್ನಡಪ್ರಭ ವಾರ್ತೆ** ಹೊಸದುರ್ಗ

ಸಾವಿಲ್ಲದ ಕಲೆಗೆ, ಕಲಾವಿದರಿಗೆ ಸದಾ ಪ್ರೋತ್ಸಾಹದ ಅಗತ್ಯ ವಿದೆ ಶಿವಸಂಚಾರದಿಂದ ಹೊರಬಂದ ಕಲಾವಿದರು ರಂಗಭೂಮಿ ಮತ್ತು ಸಿನಿಮಾ ಕ್ಷೇತ್ರದಲ್ಲಿ ಉತ್ತಮ ಹೆಸರು ಮಾಡಲಿ ಎಂದು ಸಾಣೇಹಳ್ಳಿಯ ಡಾ.ಪಂಡಿತಾರಾಧ್ಯ ಸ್ವಾಮೀಜಿ ಹಾರೈಸಿದರು.

ತಾಲೂಕಿನ ಸಾಣೇಹಳ್ಳೀಯ ಶಿವಕುಮಾರ ಬಯಲು ರಂಗಮಂದಿರದಲ್ಲಿ ಆಯೋಜಿಸಲಾ ಗಿದ್ದ ಶಿವಸಂಚಾರ ಕಲಾವಿದರ ಬೀಳ್ಕೊಡುಗೆ ಸಮಾರಂಭ ಹಾಗೂ ಔತಣಕೂಟದಲ್ಲಿ ಭಾಗವಹಿಸಿ ಮಾತನಾಡಿ, ಸಮಾಜದ ಅಂಕು ಡೊಂಕುಗಳನ್ನುತಿದ್ದುವಲ್ಲಿರಂಗಭೂಮಿಯಪಾತ್ರ ಅನನ್ಯವಾದುದು. ಸತತವಾಗಿ 29 ವರ್ಷಗಳ ಕಾಲ ಸಾಂಸ್ಕೃತಿಕ ಸೇವೆಯಲ್ಲಿ ಸಾಣೇಹಳ್ಳಿಯ ಶಿವಸಂಚಾರ ತೊಡಗಿ ಕೊಂಡಿದೆ. ನಾಟಕ ತಂಡದ ಈ ವರ್ಷದ ಕಲಾವಿದರ ಸಂಘಟಿತ ಕಾರ್ಯ ಮತ್ತು ಕಲಾ ಸೇವೆ ಶ್ಲಾಘನೀಯ ಎಂದರು.

ಶಿವಸಂಚಾರ ನಾಟಕಗಳ ಮೂಲಕ ಸಮಾಜದ ಮೇಲಿನ ಪ್ರಭಾವವೇ ನಮಗೆ ದೊರೆತ ದೊಡ್ಡ ಲಾಭ. ಸಾಂಸ್ಕೃತಿಕ ಲೋಕದಲ್ಲಿತನ್ನದೇಆದಛಾಪುಮೂಡಿಸಿರುವಶಿವಸಂಚಾರ ಮತ್ತು ರಂಗಶಾಲೆಯ ನಾಟಕ ಮತ್ತು ಕಲೆಯ ಮೂಲಕ ಸಮಾಜದ ಮೇಲೆ ಬೀರುವ ಸಕಾರಾತ್ಮಕ ಪರಿಣಾಮವೇ ನಮಗೆ ದೊರೆತ ಅತಿದೊಡ್ಡ ಯಶಸ್ಸು ಎಂದರು.



ಸಾಣೇಹಳ್ಳಿಯ ಶಿವಕುಮಾರ ಬಯಲು ರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಶಿವಸಂಚಾರ ಕಲಾವಿದರ ಬೀಳ್ಕೊಡುಗೆ ಸಮಾರಂಭ ಹಾಗೂ ಔತಣಕೂಟದಲ್ಲಿ ಭಾಗವಹಿಸಿದ್ದ ಕಲಾವಿದರ ತಂಡದೊಂದಿಗೆ ಶ್ರೀಗಳು.

ಸಾಣೇಹಳ್ಳಿಯ ಶಿವಕುಮಾರ ಕಲಾ ಸಂಘದ ಅಂಗಸಂಸ್ಥೆಯಾದ ಶಿವಸಂಚಾರವು ತನ್ನ ಸಾಂಸ್ಕೃತಿಕ ಪಯಣದಲ್ಲಿ ಮತ್ತೊಂದು ಮೈಲಿ ಗಲ್ಲು ಸ್ಥಾಪಿಸಿದೆ. 1997ರಲ್ಲಿ ಸಿ.ಜಿ.ಕೃಷ್ಣಸ್ವಾಮಿ (ಸಿಜಿಕೆ) ಅವರ ನೇತೃತ್ವದಲ್ಲಿ ಆರಂಭವಾದ ಈ ರಂಗ ತಂಡವು, ಕೇವಲ ನಟನೆಯಷ್ಟೇ ಅಲ್ಲದೆ ಸಾಮಾಜಿಕ ಬದಲಾವಣೆಯ ಆಶಯ ದೊಂದಿಗೆ ನಾಡಿನಾದ್ಯಂತ ನಿರಂತರವಾಗಿ ಸಂಚರಿಸುತ್ತಿದೆ. ಕಳೆದ 2 ವರ್ಷಗಳಿಂದ ಆರ್ಥಿಕ ಸಂಕಷ್ಟ ಹಾಗೂ ವಿವಿಧ ಕಾರಣಗಳಿಂದ ಶಿವಸಂಚಾರವನ್ನು ಸ್ಥಗಿತಗೊಳಿಸುವ ಆಲೋ ಚನೆ ಇತ್ತಾದರೂ, ರಾಘು ಮತ್ತು ಅವರ ಪತ್ನಿಯವರ ಧೈರ್ಯದ ನಿರ್ಧಾರದಿಂದ ರಂಗಶಾಲೆ ಮುಂದುವರೆದಿದೆ ಎಂದರು. ರಂಗನಿರ್ದೇಶಕವೈ.ಡಿ.ಬದಾಮಿ ಮಾತನಾಡಿ, ಕಳೆದ 29 ವರ್ಷಗಳಿಂದ ನಿರಂತರವಾಗಿ ಸಾಂಸ್ಕೃತಿಕ ಲೋಕದಲ್ಲಿ ತನ್ನದೇ ಆದ ಛಾಪು ಮೂಡಿಸಿರುವ ಶಿವಸಂಚಾರದ ಈ ವರ್ಷದ ಶಿವಸಂಚಾರ ರಂಗ ತಿರುಗಾಟ ಅತ್ಯಂತ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಕಳೆದ ವರ್ಷ ತಾಂತ್ರಿಕ ಮತ್ತು ಇತರ ಕಾರಣಗಳಿಂದಾಗಿ ಕೆಲವು ಪ್ರದರ್ಶನ ಗಳು ಅರ್ಧಕ್ಕೆ ನಿಂತುಹೋಗಿದ್ದವು. ಆದರೆ ಈ ವರ್ಷ ಆ ಎಲ್ಲಾ ಸವಾಲುಗಳನ್ನು ಮೀರಿ ತಂಡವು ಅತ್ಯಂತ ಉತ್ಸಾಹ ದಿಂದ ನಾಟಕಗಳನ್ನು ಪ್ರದರ್ಶಿಸಿದೆ. ತಂಡದ ಕಲಾವಿದರು ಮತ್ತು ತಾಂತ್ರಿಕ ವರ್ಗದವರು ತೋರಿದ ಶಿಸ್ತು ಮತ್ತು ಪರಿಶ್ರಮವು ರಂಗದ ತಿರುಗಾಟ ಯಶಸ್ಸಿಗೆ ಕಾರಣವಾಗಿದೆ ಎಂದರು. ರಂಗಶಾಲೆಯ ಪ್ರಾಂಶುಪಾಲ ರಘು ಪರಪ್ಪಮನೆ, ರಂಗ ನಿರ್ದೇಶನ ಕೃಷ್ಣಮೂರ್ತಿ ತಾಳಿಕಟ್ಟೆ ಮಾತನಾ ಡಿದರು. ಒಂದು ವರ್ಷದ ಅವಧಿಯಲ್ಲಿ ರಾಜ್ಯಾದ್ಯಂತ ನೂರಾರು ಪ್ರದರ್ಶನಗಳನ್ನು ನೀಡಿ, ನಾಟಕ ಕಲೆಯ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದ ಕಲಾವಿದರನ್ನು ಬೀಳ್ಕೊಡಲಾಯಿತು.

> **ರಂಗಭೂಮಿ ಎನ್ನುವುದು ಏಕವ್ಯಕ್ತಿ ಪ್ರದರ್ಶನವಲ್ಲ, ಅದು ಒಂದು ದೊಡ್ಡ ಸಮೂಹದ ಕೆಲಸ. ಒಂದು ಸಂಸಾರದಂತೆ ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಮಾತ್ರ ಯಶಸ್ಸು ಸಾಧ್ಯ**
> • **ರಘು ಪರಪ್ಪಮನೆ**
> ರಂಗಶಾಲೆಯ ಪ್ರಾಂಶುಪಾಲ

ಸುದ್ದಿ ಸಿಂಚನ

ಬಿಸಿಲ ತಾಪದಿಂದ ರಕ್ಷಿಸಿಕೊಳ್ಳಲು ಮುಂಜಾಗ್ರತೆ ವಹಿಸಿ

ಚಿತ್ರದುರ್ಗ: ರಾಜ್ಯದಲ್ಲಿ ಬೇಸಿಗೆಯ ತಾಪ ದಿನದಿಂದ ದಿನಕ್ಕೆ ಏರುತ್ತಿದ್ದು, ಸಾರ್ವಜನಿಕರು ಬಿಸಿಲಿನ ಬೇಗೆಯಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ವಿಶೇಷವಾಗಿ ಹಿರಿಯ ನಾಗರೀಕರು, ಮಕ್ಕಳು ತೀವ್ರ ಬಿಸಿಲಿನ ತಾಪಕ್ಕೆ ಬರಬಾರದು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್. ನಾಗಸಮುದ್ರ ಮನವಿ ಮಾಡಿದ್ದಾರೆ. ತೀವ್ರ ಬಿಸಿಲಿಗೆ ಒಡ್ಡಿಕೊಳ್ಳುವುದರಿಂದ ಚರ್ಮ ಕಪ್ಪಾಗುವುದು, ಅಲರ್ಜಿ, ತುಟಿ ಒಣಗುವುದು, ಮೂಗಿನಲ್ಲಿ ರಕ್ತಸ್ರಾವ, ದೇಹದ ಉಷ್ಣಾಂಶ ಏರಿಕೆ, ಸುಸ್ತು, ತಲೆಸುತ್ತು ಹಾಗೂ ಎಲೆಕ್ಟ್ರೋಲೈಟ್‌ಗಳ ಏರುಪೇರಿನಂತಹ ಲಕ್ಷಣಗಳು ಕಂಡುಬರುತ್ತವೆ. ಅಲ್ಲದೆ, ಬೇಸಿಗೆಯಲ್ಲಿ ನೀರಿನ ಮೂಲಕ ಹರಡುವ ಸಾಂಕ್ರಾಮಿಕ ರೋಗಗಳ ಭೀತಿಯೂ ಇರುತ್ತದೆ ಎಂದು ಎಚ್ಚರಿಸಿದ್ದಾರೆ. ತೀವ್ರ ಬಿಸಿಲಿರುವಾಗ ಸಾರ್ವಜನಿಕರು ಅನಗತ್ಯವಾಗಿ ಮನೆಯಿಂದ ಹೊರಬರಬಾರದು. ಅನಿವಾರ್ಯವಿದ್ದಲ್ಲಿ ಛತ್ರಿ, ತಂಪು ಕನ್ನಡಕ ಹಾಗೂ ಸ್ಕಾರ್ಫ್‌ಗಳನ್ನು ಬಳಸಿ ಮತ್ತು ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲು ಏರುವ ಮೊದಲೇ ಅಗತ್ಯ ಕೆಲಸಗಳನ್ನು ಪೂರ್ಣಗೊಳಿಸಿ, ಮನೆಯ ಶುದ್ಧ ಕುಡಿಯುವ ನೀರನ್ನು ಸದಾ ಜೊತೆಯಲ್ಲಿಟ್ಟುಕೊಳ್ಳಬೇಕು. ಐಸ್‌ಕ್ರೀಂ ಅಥವಾ ಕೃತಕ ತಂಪು ಪಾನೀಯಗಳ ಬದಲಿಗೆ ನೈಸರ್ಗಿಕ ಹಣ್ಣಿನ ರಸ, ಕಬ್ಬಿನ ಹಾಲು ಹಾಗೂ ಶರಬತ್ತುಗಳನ್ನು ಸೇವಿಸಬೇಕು. ಕೃತಕ ಪಾನೀಯಗಳಲ್ಲಿ ಸಕ್ಕರೆ ಮತ್ತು ರಾಸಾಯನಿಕ ಅಂಶಗಳು ಹೆಚ್ಚಾಗಿರುವುದರಿಂದ ಅವು ಆರೋಗ್ಯಕ್ಕೆ ಹಾನಿಕರವಾಗಬಹುದು. ಆಹಾರದಲ್ಲಿ ಹಸಿರು ಸೊಪ್ಪು, ತರಕಾರಿ ಹಾಗೂ ನೀರಿನ ಅಂಶ ಹೆಚ್ಚಿರುವ ಸೌತೆಕಾಯಿ, ಕ್ಯಾರೆಟ್ ಬಳಸಿ ಮತ್ತು ಹೆಚ್ಚು ಮಸಾಲೆ ಪದಾರ್ಥಗಳ ಸೇವನೆಯನ್ನು ಕಡಿಮೆ ಮಾಡಬೇಕು. ವರ್ಷದಿಂದ ವರ್ಷಕ್ಕೆ ಉಷ್ಣಾಂಶ ಹೆಚ್ಚುತ್ತಿರುವುದು ಆತಂಕಕಾರಿ ವಿಷಯವಾಗಿದ್ದು, ಉಷ್ಣತೆಯನ್ನು ತಗ್ಗಿಸಲು ಸಾರ್ವಜನಿಕರು ಸಾಧ್ಯವಾದಷ್ಟು ಗಿಡಮರಗಳನ್ನು ಬೆಳೆಸಲು ಮುಂದಾಗಬೇಕು. ಹೆಚ್ಚಿನ ಮಾಹಿತಿ ಹಾಗೂ ಆರೋಗ್ಯ ಸಲಹೆಗಳಿಗಾಗಿ ಸಾರ್ವಜನಿಕರು ಹತ್ತಿರದ ಆಯುಷ್ ಚಿಕಿತ್ಸಾಲಯಗಳಿಗೆ ಭೇಟಿ ನೀಡಬಹುದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಚಂದ್ರಕಾಂತ್ ಎಸ್. ನಾಗಸಮುದ್ರ ಕೋರಿದ್ದಾರೆ.

ವಸ್ತು ಸಂಗ್ರಹಾಲಯಕ್ಕೆ ವಿದ್ಯಾರ್ಥಿಗಳ ಭೇಟಿ

ಚಿತ್ರದುರ್ಗ: ಎಸ್‌ಜೆಎಂ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಮುರುಘರಾಜೇಂದ್ರ ಬೃಹನ್ಮಠದ ಸಂರಕ್ಷಿತ ಹಸ್ತಪ್ರತಿ ಭಂಡಾರ ಮತ್ತು ಪ್ರಾಚ್ಯ ವಸ್ತು ಸಂಗ್ರಹಾಲಯಕ್ಕೆ ಭೇಟಿ ನೀಡಿ ವೀಕ್ಷಿಸಿದರು. ಈ ವೇಳೆ ಮಾತನಾಡಿದ ಸಹಾಯಕ ಪ್ರಾಧ್ಯಾಪಕ ಡಾ.ರಮೇಶ್ ಕೆ. ಮಾತನಾಡಿ, ವಿದ್ಯಾರ್ಥಿಗಳ ಪಠ್ಯದ ಭಾಗವಾಗಿರುವ ಹಸ್ತಪ್ರತಿಗಳ ಬಗ್ಗೆ ಮಾಹಿತಿ ನೀಡುತ್ತ ಹಸ್ತಪ್ರತಿಗಳು ಈ ನಾಡಿನ ಚರಿತ್ರೆ, ಸಾಹಿತ್ಯ ಮತ್ತು ಸಂಸ್ಕೃತಿಯ ಜ್ಞಾನ ಭಂಡಾರಗಳಗಿವೆ. ನಮ್ಮ ಪ್ರಾಚೀನ ಕನ್ನಡಿಗರ ಜ್ಞಾನ ಸಂಪತ್ತು ಮತ್ತು ಸಾಂಸ್ಕೃತಿಕ ಬದುಕಿನ ಮಹತ್ವದ ಅಂಶಗಳಿವೆ. ಆಧುನಿಕ ಜಗತ್ತಿನಲ್ಲಿ ಕ್ಷಣ ಕ್ಷಣಕ್ಕೂ ಬದಲಾಗುತ್ತಿರುವಾಗ; ಹಳೇಕಾಲದ ಹಸ್ತಪ್ರತಿಗಳನ್ನು ತಿಳಿದುಕೊಳ್ಳುವುದರಲ್ಲಿ ಅರ್ಥವಿಲ್ಲವೆಂದು ಉಪೇಕ್ಷೆ ಮಾಡಲಾಗಿತ್ತು. ಇಂದು ಅದೇ ಹಸ್ತಪ್ರತಿಗಳ ನಮ್ಮ ಪ್ರಾಚೀನ ದೇಶಿ ಜ್ಞಾನ ಪರಂಪರೆಗಳನ್ನು ಮರು ಶೋಧಿಸುವ ಮೂಲಕ ನಮ್ಮ ಬೇರುಗಳನ್ನು ಸಧೃಡಗೊಳ್ಳಬೇಕಾಗಿದೆ ಎಂದರು. ಡಾ ಸುಧಾರಾಣಿ, ಡಾ.ಪುಷ್ಪ.ಕೆ ಮತ್ತು ಇತಿಹಾಸ ಉಪನ್ಯಾಸಕರಾದ ವಿಶ್ವನಾಥ ಇದ್ದರು.

ನವೀಕೃತ ನ್ಯಾಯಾಂಗ ವೇದಿಕೆ ಉದ್ಘಾಟನೆ

ಚಿತ್ರದುರ್ಗ: ಜಿಲ್ಲಾ ವಕೀಲರ ಸಂಘದ ವತಿಯಿಂದ ನಗರದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ ಅವರು ನವೀಕೃತ ನ್ಯಾಯಾಂಗ ವೇದಿಕೆಯ ಉದ್ಘಾಟನೆ ನೆರವೇರಿಸಿದರು. ಇದೇ ವೇಳೆ ವರ್ಗಾವಣೆಗೊಂಡಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ, ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ನ್ಯಾಯಾಧೀಶರಾದ ಎ.ಎಂ.ಚೈತ್ರ ಹಾಗೂ ಉಜ್ವಲ್ ವೀರಣ್ಣ ಸಿದ್ದಣ್ಣನವರ್‌ಸೇರಿದಂತೆ ನಾಲ್ವರು ನ್ಯಾಯಾಧೀಶರನ್ನು ವಕೀಲರ ಸಂಘದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಚ್.ಎಸ್. ಮಹೇಶ್ವರಪ್ಪ, ಪ್ರಧಾನ ಕಾರ್ಯದರ್ಶಿ ಹೆಚ್. ಓ. ಜಗದೀಶ ಗುಂಡೇರಿ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಇತರೆ ನ್ಯಾಯಾಧೀಶರು, ವಕೀಲರ ಸಂಘದ ಪದಾಧಿಕಾರಿಗಳು ಇದ್ದರು.



ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳುವಂತೆ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಸಂಸದ ಗೋವಿಂದ ಎಂ. ಕಾರಜೋಳ, ಮಾಜಿ ಸಚಿವ ಆರಗ ಜ್ಞಾನೇಂದ್ರ ಅವರು ಆಹ್ವಾನ ನೀಡಿದರು.



ಮೊಳಕಾಲ್ಮೂರು ತಾಲೂಕಿನ ಬಿಜಿಕೆರೆ ಗ್ರಾಮದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಪಿಎಸ್‌ಐ ಮಹೇಶ್ ಉದ್ಘಾಟಿಸಿದರು. ವಿವಿಧ ಮುಖಂಡರಿದ್ದರು.



ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಭಾನುವಾರ ಬಿಎಸ್‌ವೈ ಅಭಿಮಾನೋತ್ಸವ ನಡೆಯುವ ಸ್ಥಳಕ್ಕೆ ಭೇಟಿ ನೀಡಿ ಪೂರ್ವಸಿದ್ಧತೆ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವಿ.ವಿಜಯೇಂದ್ರ, ಸಂಸದ ಕಾರಜೋಳ, ಆರಗ ಜ್ಞಾನೇಂದ್ರ ಉಪಸ್ಥಿತರಿದ್ದರು.

ರಾಜಕೀಯ ದಿಕ್ಕು ಬದಲಿಸಿದ ನಾಯಕ ಬಿಎಸ್‌ವೈ

ಬಿಎಸ್‌ವೈ ಅಭಿಮಾನೋತ್ಸವದ ಪೂರ್ವಸಿದ್ಧತಾ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿಕೆ

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಕರ್ನಾಟಕದ ರಾಜಕೀಯದ ದಿಕ್ಕನ್ನು ಬದಲಿಸಿರುವ ನಾಯಕ ಬಿ.ಎಸ್.ಯಡಿಯೂರಪ್ಪ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಮೇ 9ರಂದು ನಡೆಯಲಿರುವ ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಭಾನುವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಿದ್ದರಾಮಯ್ಯ ಅವರ ರೀತಿ ಒಂದು ಪಕ್ಷ ಬಿಟ್ಟು ಮತ್ತೊಂದು ಪಕ್ಷಕ್ಕೆ ಹೋಗಿ ಸಿಎಂ ಆದವರಲ್ಲ. ಒಂದು ಪಕ್ಷವನ್ನು ಕೆಳಹಂತದಿಂದ ಸಂಘಟಿಸಿ ವಿಧಾನಸೌಧದ ಮೂರನೇ ಮಹಡಿವರೆಗೂ ತಂದು ಜನನಾಯಕರಾಗಿದ್ದಾರೆ ಎಂದರು.

ರಾಜಕೀಯ ದಿಕ್ಕು ಬದಲಿಸಿದ ನಾಯಕ ಯಡಿಯೂರಪ್ಪನವರ ಸಲುವಾಗಿ ಒಂದು ಒಳ್ಳೆಯ ಮುಹೂರ್ತದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಬರಲು ಒಪ್ಪಿಕೊಂಡಿದ್ದಾರೆ. ಮೇ 9 ದೈವಿಚ್ಛೆ ಸಮಯ. ಕಾಂಗ್ರೆಸ್‌ನ ಸೂರ್ಯ ಮುಳುಗುವ ಸಂದರ್ಭದಲ್ಲಿ ಬಿಜೆಪಿಯ ಕಮಲ ಅರಳುವ ಸಮಯ. ಅಂತಹ ಪರಿವರ್ತನೆಯ ಗಾಳಿ ಇಡೀ ಕರ್ನಾಟಕದಲ್ಲಿ ಬೀಸುತ್ತಿದೆ. ಹೀಗಾಗಿ ಕಾರ್ಯಕ್ರಮದ ಯಶಸ್ಸಿನಲ್ಲಿ ನಮ್ಮೆಲ್ಲರ ಯಶಸ್ಸು ಮತ್ತು ಕರ್ನಾಟಕದ ಯಶಸ್ಸು ಇದೆ. ಬದಲಾವಣೆಯಾಗಬೇಕಾದರೆ ಏನಾದರೂ ಒಂದು ಪ್ರಭಲವಾದ ಕಾರಣ ಬೇಕಾಗುತ್ತದೆ. ಅಭಿಮಾನೋತ್ಸವದ ಮೂಲಕ ರಾಜ್ಯಕ್ಕೆ ಸ್ಪಷ್ಟ ಸಂದೇಶ ರವಾನೆಯಾಗಬೇಕಿದೆ ಎಂದರು.



ಚಿತ್ರದುರ್ಗದ ವಾಲ್ಮೀಕಿ ಭವನದಲ್ಲಿ ಭಾನುವಾರ ನಡೆದ ಬಿಎಸ್‌ವೈ ಅಭಿನಂದನಾ ಸಮಾರಂಭದ ಪೂರ್ವ ಸಿದ್ಧತಾ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿದರು.

ಯಡಿಯೂರಪ್ಪ ನವರನ್ನು ರೈತ ನಾಯಕರು, ಹೋರಾಟಗಾರರು ಅಂತ ಹೇಳುತ್ತೇವೆ. ಅವರದು ಇನ್ನೊಂದು ಮಾನವೀಯತೆ ಮುಖ ಇದೆ. ನಾವು ಅಧಿಕಾರ ಕಳೆದುಕೊಂಡು ಒಮ್ಮೆ ಚಾಮರಾಜನಗರಕ್ಕೆ ಹೋಗುವಾಗ ಸುಮಾರು 75 ವರ್ಷದ ಹೆಣ್ಣುಮಗಳು ಕಾರಿಗೆ ಅಡ್ಡ ಬಂದಳು. ಆ ಹೆಣ್ಣುಮಗಳನ್ನು ನೋಡಿ ಕಾರು ನಿಲ್ಲಿಸಿದರು. ಅವಳು ಇವರ ಕಾಲಿಗೆ ಬೀಳಲು ಬಂದು ಕೂಡಲೇ ಅಳಲು ಆರಂಭಿಸಿದಳು. ಏನಾಯಿತು ಎಂದು ಕೇಳಿದಾಗ ಅವಳು ನಾನು ಈ ಊರಿಗೆ ಸೊಸೆಯಾಗಿ ಬಂದಾಗಿನಿಂದ ಕುಡಿಯುವ ನೀರಿಗೆ ಪರದಾಡಿದ್ದೆ ಈಗ ನನ್ನ ಮೊಮ್ಮಗಳು ಬಂದಿದ್ದಾಳೆ, ಈ ಪುಣ್ಯಾತ್ಮ ನಮ್ಮ ಕೆರೆಗೆ ನೀರು ಹರಿಸಿ ಕುಡಿಯಲು ನೀರು ಕೊಟ್ಟಿದ್ದಾನೆ ಎಂದು ಹೇಳಿದಳು.

ಯಡಿಯೂರಪ್ಪನವರು ಬಹಳ ಅಪರೂಪದ ನಾಯಕ ಅವರ ಜೊತೆಗೆ ಕೆಲಸ ಮಾಡಿರುವ ಸೌಭಾಗ್ಯ ನನ್ನದು. ಬಹಳ ಜನರ ಬದುಕಿಗೆ ದಾರಿ ತೋರಿದ್ದಾರೆ. ಬಹಳ ಜನರಿಗೆ ಆಶ್ರಯ ಕೊಟ್ಟಿದ್ದಾರೆ, ಸಹಾಯ ಪಡೆದವರು ಲಕ್ಷಗಟ್ಟಲೇ ಕೋಟಿಗಟ್ಟಲೆ ಇದ್ದಾರೆ. ಮನುಷ್ಯನಿಗೆ ಕೃತಜ್ಞತೆ ಅತ್ಯಂತ ಬೇಕಾಗಿರುವ ಗುಣವಾಗಿದ್ದು ಆ ಕಾರಣಕ್ಕಾಗಿಯೆ ಸಮಾರಂಭ ಹಮ್ಮಿಕೊಳ್ಳಲಾಗುತ್ತಿದೆ. ಮುಂದಿನ ದಿನಗಳಲ್ಲಿ ಯಡಿಯೂರಪ್ಪ ಕಂಡಿರುವ ಕನಸಿನ ಕರ್ನಾಟಕವನ್ನು ಕಟ್ಟಲು ಭಾರತೀಯ ಜನತಾ ಪಕ್ಷದ ಸರ್ಕಾರ ಅಧಿಕಾರಕ್ಕೆ ತಂದು ವಿಧಾನಸೌಧದ ಮೂರನೆ ಮಹಡಿಯಲ್ಲಿ ಕಮಲ ಅರಳಿಸುವ ಸಂಕಲ್ಪ ಮಾಡಬೇಕು ಎಂದು ಹೇಳಿದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಲೋಕಸಭಾ ಸದಸ್ಯರಾದ ಗೋವಿಂದ ಕಾರಜೋಳ, ಬಿ.ವೈ.ರಾಘವೇಂದ್ರ, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಆರಗ ಜ್ಞಾನೇಂದ್ರ, ಎಂ.ಪಿ. ರೇಣುಕಾಚಾರ್ಯ, ಮಾಜಿ ಶಾಸಕ ತಿಪ್ಪಾರೆಡ್ಡಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

ಬಿಎಸ್‌ವೈ ಸಹಕಾರದಿಂದ ಹೊಳಲ್ಕೆರೆ ಅಭಿವೃದ್ಧಿ

ಬಿಎಸ್‌ವೈ ಅಭಿಮಾನೋತ್ಸವದ ಪೂರ್ವಭಾವಿ ಸಭೆಯಲ್ಲಿ ಶಾಸಕ ಡಾ.ಎಂ.ಚಂದ್ರಪ್ಪ ಅಭಿಮತ

• **ಕನ್ನಡಪ್ರಭ ವಾರ್ತೆ** ಹೊಳಲ್ಕೆರೆ

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು 70 ವರ್ಷಗಳಾಗಿದ್ದರೂ ಅಭಿವೃದ್ಧಿ ಕಾಣದೆ ಸಣ್ಣಹಳ್ಳಿಯಂತಿದ್ದ ಹೊಳಲ್ಕೆರೆಯನ್ನು ಜಿಲ್ಲೆಯ ಲ್ಲಿಯೇ ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿ ಪಡಿಸಿದ್ದೇನೆಂದರೆ ಅದಕ್ಕೆ ಬಿ.ಎಸ್ .ಯಡಿಯೂರಪ್ಪನವರ ಕೊಡುಗೆ ಕಾರಣ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಸ್ಮರಿಸಿದರು.

ರೈತ ನಾಯಕ ಮಾಜಿ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪನವರ ಸುದೀರ್ಘ 50 ವರ್ಷಗಳ ರಾಜಕೀಯ ಪಯಣಕ್ಕಾಗಿ ಮೇ 9ರಂದು ಚಿತ್ರದುರ್ಗದ ಹೊರವಲಯದಲ್ಲಿರುವ ಮಾದಾರ ಚನ್ನಯ್ಯ ಗುರುಪೀಠದ ಹತ್ತಿರ ವಿಶಾಲವಾದ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿರುವ ಬೃಹತ್ ಅಭಿಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಸಂವಿಧಾನಸೌಧದಲ್ಲಿ ಭಾರತೀಯ ಜನತಾಪಾರ್ಟಿ ಹಾಗೂ ಭರಮಸಾಗರ ಮಂಡಲದ ವತಿಯಿಂದ ಭಾನುವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆ ಉದ್ಘಾಟಿಸಿ ಮಾತನಾಡಿದರು.

ನಾನು ಬೂಟಾಟಿಕೆ ಮಾತುಗಳನ್ನಾಡುವ ರಾಜಕಾರಣಿಯಲ್ಲ. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಅತಿ ಹೆಚ್ಚು ಅನುದಾನ ನೀಡಿದ್ದಾರೆ. ಅದೇ ರೀತಿ ಬಸವರಾಜ್ ಬೊಮ್ಮಾಯಿಯವರು ಮುಖ್ಯಮಂತ್ರಿಯಾಗಿದ್ದಾಗಲು ಕೋಟ್ಯಂತರ ರು. ಅನುದಾನ ಮಂಜೂರು ಮಾಡಿಸಿಕೊಂಡು ಬಂದ ಪರಿಣಾಮ ಕ್ಷೇತ್ರದಲ್ಲಿ ಈಗಲೂ ದಿನನಿತ್ಯ ಒಂದಲ್ಲ ಒಂದು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ. ಶಾಲಾ- ಕಾಲೇಜು, ಆಸ್ಪತ್ರೆ, ಕೆರೆಕಟ್ಟೆಗಳನ್ನು ನಿರ್ಮಿಸಲಾಗಿದೆ. ಕುಡಿಯುವ ನೀರು ವಿದ್ಯುತ್‌ಗೆ ಸಾವಿರಾರು ಕೋಟಿ ರು. ಖರ್ಚು ಮಾಡಲಾಗಿದೆ. ಮೇ 9ರಂದು ಬಿ.ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮಕ್ಕೆ ಕ್ಷೇತ್ರದಿಂದ 50 ಸಾವಿರಕ್ಕೂ ಹೆಚ್ಚು ಜನ ಪಾಲ್ಗೊಳ್ಳುವಂತೆ ಶಾಸಕ ಡಾ.ಎಂ.ಚಂದ್ರಪ್ಪ ಮನವಿ ಮಾಡಿದರು.



ಮೇ 9ರಂದು ನಡೆಯುವ ಬಿಎಸ್‌ವೈ ಅಭಿಮಾನೋತ್ಸವ ಕಾರ್ಯಕ್ರಮದ ಅಂಗವಾಗಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನು ಶಾಸಕ ಡಾ.ಎಂ.ಚಂದ್ರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಸಂಸದ ಕಾರಜೋಳ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಹಲವು ಮುಖಂಡರು ಉಪಸ್ಥಿತರಿದ್ದರು.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ಸುದೀರ್ಘ 50 ವರ್ಷಗಳ ರಾಜಕೀಯ ಪಯಣದಲ್ಲಿ ಬಿ.ಎಸ್.ಯಡಿಯೂರಪ್ಪನವರು 45 ವರ್ಷಗಳ ಕಾಲ ನಿರಂತರ ಹೋರಾಟ ನಡೆಸಿ ಐದು ವರ್ಷಗಳು ಮಾತ್ರ ಅಧಿಕಾರ ಅನುಭವಿಸಿದ್ದಾರೆ. ಅಧಿಕಾರ ಇರಲಿ, ಬಿಡಲಿ ರೈತರು, ಜನಸಾಮಾನ್ಯರು, ಬಡವರು, ಶೋಷಿತರ ಕಣ್ಣೀರೊರೆಸುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಿದ್ದಾರೆ. ಯಾರಿಗೆ ಅನ್ಯಾಯವಾಗುತ್ತದೋ ಅಲ್ಲಿ ಇರುತ್ತಿದ್ದರು. ಮುಖ್ಯಮಂತ್ರಿಯಾಗಿದ್ದಾಗ ರಾಜ್ಯದಲ್ಲಿ ನೆರೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಮನೆಗಳನ್ನು ಕಳೆದುಕೊಂಡವರಿಗೆ ಕೇಂದ್ರ ಸರ್ಕಾರ ನೀಡಿದ 1 ಲಕ್ಷ ರು. ಜೊತೆಗೆ ರಾಜ್ಯದಿಂದ 4 ಲಕ್ಷ ರು. ಸೇರಿಸಿ ಮನೆ ಕಟ್ಟಿಸಿಕೊಳ್ಳಲು ನೆರವಾಗಿದ್ದನ್ನು ಜನ ಇನ್ನು ಮರೆತಿಲ್ಲ ಎಂದು ಹೇಳಿದರು.

ಕೋಟ್ಯಂತರ ಜನರ ಪ್ರೀತಿ ವಿಶ್ವಾಸ ಗಳಿಸಿರುವ ಬಿ.ಎಸ್.ಯಡಿಯೂರಪ್ಪನವರ ಅಭಿಮಾನೋತ್ಸವದಲ್ಲಿ ಜಿಲ್ಲೆಯಿಂದ 10 ಸಾವಿರ ಭಾಗ್ಯಲಕ್ಷ್ಮಿ ಫಲಾನುಭವಿಗಳು ಭಾಗವಹಿಸಲಿದ್ದಾರೆ. ಮೇ 8ರಂದು ಸಂಜೆ ಯಡಿಯೂರಪ್ಪನವರನ್ನು ಭವ್ಯವಾಗಿ ಸ್ವಾಗತಿಸಲಾಗುವುದು. 9ರಂದು ನಡೆಯುವ ಕಾರ್ಯಕ್ರಮಕ್ಕೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ನಾಡಿನ ಮೂಲೆ ಮೂಲೆಗಳಿಂದ ವಿವಿಧ ಮಠಾಧೀಶರು, ರಾಜಕಾರಣಿಗಳು ಆಗಮಿಸಲಿದ್ದಾರೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸದ ಗೋವಿಂದ ಎಂ. ಕಾರಜೋಳ, ಮಾಜಿ ಸಚಿವ ಹರತಾಳ ಹಾಲಪ್ಪ, ಮಾಜಿ ಶಾಸಕ ಪ್ರೀತಮ್‌ಗೌಡ, ಬಿಜೆಪಿ ಜಿಲ್ಲಾಧ್ಯಕ್ಷ ಕೆ.ಟಿ. ಕುಮಾರಸ್ವಾಮಿ, ಯುವ ಮುಖಂಡ ಎಂ.ಸಿ. ರಘುಚಂದನ್, ಹನುಮಂತೆಗೌಡ, ಹೊಳಲ್ಕೆರೆ ಬಿಜೆಪಿ ಮಂಡಲ ಅಧ್ಯಕ್ಷ ಕುಮಾರಣ್ಣ, ಭರಮಸಾಗರ ಮಂಡಲ ಅಧ್ಯಕ್ಷ ಎನ್.ಟಿ.ಬಸವರಾಜ್, ಸಿದ್ದೇಶ್, ಬಿಜೆಪಿ.ಜಿಲ್ಲಾ ಉಪಾಧ್ಯಕ್ಷ ಶೈಲೇಶ್‌ಕುಮಾರ್, ಮಾಧುಸ್ವಾಮಿ, ಪ್ರಧಾನ ಕಾರ್ಯದರ್ಶಿ ಗಿರೀಶ್, ಮಂಜುನಾಥ್, ಪ್ರವೀಣ್‌ಕುಮಾರ್ ಇನ್ನು ಅನೇಕರು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

ಯುವಜನತೆಗೆ ಅಂಬೇಡ್ಕರ್ ವಿಚಾರಧಾರೆ ಅತ್ಯಗತ್ಯ



ಚಳ್ಳಕೆರೆ ನಗರದ ವೆಂಕಟೇಶ್ವರ ನಗರದಲ್ಲಿ ಭಾನುವಾರ ಜೈಭೀಮ್ ಅಂಬೇಡ್ಕರ್‌ಸಂಘ ಹಾಗೂ ವಿವಿಧ ದಲಿತ ಸಂಘಟನೆಗಳು ಆಯೋಜಿಸಿದ್ದ ಬುದ್ಧ-ಬಸವ-ಅಂಬೇಡ್ಕರ್‌ಜಯಂತಿ ಕಾರ್ಯಕ್ರಮದಲ್ಲಿ ಸಾಮಾಜಿಕ ಹೋರಾಟಗಾರ ಹಾಗೂ ವಕೀಲ ಪರಮೇಶ್ ಮೌರ್ಯ ಮಾತನಾಡಿದರು.

• **ಕನ್ನಡಪ್ರಭವಾರ್ತೆ** ಚಳ್ಳಕೆರೆ

ಪ್ರಸ್ತುತ ಸಮಾಜದಲ್ಲಿ ಯುವ ಜನತೆ ಅಂಬೇಡ್ಕರ್ ವಿಚಾರಧಾರೆಗಳನ್ನು ಅರಿತು ಕೊಂಡು ಮುನ್ನಡೆಯಬೇಕಿದೆ ಎಂದು ಸಾಮಾಜಿಕ ಹೋರಾಟಗಾರ, ವಕೀಲ ಪರಮೇಶ್ ಮೌರ್ಯ ಹೇಳಿದರು.

ನಗರದ ವೆಂಕಟೇಶ್ವರ ನಗರದಲ್ಲಿ ಭಾನುವಾರ ಜೈಬೀಮ್ ಅಂಬೇಡ್ಕರ್‌ಸಂಘ ಹಾಗೂ ವಿವಿಧ ದಲಿತಪರ ಸಂಘಟನೆಗಳ ಸಹಯೋಗದಲ್ಲಿ ಆಯೋಜಿಸಿದ್ದ ಬುದ್ಧ, ಬಸವ, ಅಂಬೇಡ್ಕರ್, ಬಾಬೂಜಿ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಬುದ್ಧನ ಆದರ್ಶಗಳು, ಬಸವಣ್ಣನವರ ಸಾಮಾಜಿಕ ಪರಿವರ್ತನಾ ಕಾಯಕ, ಅಂಬೇಡ್ಕರ್‌ಹೋರಾಟ, ಬಾಬು ಜಗಜೀವನರಾಂ ಅವರ ರಾಜಕೀಯ ನಿಲುವುಗಳನ್ನು ಯುವಕರು ತಿಳಿದುಕೊಳ್ಳಲು ಪ್ರಯತ್ನಿಸಬೇಕು ಎಂದರು.

ಸಾಹಿತಿ ಮೋದೂರು ತೇಜ ಮಾತನಾಡಿ, ಬುದ್ಧ ಜಗತ್ತಿಗೆ ಶಾಂತಿ ಅಹಿಂಸೆಯ ತತ್ವ ಬಿತ್ತರಿಸಿ ಹೋದರು. ಆದರೆ, ಬುದ್ಧನ ತತ್ವಗಳ ಬಗ್ಗೆ ಮಾತನಾಡಿದಷ್ಟು ಜೀವನದಲ್ಲಿ ಅಳವಡಿಸಿಕೊಳ್ಳಲು ಮುಂದೆ ಬರಬೇಕು ಎಂದು ತಿಳಿಸಿದರು.

ಈ ವೇಳೆ ಭೀಮನಕೆರೆ ಶಿವಮೂರ್ತಿ, ಕೊರ್ಲಕುಂಟೆ ತಿಪ್ಪೇಸ್ವಾಮಿ ಮಾತನಾಡಿದರು. ಡಿ.ಕರಿಸವರಾಜು, ಕುದಾಪುರ ತಿಪ್ಪೇಸ್ವಾಮಿ, ಹಳೇಟೌನ್ ವೀರಭದ್ರಪ್ಪ, ಜಗದೀಶ್, ನಿಂಗರಾಜ್ ಸೇರಿದಂತೆ ಮತ್ತಿತರರು ಇದ್ದರು.

ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಕ್ಕೆ ನಿರ್ದೇಶಕರ ಆಯ್ಕೆ

• **ಕನ್ನಡಪ್ರಭ ವಾರ್ತೆ** ಹಿರಿಯೂರು

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಹಿರಿಯೂರು ತಾಲೂಕು ಶಾಖೆಗೆ ನಡೆದ ಚುನಾವಣೆಯಲ್ಲಿ 6 ಜನ ಮಹಿಳಾ ಶಿಕ್ಷಕರು ಹಾಗೂ 11 ಜನ ಪುರುಷ ಶಿಕ್ಷಕರು ಸೇರಿ ಒಟ್ಟು 17 ಜನ ಸಂಘದ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ.

ತಾಲೂಕಿನ ಕೆಇಬಿ ಕಾಲೋನಿ ಶಾಲೆಯ ಶಿಕ್ಷಕಿ ಎಚ್. ಲೋಕಮ್ಮ, ಮುಂಗಸವಳ್ಳಿಯ ಸುನಂದಮ್ಮ, ಲಾಯರ್ ದಾಸರಹಳ್ಳಿಯ ವೈ.ಸಿ.ದೇವರತ್ನ, ಭರಮಗಿ ರಿಯ ಜಿ. ಎಸ್.ನವೀನಾ, ಹೇಮದಳದ ಕೆ ಭಾಗ್ಯಮ್ಮ, ಇದ್ದಲ ನಾಗೇನಹಳ್ಳಿಯ ಹಸೀನಾ, ಬೆನಕನಹಳ್ಳಿ ಉಪ್ಪಾರಹಟ್ಟಿಯ ಎಸ್‌ವಿ ನಾಗೇಶ್, ಕೆಆರ್‌ಪುರ ಶಿಕ್ಷಕ ಬಿ.ಜಿ.ಶ್ರೀನಿವಾಸ್, ಬೆಳಗಟ್ಟ ಮುರಳೀಧರ, ತಿರುಮಲನಗರ ಹನುಮಂತರೆಡ್ಡಿ, ವೇದಾವತಿ ನಗರ ಶಾಲೆಯ ಎಚ್.ಶಿವಮೂರ್ತಿ, ಕಾತ್ರಿಕೇನಹಳ್ಳಿ ಕೋಟಿಲಿಂಗಯ್ಯ, ಬಿದರಕೆರೆ ಎಕೆ ಕಾಲೋನಿ ಶಾಲೆಯ ಮಂಜುನಾಥ್ ಟಿ, ಗೌಡನಹಳ್ಳಿಯ ದಾದಾಪೀರ್, ಸಕ್ಕರೆ ಕಾರ್ಖಾನೆ ಶಾಲೆ ಮಹೇಶಣ್ಣ, ಹೂವಿನಹೊಳೆಯ ದಿವ್ಯಾನಾಥ, ನಂಜಯ್ಯನ ಕೊಟ್ಟಿಗೆಯ ಮಂಜುನಾಥ್ ಎಂ.ಜೆ.ಯವರು ನಿರ್ದೇ ಶಕರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಚಿತ್ರಾಲ ಮಹೇಶ್ವರ ರೆಡ್ಡಿ ತಿಳಿಸಿದ್ದಾರೆ.

ಭೂಲೋಕದ ಸಕಲ ಜೀವಿಗಳ ದಾಹ ತಣಿಸಿದ ಭಗೀರಥ ಮಹರ್ಷಿ

ಭಗೀರಥ ಮಹರ್ಷಿ ಜಯಂತಿಯಲಿ ಪುರುಷೋತಮಾನಂದಪುರಿ ಶ್ರೀ



ಹೊಸದುರ್ಗ ತಾಲೂಕಿನ ಅರೇಹಳ್ಳಿ ಗ್ರಾಮದಲ್ಲಿ ನಡೆದ 5ನೇ ವರ್ಷದ ಶ್ರೀ ಭಗೀರಥ ಮಹರ್ಷಿ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಡಾ.ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಅವರನ್ನು ಅಭಿನಂದಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಹೊಸದುರ್ಗ

ಭಗೀರಥ ಮಹರ್ಷಿ ತನ್ನ ಕಠಿಣ ತಪಸ್ಸಿನಿಂದ ಗಂಗೆಯನ್ನು ಭೂಮಿಗೆ ಇಳಿಸಿ, ಭೂಲೋಕದ ಸಕಲ ಜೀವಿಗಳ ದಾಹ ತಣಿಸಿದ ಮಹಾತ್ಮ ಎಂದು ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಹೇಳಿದರು.

ತಾಲೂಕಿನ ಅರೇಹಳ್ಳಿ ಗ್ರಾಮದಲ್ಲಿ ನಡೆದ 5ನೇ ವರ್ಷದ ಶ್ರೀ ಭಗೀರಥ ಮಹರ್ಷಿ ಜಯಂತ್ಯುತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ತಪಸ್ಸು ಮತ್ತು ಸಂಕಲ್ಪವು ಇಡೀ ಮಾನವ ಕುಲಕ್ಕೆ ಪ್ರೇರಣೆಯಾಗಿದೆ ಎಂದರು.

ಕಾಂಗ್ರೆಸ್ ಮುಖಂಡ ಬಿ.ಜಿ.ಅರುಣ್ ಗೋವಿಂದಪ್ಪ ಮಾತನಾಡಿ, ಭಾರತೀಯ ಸಂಸ್ಕೃತಿ ಇಡೀ ಪ್ರಪಂಚದಲ್ಲಿಯೇ ವಿಶಿಷ್ಟತೆ ಹೊಂದಿದ್ದು, ಅನೇಕ ದಾರ್ಶನಿಕರು, ಸಾಧು ಸಂತರು, ಸತ್ಪುರುಷರನ್ನು ಪ್ರಪಂಚಕ್ಕೆ ಕೊಡುಗೆ ನೀಡಿದೆ. ಇವರೆಲ್ಲರೂ ಸಕಲ ಮನುಕುಲಕ್ಕೆ ದಾರಿದೀಪವಾಗಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡ ಶಿವರಾಜಕುಮಾರ್, ತಾಪಂ ಮಾಜಿ ಸದಸ್ಯ ನಿರಂಜನಮೂರ್ತಿ, ಗ್ರಾಪಂ ಮಾಜಿ ಸದಸ್ಯರಾದ ಮಲ್ಲೇಶಪ್ಪ, ಹನುಮಕ್ಕ, ಮುಖ್ಯ ಶಿಕ್ಷಕ ಶಿವಕುಮಾರ್, ಶಿಕ್ಷಕರಾದ ನೀಲಕಂಠಪ್ಪ, ಬಸವರಾಜ್, ತಾಲೂಕು ಉಪ್ಪಾರ ಸಂಘದ ನಿರ್ದೇಶಕರಾದ ಲಕ್ಕಮ್ಮ, ಗಿರಿಜಮ್ಮ, ಗ್ರಾಮಸ್ಥರು ಮತ್ತಿತರರಿದ್ದರು.

ಅರೇಹಳ್ಳಿ ಗ್ರಾಮದಿಂದ ಮತ್ತೋಡು ಗ್ರಾಮದವರೆಗೆ ತೆರೆದ ವಾಹನದಲ್ಲಿ ಶ್ರೀ ಭಗೀರಥ ಮಹರ್ಷಿ ಅವರ ಭಾವಚಿತ್ರದೊಂದಿಗೆ ಮೆರವಣಿಗೆ ನಡೆಸಲಾಯಿತು.

ನ್ಯಾಯವೇ ದೇವರು | **ಜಿಲ್ಲಾ ನ್ಯಾಯಾಲಯದ ಆಡಳಿತಾತ್ಮಕ ನ್ಯಾಯಮೂರ್ತಿ ವಿ.ಶ್ರೀಶಾನಂದ ಮಾಹಿತಿ**

ಚಿತ್ರದುರ್ಗಕ್ಕೆ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಮಂಜೂರು

• **ಕನ್ನಡಪ್ರಭ ವಾರ್ತೆ** ಚಿತ್ರದುರ್ಗ

ಚಿತ್ರದುರ್ಗದ ಈಗಿನ ನ್ಯಾಯಾಲಯದ ಕಟ್ಟಡ ಅತ್ಯಂತ ಹಳೆಯದಾಗಿದ್ದು, ಹೆಚ್ಚುತ್ತಿರುವ ಜನದಟ್ಟಣೆಗೆ ಸ್ಥಳಾವಕಾಶದ ಕೊರತೆ ಎದುರಾ ಗಿದೆ. ಈ ಹಿನ್ನೆಲೆಯಲ್ಲಿ ಚಿತ್ರದುರ್ಗಕ್ಕೆ ಹೆಚ್ಚುವರಿ ಜಿಲ್ಲಾ ನ್ಯಾಯಾಲಯವನ್ನು ಮಂಜೂರು ಮಾಡಲು ತೀರ್ಮಾನಿಸಲಾಗಿದೆ ಎಂದು ಉಚ್ಚ ನ್ಯಾಯಾ ಲಯ ಹಾಗೂ ಜಿಲ್ಲಾ ನ್ಯಾಯಾ ಲಯದ ಆಡಳಿತಾತ್ಮಕ ನ್ಯಾಯಮೂರ್ತಿ ವಿ.ಶ್ರೀಶಾನಂದ ತಿಳಿಸಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಡಳಿತ ಈಗಾಗಲೇ ಅಗತ್ಯ ಜಾಗವನ್ನು ಗುರುತಿಸಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒಳ ಗೊಂಡ ನ್ಯಾಯಾಲಯದ ಕಟ್ಟಡ ನಿರ್ಮಾಣಕ್ಕೆ ನೀಲನಕ್ಷೆ ರೂಪಿಸಲಾಗುವುದು. ಇದಕ್ಕೆ ಸರ್ಕಾರ ಲೋಕೋಪಯೋಗಿ ಇಲಾಖೆ ಅನುದಾನ ಬಿಡುಗಡೆ ಜಿಲ್ಲಾ ಪ್ರಧಾನ ನ್ಯಾಯಾಧೀಶರು ಮತ್ತು ವಕೀಲರ ಸಂಘದವರು ನಿರಂತರ ಪ್ರಯತ್ನ ನಡೆಸುತ್ತಿದ್ದಾರೆ. ಈ ವಿಚಾರದಲ್ಲಿ ಸ್ಥಳೀಯ ಜನಪ್ರತಿನಿಧಿಗಳು ಮತ್ತು ಸಾರ್ವಜ ನಿಕರು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಒಗ್ಗಟ್ಟಿನಿಂದ ಸರ್ಕಾರವನ್ನು ಒತ್ತಾಯಿಸಬೇಕು ಎಂದರು.



ಉಚ್ಚ ನ್ಯಾಯಾಲಯ ಹಾಗೂ ಜಿಲ್ಲಾ ನ್ಯಾಯಾಲಯದ ಆಡಳಿತಾತ್ಮಕ ನ್ಯಾಯಮೂರ್ತಿ ವಿ.ಶ್ರೀಶಾನಂದ, 'ಸಮಾಧಾನ್ ಸಮರೋಹ್' ವಿಶೇಷ ಲೋಕ್ ಅದಾಲತ್ ಕುರಿತು ಮಾಹಿತಿ ನೀಡಿದರು.

ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ಹಾಗೂ ಸೌಹಾರ್ದಯುತವಾಗಿ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಮುಂಬರುವ ಆಗಸ್ಟ್ 21, 22 ಮತ್ತು 23 ರಂದು 'ಸಮಾಧಾನ್ ಸಮರೋಹ್'''' ಎಂಬ ವಿಶೇಷ ಲೋಕ್ ಅದಾಲತ್ ಆಯೋಜಿಸಲಾಗಿದೆ. ಈ ಪೈಕಿ ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದ 58 ಪ್ರಕರಣಗಳನ್ನು ರಾಜಿ ಸಂಧಾನಕ್ಕೆ ಅರ್ಹವೆಂದು ಗುರುತಿಸಿ ಪ್ರಕರಣಗಳ ಇತ್ಯರ್ಥಕ್ಕೆ ಪ್ರಯತ್ನಿಸಲಾಗುತ್ತಿದೆ ಎಂದರು.

ನ್ಯಾಯಾಲಯಗಳಲ್ಲಿ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ತೀರ್ಪು ವಿಳಂಬವಾಗುತ್ತಿರು ವುದು ಕಳವಳಕಾರಿ ಸಂಗತಿಯಾಗಿದೆ. ಈ ನಿಟ್ಟಿನಲ್ಲಿ ಮಧ್ಯಸ್ಥಿಕೆ ಕೇಂದ್ರಗಳು ಹಾಗೂ ಲೋಕ್ ಅದಾಲತ್‌ಗಳ ಮೂಲಕ ಸಂಧಾನದ ಹಾದಿಯಲ್ಲಿ ಪ್ರಕರಣಗಳನ್ನು ಮುಗಿಸುವುದು ಉಭಯ ಪಕ್ಷಗಾರರಿಗೂ ಲಾಭದಾಯಕವಾ ಗಿದೆ. ಜಿಲ್ಲೆಯ 58 ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಪ್ರಕ್ರಿಯೆಗಳು ಈಗಾಗಲೇ ಆರಂಭವಾಗಿವೆ. ಇದಕ್ಕೆ ಜಿಲ್ಲಾಡಳಿತ, ವಕೀಲರು ಹಾಗೂ ಪಕ್ಷಗಾರರ ಸಹಕಾರ ಅತ್ಯಗತ್ಯವಾಗಿದೆ ಎಂದರು.

ಸುಪ್ರೀಂಕೋರ್ಟ್ ನಿರ್ದೇಶನದಂತೆ ರಾಜ್ಯಾದ್ಯಂತ ಒಟ್ಟು 4,328 ಪ್ರಕರಣಗಳನ್ನು ಈ ಪ್ರಕ್ರಿಯೆಗಾಗಿ ಗುರುತಿಸಲಾಗಿದೆ. ಇದರಲ್ಲಿ ಬೆಂಗಳೂರು ನಗರದಲ್ಲಿ ಅತಿ ಹೆಚ್ಚು ಅಂದರೆ 1,245 ಪ್ರಕರಣಗಳಿದ್ದರೆ, ಬೆಂಗಳೂರು ಗ್ರಾಮಾಂತರದಲ್ಲಿ 18 ಪ್ರಕರಣಗಳಿವೆ. ಬೆಳಗಾವಿ ಸೇರಿದಂತೆ ವಿವಿಧ ಜಿಲ್ಲೆಗಳ ಪ್ರಕರಣಗಳ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಸುಪ್ರೀಂ ಕೋರ್ಟ್ ಹಂತಕ್ಕೆ ಹೋಗಿರುವ ಪ್ರಕರಣಗಳಲ್ಲಿನ ಉಭಯ ಪಕ್ಷಕಾರರನ್ನು ಕರೆಸಿ, ಅವರಿಗೆ ನ್ಯಾಯಾಲಯದ ದೃಷ್ಟಿಯಿಂದ ಯಾವ ರೀತಿ ಸಮಾಧಾನ ಮತ್ತು ರಾಜಿಸೂತ್ರಗಳನ್ನು ಏರ್ಪಡಿಸಿಕೊಳ್ಳಬಹುದು ಎಂಬ ಬಗ್ಗೆ ಚಿಂತನೆ ನಡೆಸಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸತ್ರ ಮತ್ತು ಪ್ರಧಾನ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ, ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್‌ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಡಾ.ಕೆ.ಜೆ.ಕಾಂತರಾಜು, ವಕೀಲರ ಸಂಘದ ಅಧ್ಯಕ್ಷ ಮಹೇಶ್ವರಪ್ಪ ಇದ್ದರು.

> ನಾನು ಬಿಜೆಪಿಗೆ ಬರುವ ಯಾವುದೇ ಮಾತುಕತೆಗಳು ನಡೆದಿಲ್ಲ. ಹೊಸ ಪಕ್ಷ ಸ್ಥಾಪನೆ ಮಾಡಲು ಕುಳ್ಳುಮಲೆ ಗಣಪತಿ ದೇವಸ್ಥಾನದಲ್ಲಿ ಪೂಜೆ ನಡೆಸಿ ಹೊಸ ಪಕ್ಷ ಸ್ಥಾಪನೆ ಮಾಡುವ ಬಗ್ಗೆ ದೇವರಲ್ಲಿ ಕೇಳಿದಾಗ ಶುಭ ಸೂಚನೆ ಸಿಕ್ಕಿದೆ. ರಾಜ್ಯದ ಜನತೆಗೆ ಪರ್ಯಾಯ ಪಕ್ಷ ಅನಿವಾರ್ಯವಾಗಿದ್ದು, ನಾನು ರಾಜ್ಯದ ಯಾವುದೇ ಮೂಲೆಗೆ ಹೋದರೂ ಅಧಿಕ ಸಂಖ್ಯೆಯಲ್ಲಿ ಜನರು ಸೇರುತ್ತಿದ್ದಾರೆ.
>
> • **ಬಸನಗೌಡ ಪಾಟೀಲ್ ಯತ್ನಾಳ್** ಶಾಸಕ.

ಸುದ್ದಿ ಸಿಂಚನ

ತಾಲೂಕು ಶ.ಸಾ.ಪ.ದಿಂದ ಕಾಯಕ ದಿನಾಚರಣೆ



ಚನ್ನಗಿರಿ: ತಾಲೂಕು ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಕಾಯಕ ದಿನ ಕಾರ್ಯಕ್ರಮವನ್ನು ಇಲ್ಲಿನ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಕಾಯಕ ಜೀವಿಗಳಾದ ಅನಾಥ ಶವಗಳನ್ನು ಅಂತ್ಯಸಂಸ್ಕಾರ ಮಾಡಿಸುವಂತಹ ಜಾಕಿರ್ ಅಲಿ, ಮಡಿವಾಳ ಸಮುದಾಯದ ಮನು, ಪತ್ರಿಕೆ ವಿತರಕ ಬಸವರಾಜ್, ಹಡಪದ ಅಪ್ಪಣ್ಣ ಸಮಾಜದ ದಿನೇಶ್, ಹರಳಯ್ಯ ಸಮಾಜದ ರಂಗಪ್ಪ ಈ ಕಾಯಕ ಜೀವಿಗಳಿಗೆ ಪರಿಷತ್ ವತಿಯಿಂದ ಗೌರವಿಸಲಾಯಿತು. ಪರಿಷತ್ ಗೌರವ ಅಧ್ಯಕ್ಷ ಎಚ್,ಎಸ್.ಮಲ್ಲಿಕಾರ್ಜುನ್, ತಾಲೂಕು ಅಧ್ಯಕ್ಷ ಎಂ.ಎಸ್. ಮಲ್ಲೇಶಪ್ಪ, ಕಾರ್ಯದರ್ಶಿ ಜಿ.ಎಸ್. ಚಂದ್ರಪ್ಪ, ಖಜಾಂಚಿ ಶಿವಲಿಂಗಪ್ಪ, ಎನ್.ಎಸ್.ರಾಜಪ್ಪ, ಟಿ.ಮಂಜಪ್ಪ, ಸಿದ್ದಯ್ಯ, ಜಿ.ಎಸ್.ಶಂಕರಪ್ಪ, ನಾಗೇಂದ್ರಪ್ಪ ಮೊದಲಾದವರು ಹಾಜರಿದ್ದರು.

ಬಿಸಿಲಿನ ತಾಪ: ಆಂಧ್ರದಲ್ಲಿ ಜಗಳೂರಿನ ಮಹಮ್ಮದ್ ಫಯಾಜ್ ಬಲಿ

ಜಗಳೂರು: ಪಟ್ಟಣದ ಮೇಕ ಸೂರ್ಯನಾರಾಯಣ ಬಡಾವಣೆಯ ನಿವಾಸಿ, ನಿವೃತ್ತ ಶಿಕ್ಷಕ ಇಬ್ರಾಹಿಂ ಸಾಬ್ ಪುತ್ರ ಎಂ.ಐ. ಮಹಮ್ಮದ್ ಫಯಾಜ್ (52) ಬಿಸಿಲಿನ ತಾಪಕ್ಕೆ ಬಸವಳಿದು ಶನಿವಾರ ಮಧ್ಯಾಹ್ನ 1.30ರ



ಸುಮಾರಿಗೆ ಆಂಧ್ರಪ್ರದೇಶ ರಾಜ್ಯದ ಅಧೋನಿ ಸಮೀಪದ ಗುಡಿಕಲ್‌ನಲ್ಲಿ ಮೃತಪಟ್ಟಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಆರೋಗ್ಯದಲ್ಲಿ ಯಾವುದೇ ಸಮಸ್ಯೆ ಇರಲಿಲ್ಲ. ಕುಟುಂಬದ ಸದಸ್ಯರೊಂದಿಗೆ ಭಕ್ತಿ-ಭಾವದೊಂದಿಗೆ ಉರುಸ್‌ನಲ್ಲಿ ಭಾಗವಹಿಸಿದ್ದರು. ಈ ವೇಳೆ ಬಿಸಿಲಿನ ತಾಪ ತಾಳಲಾರದೇ ಗುಡಿಕಲ್‌ನಲ್ಲೇ ಮೃತಪಟ್ಟಿದ್ದಾರೆ. ಸ್ಥಳೀಯರ ನೆರವಿನಿಂದ ಕುಟುಂಬದ ಸದಸ್ಯರು ಮಹಮ್ಮದ್ ಮೃತದೇಹವನ್ನು ಆಂಬ್ಯುಲೆನ್ಸ್ ಮೂಲಕ ಭಾನುವಾರ ತಡರಾತ್ರಿ ಪಟ್ಟಣಕ್ಕೆ ತಂದಿದ್ದಾರೆ. ಅನಂತರ ಅವರ ನಿವಾಸದಲ್ಲಿ ಅಂತಿಮ ದರ್ಶನ ಬಳಿಕ ಖಬರಸ್ಥಾನದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ತಿಳಿಸಲಾಗಿದೆ.

ಕಸಾಪ ಸಂಸ್ಥಾಪನಾ ದಿನಾಚರಣೆ ನಾಳೆ

ದಾವಣಗೆರೆ: ತಾಲೂಕು ಕನ್ನಡ ಸಾಹಿತ್ಯ ಪರಿಷತ್‌ನಿಂದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನ ಕಾರ್ಯಕ್ರಮವನ್ನು ಮೇ 5ರಂದು ಇಲ್ಲಿನ ಎಂಸಿಸಿ ಬಿ ಬ್ಲಾಕ್‌ನಲ್ಲಿರುವ ಡೆಂಟಲ್ ಕಾಲೇಜು ರಸ್ತೆಯ ಸರ್ಕಾರಿ ಪಥಮ ದರ್ಜೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ 11 ಗಂಟೆಗೆ ಕಾಲೇಜಿನ ಪ್ರಾಚಾರ್ಯ ಬಸವರಾಜ ಸಿ. ತಹಸೀಲ್ದಾರ್ ಅಧ್ಯಕ್ಷತೆಯಲ್ಲಿ ಕಸಾಪ ಜಿಲ್ಲಾಧ್ಯಕ್ಷ ಬಿ.ವಾಮದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಡಾ. ಎ.ಬಿ. ರಾಮಚಂದ್ರಪ್ಪ ಜನಸಾಮಾನ್ಯರತ್ತ ಕನ್ನಡ ಸಾಹಿತ್ಯ ಪರಿಷತ್ತು ವಿಷಯ ಕುರಿತು ಉಪನ್ಯಾಸ ನೀಡುವರು. ಉಪನ್ಯಾಸಕ ಡಾ. ಜಿ.ಇ.ಅಜ್ಜಪ್ಪ, ಕೆ.ಸಿ.ಲಿಂಗರಾಜ ಆನೆಕೊಂಡ, ಸತ್ಯಭಾಮ ಮಂಜುನಾಥ, ಷಡಕ್ಷರಪ್ಪ ಎಂ.ಬೇತೂರು, ಪರಮೇಶ್ವರಪ್ಪ ದಾಗಿನಕಟ್ಟೆ, ಪರಿಮಳ ಜಗದೀಶ, ಸುಮತಿ ಜಯಪ್ಪ ಇತರರು ಭಾಗವಹಿಸುವರು.

ಚನ್ನಬಸಪ್ಪ ಬಡಾವಣೆ ರಸ್ತೆ ಶೀಘ್ರ ದುರಸ್ತಿಗೆ ಮನವಿ

ದಾವಣಗೆರೆ: ಇಲ್ಲಿನ ಪೈಲ್ವಾನ್ ಚನ್ನಬಸಪ್ಪ ಬಡಾವಣೆಯ 60 ಅಡಿ ರಸ್ತೆಯನ್ನು 3 ತಿಂಗಳ ಹಿಂದೇ ಕಿತ್ತಿದ್ದಾರೆ. ಆದರೆ, ಇದುವರೆಗೂ ರಸ್ತೆ ಸರಿಪಡಿಸಿಲ್ಲ. ಈ ಕೂಡಲೇ ರಸ್ತೆ ದುರಸ್ತಿಗೆ ಕ್ರಮ ಕೈಗೊಳ್ಳಬೇಕೆಂದು ಪೈಲ್ವಾನ್ ಚನ್ನಬಸಪ್ಪ ಬಡಾವಣೆಯ ನಾಗರೀಕರು ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ. ರಸ್ತೆ ಅವ್ಯವಸ್ಥೆಯಿಂದ ಹಿರಿಯರು, ವಿದ್ಯಾರ್ಥಿಗಳು, ಮಹಿಳೆಯರಿಗೆ ಓಡಾಡಲು ಬಹಳ ತೊಂದರೆಯಾಗುತ್ತಿದೆ. ಈ ಬಡಾವಣೆಯ ಸಮೀಪದಲ್ಲಿ ಮಂಜುನಾಥ ಬಡಾವಣೆ, ಬಾದಾಮಿ ಬಡಾವಣೆ, ಎಸ್‌ಎಸ್‌ಎಂ ಶಾಲೆ ಇದ್ದು, ಅನೇಕ ಕಟ್ಟಡಗಳನ್ನು ಕಟ್ಟುತ್ತಿದ್ದಾರೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆ ಆಗುತ್ತಿದೆ. ಸದರಿ ಬಡಾವಣೆಗಳಿಗೆ ಸಂಪರ್ಕಿಸುವ ರಸ್ತೆ ಇದಾಗಿದೆ. ಈ ಕೂಡಲೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದು ರಸ್ತೆ ಸರಿಪಡಿಸಿಕೊಡಬೇಕೆಂದು ನಾಗರೀಕರು ಮನವಿ ಸಲ್ಲಿಸಿದ್ದಾರೆ.





ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆ ಮತ ಎಣಿಕೆ ಕೇಂದ್ರಕ್ಕೆ ಭಾನುವಾರ ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳಾದ ಜಿ.ಎಂ. ಗಂಗಾಧರ ಸ್ವಾಮಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ, ಚುನಾವಣಾಧಿಕಾರಿ ಸಂತೋಷ ಕುಮಾರ, ತಹಸೀಲ್ದಾರ್ ಗುರುಬಸವರಾಜ, ಪಾಲಿಕೆ ಕಾರ್ಯಪಾಲಕ ಅಭಿಯಂತರ ಉದಯಕುಮಾರ ಇದ್ದರು.



ದಾವಣಗೆರೆಯ ಮತ ಎಣಿಕೆ ಕೇಂದ್ರದಲ್ಲಿ ಮಾಧ್ಯಮ ಕೇಂದ್ರವನ್ನು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ ಪರಿಶೀಲಿಸಿದರು. ಚುನಾವಣಾಧಿಕಾರಿ ಸಂತೋಷ ಕುಮಾರ ಇತರರು ಇದ್ದರು.

ಸಮರ್ಥ ಆಯ್ಕೆಯೋ?, ಶ್ರೀನಿವಾಸ ಕಲ್ಯಾಣವೋ?

ಎಸ್‌ಡಿಪಿಐ ಅಭ್ಯರ್ಥಿ ಅಫ್ಸರ್ ಸ್ಪರ್ಧೆಯಿಂದ 'ಕೊಡ್ಲಿ ಪೆಟ್ಟು' ಯಾರಿಗೆ? | ಇಬ್ರಾಹಿಂ ಬೆಂಬಲಿತ 'ವಜ್ರ'ದ ಅಭ್ಯರ್ಥಿ ಜಾದೂ ನಡೆದಿದೆಯಾ?

• **ನಾಗರಾಜ ಎಸ್. ಬಡದಾಳ್**
ಕನ್ನಡಪ್ರಭ ವಾರ್ತೆ ದಾವಣಗೆರೆ

ಕ್ಷೇತ್ರ ಅಸ್ತಿತ್ವಕ್ಕೆ ಬಂದಾಗಿನಿಂದ ಕಾಂಗ್ರೆಸ್ಸಿನ ಭದ್ರಕೋಟೆ ಯೆಂದೇ ಪ್ರಸಿದ್ಧಿ ಪಡೆದಿದ್ದ, ಹಿರಿಯ ಶಾಸಕರಾಗಿದ್ದ ಡಾ.ಶಾಮನೂರು ಶಿವಶಂಕರಪ್ಪ ಇಲ್ಲದ ಮೊದಲ ಉಪ ಚುನಾವಣೆಗೆ ಕಾರಣವಾದ ದಾವಣಗೆರೆ ದಕ್ಷಿಣ ಕ್ಷೇತ್ರದ ಫಲಿತಾಂಶಕ್ಕೆ ಕ್ಷಣಗಣನೆ ಶುರುವಾಗಿದ್ದು, ಈ ಬೆನ್ನಲ್ಲೇ ಬಾಜಿ ಕಟ್ಟಿ ಮೀಸೆ ತಿರುವವರ ಸಂಖ್ಯೆಯೂ ಕ್ಷೇತ್ರ, ಜಿಲ್ಲೆಯಲ್ಲಿ ಕಡಿಮೆಯೇನಿಲ್ಲ!

ದಾವಣಗೆರೆ ಲೋಕಸಭಾ ಕ್ಷೇತ್ರದ ಬಹುತೇಕ ವಿಧಾನಸಭಾಕ್ಷೇತ್ರಗಳು ಒಮ್ಮೆ ಕಾಂಗ್ರೆಸ್, ಇನ್ನೊಮ್ಮೆ ಬಿಜೆಪಿ ಒಲಿದಿವೆ. ಸಾಂಪ್ರಾದಾಯಿಕ ವೈರಿಗಳಾದ ಕಾಂಗ್ರೆಸ್-ಬಿಜೆಪಿ ಮಧ್ಯೆ ಸ್ಪರ್ಧೆ ಇದ್ದರೆ, ಹರಿಹರ ಕ್ಷೇತ್ರ ಕಾಂಗ್ರೆಸ್- ಬಿಜೆಪಿ- ಜೆಡಿಎಸ್ ತ್ರಿಕೋನ ಸ್ಪರ್ಧೆಗೆ ಹೆಸರಾಗಿದೆ. ಆದರೆ, ದಾವಣಗೆರೆ ದಕ್ಷಿಣ ಕ್ಷೇತ್ರ ಮಾತ್ರ ಶಾಮನೂರು ಶಿವಶಂಕರಪ್ಪ ಅವರಿಂದಾಗಿ ಕಾಂಗ್ರೆಸ್ಸಿನ ಭದ್ರಕೋಟೆಯಾಗಿ, ಬಿಜೆಪಿ ಪಾಲಿಗೆ ಕಬ್ಬಿಣದ ಕಡಲೆಯಾಗಿತ್ತು.

ಬದಲಾದ ಕಾಲಘಟ್ಟದಲ್ಲಿ ಕಾಂಗ್ರೆಸ್ಸಿನ ಭದ್ರಕೋಟೆಯಾಗಿ ಕಾಯ್ದುಕೊಂಡಿದ್ದ ಅಲ್ಪಸಂಖ್ಯಾತ ಮುಸ್ಲಿಮರು ಮೊದಲ ಸಲ ಟಿಕೆಟ್ ಗೆ ಧ್ವನಿ ಎತ್ತಿದ್ದರಿಂದ ಆ ಪಕ್ಷದಲ್ಲೂ ಎರಡು ಗುಂಪುಗಳಾಗಿ, ಸಮುದಾಯದಲ್ಲೂ 3-4 ಗುಂಪುಗಳಾಗಿದ್ದರಿಂದ ಉಪ ಚುನಾವಣೆಯಲ್ಲಿ ಮತಗಳ ವಿಭಜನೆಯಿಂದಾಗಿ ಕಾಂಗ್ರೆಸ್ಸಿಗೆ ಒಂದಿಷ್ಟು ತಲೆನೋವು ತಂದಿದೆ. ಲೋಕಸಭೆ ಚುನಾವಣೆ ವೇಳೆ ಮನೆಯೊಂದು, ಹಲವು ಬಾಗಿಲಂತಾಗಿದ್ದ ಬಿಜೆಪಿಗೆ ಬಂದಿದ್ದ ಸ್ಥಿತಿಯನ್ನೇ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಎದುರಿಸಿದ್ದು ಸೋಜಿಗ. ಇದರ ಜೊತೆಗೆ ಎಸ್‌ಡಿಪಿಐ, ಪಕ್ಷೇತರ ಅಭ್ಯರ್ಥಿ ಸಹ ಕಾಂಗ್ರೆಸ್ಸಿಗೆ ತಲೆನೋವು ತಂದಿದ್ದಾರೆ.

ದಕ್ಷಿಣ ಕ್ಷೇತ್ರ ದಂಗಲ್

ಡಿಸ್ಕೌಂಟ್, ಬೆಟ್ಟಿಂಗ್ ಭರಾಟೆ!

ದಕ್ಷಿಣ ಕ್ಷೇತ್ರದಲ್ಲಿ ಯಾರು ಗೆಲ್ಲುತ್ತಾರೆಂಬ ಬಗ್ಗೆ ಎರಡೂ ಪ್ರಮುಖ ಪಕ್ಷಗಳು, ಅಭ್ಯರ್ಥಿಗಳ ಬೆಂಬಲಿಗರು ಬಾಜಿ ಕಟ್ಟಿದ್ದಾರೆಂಬ ಮಾತುಕೇಳಿ ಬರುತ್ತಿವೆ. ಈ ಉಪ ಚುನಾವಣೆಯಲ್ಲಿ ಬಾಜಿ ಕಟ್ಟಿ ಮೀಸೆ ತಿರುವುವಂತಹ ಧೈರ್ಯ ಯಾರೂ ಮಾಡಿಲ್ಲ. ಆದರೂ, ಕೆಲವರು ತಮ್ಮ ನಾಯಕರ ಮೆಚ್ಚಿಸಲು, ಗಮನ ತಮ್ಮೆಡೆ ಸೆಳೆಯುವುದಕ್ಕೇನೋ ಎಂಬಂತೆ ತಮ್ಮ ಊರಿನಲ್ಲಿ ಅಷ್ಟು ಲಕ್ಷ ಬೆಟ್ ಕಟ್ಟಿದ್ದಾರೆ, ಇಷ್ಟು ಹೊಲ ಪಣಕ್ಕೆ ಇಟ್ಟಿದ್ದಾರೆ ಎಂದೆಲ್ಲಾ ಹೇಳುತ್ತಿದ್ದಾರೆ. ಮತ್ತೆ ಕೆಲವರು ಡಿಸ್ಕೌಂಟ್ ಕೇಳಿ, ತಡರಾತ್ರಿವರೆಗೂ ಕಾಯುತ್ತೇವೆಂಬ ಮಾತುಗಳನ್ನು ಹೇಳಿರುವುದು ಹಳೆ ಭಾಗದಲ್ಲಿ, ಗ್ರಾಮೀಣ ಪ್ರದೇಶದಲ್ಲೂ ಕೇಳಿಬರುತ್ತಿದೆ. ಆದರೆ, ತಮ್ಮ ಅಭ್ಯರ್ಥಿಯೇ ಗೆಲ್ಲುತ್ತಾನೆಂದು ಹೇಳಿಕೊಳ್ಳುವಂತಹ ಧೈರ್ಯ ಯಾವುದೇ ಪಕ್ಷ ತೋರದಿದ್ದರೂ, ದಾವಣಗೆರೆ ದಕ್ಷಿಣ ಕ್ಷೇತ್ರ ಫಲಿತಾಂಶ ಕೆಲವೇ ಸಾವಿರ ಮತಗಳ ಅಂತರದ್ದೆಂಬುದು ಸ್ವತಃ ಉಭಯ ಪಕ್ಷಗಳಿಗೂ ಗೊತ್ತಿರುವ ಸತ್ಯವಾಗಿದೆ.

ದಕ್ಷಿಣ ಕ್ಷೇತ್ರದ ಒಟ್ಟು ಮತದಾನ ಪ್ರಮಾಣ

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಏ.9ರಂದು ನಡೆದ ಉಪ ಚುನಾವಣೆಯಲ್ಲಿ ಶೇ.68.55ರಷ್ಟು ಮತದಾನವಾಗಿತ್ತು. ಈ ಪೈಕಿ ಗ್ರಾಮೀಣ ಪ್ರದೇಶದಲ್ಲಿ ಶೇ.84.36ರಷ್ಟು ಹಾಗೂ ನಗರ ಪ್ರದೇಶದಲ್ಲಿ ಶೇ.65.59ರಷ್ಟು ಮತದಾನವಾಗಿತ್ತು. ಇದೀಗ ಮೇ 4ರಂದು ದಾವಣಗೆರೆ ಡಿಆರ್‌ಆರ್‌ಶಾಲೆಯ ಮತ ಎಣಿಕಾ ಕೇಂದ್ರದಲ್ಲಿ ಕ್ಷೇತ್ರ ಉಪ ಚುನಾವಣೆಯ ಮತ ಎಣಿಕೆ ಕಾರ್ಯ ನಡೆಯಲಿದ್ದು, ಇಡೀ ಜಿಲ್ಲೆ, ರಾಜ್ಯದ ಗಮನವನ್ನು ದಿವಂಗತ ಶಾಮನೂರು ಶಿವಶಂಕರಪ್ಪ ಪ್ರತಿನಿಧಿಸುತ್ತಿದ್ದ ಕ್ಷೇತ್ರ ಸೆಳೆದಿದೆ.





ಉಪ ಚುನಾವಣೆ ಕಾರಣಕ್ಕೆ ಮುಸ್ಲಿಮರಿಗೆ, ಅಹಿಂದ ವರ್ಗಕ್ಕೆ ಟಿಕೆಟ್ ಕೊಡುವಂತೆ ಕೇಳಿದ್ದ ಕೆ. ಅಬ್ದುಲ್ ಜಬ್ಬಾರ್ ತಲೆದಂಡವಾಗಿದೆ. ಇನ್ನೂ ಆರು ಜನರನ್ನು ಕಾಂಗ್ರೆಸ್ ಜಿಲ್ಲಾ ಸಮಿತಿಯೇ ಉಚ್ಚಾಟನೆಗೆ ಕೆಪಿಸಿಸಿ ಶಿಸ್ತು ಸಮಿತಿಗೆ ಶಿಫಾರಸು ಮಾಡಿದೆ. ಉಪ ಚುನಾವಣೆ ಕಾಂಗ್ರೆಸ್ಸಿಗೆ ಪ್ರತಿಷ್ಠೆಯದ್ದಾಗಿದ್ದು, ಬಿಜೆಪಿ ಇಲ್ಲಿ ಫಲಿತಾಂಶದಿಂದ ಗಳಿಸುವುದು, ಕಳೆದುಕೊಳ್ಳುವುದೇನೂ ಇಲ್ಲ. ಆದರೆ, ದಿಕ್ಕಿಗೆ ಒಬ್ಬರಂತಾಗಿದ್ದ ಬಿಜೆಪಿ ನಾಯಕರಿಗೆ ಒಗ್ಗಟ್ಟಿನ ಮಂತ್ರ ಜಪಿಸುವಂತೆ ಮಾಡಿದ್ದು ಈ ಉಪ ಚುನಾವಣೆ. 2028ರ ಸಾರ್ವತ್ರಿಕ ಚುನಾವಣೆ ಗೆದ್ದರೆ ಬಿಜೆಪಿ ಶಕ್ತಿ ಉದ್ದೀಪನಗೊಳಿಸುವುದು ಸತ್ಯ.

ದಕ್ಷಿಣ ಕ್ಷೇತ್ರದಲ್ಲಿ ಇದೇ ಮೊದಲ ಬಾರಿಗೆ ಎರಡೂ ಪ್ರಮುಖ ಪಕ್ಷಗಳಿಂದ ಸ್ಪರ್ಧಿಸಿರುವುದು ಹೊಸ ಮುಖಗಳೇ. ಕಾಂಗ್ರೆಸ್ಸಿನ ಸಮರ್ಥ ಎಂ. ಶಾಮನೂರುಗೆ ರಾಜಕೀಯ ಹೊಸದಲ್ಲ. ಆದರೆ, ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿರುವುದು ಚೊಚ್ಚಲ ಪ್ರಯತ್ನ. ಅದೇ ರೀತಿ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ಟಿ. ದಾಸಕರಿಯಪ್ಪಗೂ ರಾಜಕಾರಣ ಹೊಸದಲ್ಲ. ಚುನಾವಣೆ ಕಣಕ್ಕೆ ಇಳಿದಿದ್ದು ಇದೇ ಮೊದಲು. ಹಾಗಾಗಿ, ಸಾಂಪ್ರಾದಾಯಿಕ ವೈರಿಗಳಾದ ಕಾಂಗ್ರೆಸ್- ಬಿಜೆಪಿ ಮಧ್ಯೆ ನೇರ ಸ್ಪರ್ಧೆ ಇದ್ದು, ಎಸ್‌ಡಿಪಿಐ ಅಭ್ಯರ್ಥಿ, ಕೇಂದ್ರ ಮಾಜಿ ಸಚಿವ ಸಿ.ಎಂ. ಇಬ್ರಾಹಿಂ ಬೆಂಬಲಿತ ಪಕ್ಷೇತರ ಅಭ್ಯರ್ಥಿ, ಮುಸ್ಲಿಂ ಅಭ್ಯರ್ಥಿಗಳು ಪಡೆಯುವ ಮತ ಫಲಿತಾಂಶದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಹೆಚ್ಚಾಗಿದೆ.

ಮೇಲ್ನೋಟಕ್ಕೆ ಕಾಂಗ್ರೆಸ್- ಬಿಜೆಪಿ ಮಧ್ಯೆ ಇದೇ ಮೊದಲ ಬಾರಿಗೆ ಸಮಾನ ಪೈಪೋಟಿಯೆಂಬ ಮಾತು ಕೇಳಿಬರುತ್ತಿವೆ. ಈ ಹಿಂದೆ ಶಾಮನೂರು ಶಿವಶಂಕರಪ್ಪ-ಯಶವಂತ ರಾವ್ ಜಾಧವ್ ಸ್ಪರ್ಧೆ ಮಾಡಿದ್ದಾಗ ಹೇಗೆ ಕೆಲವೇ ಸಾವಿರಗಳ ಮತಗಳ ಅಂತರದಲ್ಲಿ ಫಲಿತಾಂಶ ಬಂದಿತ್ತೋ, ಈ ಉಪ ಚುನಾವಣೆಯಲ್ಲೂ ಅಂತಹದ್ದೇ ಸಾಧ್ಯತೆ ಇವೆ ಎನ್ನಲಾಗಿದೆ. ಉಭಯ ಪಕ್ಷಗಳ ಪೈಕಿ ಯಾರ ಗೆಲುವು ಎಂಬುದನ್ನು ಎಸ್‌ಡಿಪಿಐ, ಪಕ್ಷೇತರ ಮುಸ್ಲಿಂ ಅಭ್ಯರ್ಥಿಗಳು ಪಡೆದ ಮತಗಳು ನಿರ್ಣಯಿಸುವ ಸಾಧ್ಯತೆ ಹೆಚ್ಚು. ಕಾಂಗ್ರೆಸ್ಸಿಗೆ ಹೇಗೆ ಕೆಲವರಿಂದ ವಿರೋಧ ಕಂಡು ಬಂದಿತ್ತೋ ಅಂತಹದ್ದು ಮತ ಚಲಾವಣೆ ವೇಳೆ ಇರಲಿಲ್ಲ. ಕಾಂಗ್ರೆಸ್ಸಿಗೆ ಅಲ್ಪಸಂಖ್ಯಾತರೂ ಸೇರಿ ಎಲ್ಲರೂ ಕೈ ಹಿಡಿದಿದ್ದಾರೆಂಬುದು ಕಾಂಗ್ರೆಸ್ಸಿನವರ ಹೇಳಿಕೆ.

ಮತ್ತೊಂದು ಕಡೆ ಬಿಜೆಪಿ ಕಾಂಗ್ರೆಸ್ ಪಾಳೆಯದ ಅತೃಪ್ತಿ, ಮುಸ್ಲಿಂ ಸಮುದಾಯದ ಮುನಿಸಿನ ಲಾಭ ತನಗೆ ಆಗಬಹುದೆಂಬ ನಿರೀಕ್ಷೆಯಲ್ಲಿದೆ. ಈ ಚುನಾವಣೆಯಲ್ಲಿ ಅಭ್ಯರ್ಥಿಗಳ ಜಾತಿ ಆಟವೂ ಜೋರಾಗಿಯೇ ನಡೆದಿರುವುದು ಕಂಡುಬರುತ್ತಿದೆ. ಎರಡೂ ಅಭ್ಯರ್ಥಿಗಳ ಪರವಾಗಿ ಆಯಾ ಸಮುದಾಯದ ಜಾತಿ ಮತಗಳು, ಅಹಿಂದ ವರ್ಗಗಳ ಮತಗಳು ಸಿಕ್ಕಿವೆಯೆಂದರೆ, ಮುಸ್ಲಿಮರ ಮತ ವಿಭಜನೆ ಆಗಿದೆಯೆಂಬ ವಾದವಿದೆ. ಸದ್ಯಕ್ಕೆ ದಾವಣಗೆರೆ ದಕ್ಷಿಣ ಕ್ಷೇತ್ರ ಫಲಿತಾಂಶವು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಅವರ ಪ್ರತಿಷ್ಠೆಯದ್ದಾಗಿದೆ. ಅದೇ ರೀತಿ ಕೇಂದ್ರದ ಮಾಜಿ ಸಚಿವ ಜಿ.ಎಂ. ಸಿದ್ದೇಶ್ವರ, ಮಾಜಿ ಸಚಿವರಾದ ಎಸ್.ಎ.ರವೀಂದ್ರನಾಥ, ಎಂ.ಪಿ.ರೇಣುಕಾಚಾರ್ಯ ಅವರ ಮಧ್ಯೆ ಇದ್ದ ವೈಮನಸ್ಸು ಮರೆಯಾಗಲು ಬಿಜೆಪಿ ಇಲ್ಲಿ ಗೆಲುವು ಸಾಧಿಸಲೇಬೇಕಿದೆ.

ಚಿತ್ರದುರ್ಗದಲ್ಲಿ ಮೇ 9ರಂದು ನಡೆಯುವ ಬಿಎಸ್‌ವೈ ಅಭಿಮಾನೋತ್ಸವ ಮತ್ತಷ್ಟು ರಂಗೇರಬೇಕೆಂದರೆ ದಾವಣಗೆರೆ ದಕ್ಷಿಣ ಕ್ಷೇತ್ರದ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಬೇಕಿದೆ. ಬಿಜೆಪಿಗೆ ಸದಾ ಕಬ್ಬಿಣದ ಕಡಲೆಯಾಗಿದ್ದು, ದಕ್ಷಿಣದಲ್ಲಿ ಸೋಲಿಲ್ಲದ ಸರದಾರನಾಗಿ ಪ್ರತಿನಿಧಿಸುತ್ತಿದ್ದ ಶಾಮನೂರು ಶಿವಶಂಕರಪ್ಪ ಇಲ್ಲದ ಮೊದಲ ಚುನಾವಣೆಯಲ್ಲಾದರೂ ದಕ್ಷಿಣ ಕ್ಷೇತ್ರದಲ್ಲಿ ಕಮಲ ಅರಳಿಸುವ ಬಿಜೆಪಿ ದಶಕಗಳ ಕನಸಿಗೆ ಇಲ್ಲಿ ಸಾವಿರಾರು ಕಾರ್ಯ ಕರ್ತರೇ ಶಕ್ತಿಯಾಗಿದ್ದಾರೆ. ಕ್ಷೇತ್ರದ ಮತದಾರರು ಯಾರ ಮುಡಿಗೆ ವಿಜಯಮಾಲೆ ಹಾಕಿದ್ದಾರೆಂಬುದಕ್ಕೆ ಇನ್ನು ಕೆಲ ತಾಸುಗಳಲ್ಲೇ ಸ್ಪಷ್ಟ ಚಿತ್ರಣವೂ ಸಿಗಲಿದೆ.

ಅಭಿಮಾನೋತ್ಸವ ಯಡಿಯೂರಪ್ಪ ಕುಟುಂಬದ ಕಾರ್ಯಕ್ರಮ: ಯತ್ನಾಳ

ಹೊಸ ಪಕ್ಷ ಸ್ಥಾಪಿಸಲು ಕುಳ್ಳುಮಲೆ ಗಣಪತಿ ದೇವರಿಂದ ಶುಭ ಸೂಚನೆ

• **ಕನ್ನಡಪ್ರಭ ವಾರ್ತೆ** ಚನ್ನಗಿರಿ

ಮೇ9ರಂದು ಚಿತ್ರದುರ್ಗದಲ್ಲಿ ನಡೆಯುತ್ತಿರುವ ಅಭಿಮಾನೋತ್ಸವ ಕಾರ್ಯಕ್ರಮವು ಯಡಿಯೂರಪ್ಪ ಮತ್ತು ಅವರ ಮಗ ವಿಜಯೇಂದ್ರ ಅವರಿಗೆ ಬಿಜೆಪಿ ಜವಾಬ್ದಾರಿ ಕೊಡುವ ಕಾರಣದಿಂದ ನಡೆಸುತ್ತಿದ್ದಾರೆ. ಇದು ಯಡಿಯೂರಪ್ಪನವರ ಕುಟುಂಬದ ಕಾರ್ಯಕ್ರಮವಾಗಿದೆ ಎಂದು ವಿಜಯಪುರ ನಗರ ಕ್ಷೇತ್ರದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ಶನಿವಾರ ಪಟ್ಟಣದಲ್ಲಿ ಖಾಸಗಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ರಾಜ್ಯದಲ್ಲಿ ಎಲ್ಲ ನಾಯಕರು ಸೇರಿ ಬಿಜೆಪಿಯನ್ನು ಕಟ್ಟಿದ್ದು. ಯಡಿಯೂರಪ್ಪ ಒಬ್ಬರಿಂದಲೇ ಬಿಜೆಪಿ ಎಂಬ ಭ್ರಮೆಯಿಂದ ಹೊರಬರಬೇಕು ಎಂದರು.

ನಾನು ಬಿಜೆಪಿಗೆ ಬರುವ ಯಾವುದೇ ಮಾತುಕತೆಗಳು ನಡೆದಿಲ್ಲ. ಹೊಸ ಪಕ್ಷವನ್ನು ಸ್ಥಾಪನೆ ಮಾಡಲು ಕುಳ್ಳುಮಲೆ ಗಣಪತಿ ದೇವಸ್ಥಾನದಲ್ಲಿ ಪೂಜೆ ನಡೆಸಿ ಹೊಸ ಪಕ್ಷವನ್ನು ಸ್ಥಾಪನೆ ಮಾಡುವ ಬಗ್ಗೆ ದೇವರಲ್ಲಿ ಕೇಳಿದಾಗ ಶುಭ ಸೂಚನೆ ಸಿಕ್ಕಿದೆ. ರಾಜ್ಯದ ಜನತೆಗೆ ಪರ್ಯಾಯ ಪಕ್ಷ ಅನಿವಾರ್ಯವಾಗಿದ್ದು, ನಾನು ರಾಜ್ಯದ ಯಾವುದೇ ಮೂಲೆಗೆ ಹೋದರೂ ಅಧಿಕ ಸಂಖ್ಯೆಯಲ್ಲಿ ಜನರು ಸೇರುತ್ತಿದ್ದಾರೆ. ಪ್ರಾಮಾಣಿಕರಿಗೆ, ಭ್ರಷ್ಟಾಚಾರ ರಹಿತರಿಗೆ ಜನರು ಮನ್ನಣೆ ನೀಡಲಿದ್ದಾರೆ ಎಂದರು.

ಜೆ.ಎಚ್.ಪಟೇಲರು ನಮ್ಮ ಭಾಗಕ್ಕೆ ನೀರಾವರಿ ಸೌಲಭ್ಯ, ಕೂಡಲ ಸಂಗಮದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದರಿಂದ ಅವರನ್ನು ಇಂದಿಗೂ ನೆನಪು ಮಾಡಿಕೊಳ್ಳುತ್ತೇವೆ. ನವೆಂಬರ್ ತಿಂಗಳಿಗೆ ಬಿಜೆಪಿ ರಾಜ್ಯಾಧ್ಯಕ್ಷರ ಅವಧಿ ಮುಗಿಯ ಲಿದೆ. ಕೇಂದ್ರದ ನಾಯಕರಿಗೆ ಯಡಿಯೂರಪ್ಪ ಮತ್ತು ಅವರ ಮಗನನ್ನು ನಿರ್ಲಕ್ಷ್ಯ ಮಾಡಿದರೆ ರಾಜ್ಯದಲ್ಲಿ ಬಿಜೆಪಿಗೆ ಸ್ಥಾನವಿಲ್ಲ



ಎಂಬ ಸಂದೇಶವನ್ನು ರವಾನಿಸುವುದಕ್ಕಾಗಿ ಚಿತ್ರದುರ್ಗದ ಕಾರ್ಯಕ್ರಮವನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.

ನಾನು ದುಡ್ಡು ಮಾಡಿಕೊಳ್ಳುವ ಉದ್ದೇಶಕ್ಕಾಗಿ ರಾಜಕಾರಣ ಮಾಡುತ್ತಿಲ್ಲ. ರೈತರಿಗೆ, ಸಾಮಾನ್ಯ ಜನರಿಗೆ ಅನುಕೂಲವಾಗುವ ಆಡಳಿತ ನೀಡುವುದು ನನ್ನ ಗುರಿಯಾಗಿದೆ. ಮುಂದಿನ 2028ರ ಚುನಾವಣೆಯಲ್ಲಿ ನನ್ನ ಪಕ್ಷವೇ ಅಧಿಕಾರಕ್ಕೆ ಬರಲಿದೆ ಎಂದರು.

ಬಿಜೆಪಿಯಲ್ಲಿ ನರೇಂದ್ರ ಮೋದಿ ಅಂತಹ ಪ್ರಾಮಾಣಿಕರಿದ್ದು, ಲೋಕಸಭಾ ಚುನಾವಣೆಯಲ್ಲಿ ಮೋದಿ ಅವರಿಗೆ ಬೆಂಬಲ ನೀಡಲಿದ್ದು, ರಾಜ್ಯದಲ್ಲಿ ಕುಟುಂಬ ರಾಜಕಾರಣದ ವಿರುದ್ಧ ನನ್ನ ಹೋರಾಟ ನಿರಂತರವಾಗಿರಲಿದೆ ಎಂದರು.

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಶೂನ್ಯವಾಗಿದೆ. ಮುಸ್ಲಿಮರಿಗೆ ₹6 ಸಾವಿರ ಕೋಟಿ ಅನುದಾನವನ್ನು ನೀಡಿದ್ದಾರೆ. ಒಂದು ಕೋಮಿಗೆ ಸೀಮಿತವಾಗಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಹಿಂದುಳಿದ, ದಲಿತ ವರ್ಗದ ಜನರ ಹೆಸರೇಳಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯನವರು ಅವರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಯತ್ನಾಳ್ ಕುಟುಕಿದರು.

6ಕ್ಕೆ ವಿಶ್ವಕರ್ಮ ಸಮಾಜ ಸಂಘದಿಂದ ಸಾಮೂಹಿಕ ಉಪನಯನ, ವಿವಾಹ

ಕಾಳಿಕಾಂಬ ವಿಶ್ವಕರ್ಮ ಕಲ್ಯಾಣ ಮಂಟಪದಲ್ಲಿ ಆಯೋಜನೆ: ಮುಖಂಡರು

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ವಿಶ್ವಕರ್ಮ ಸಮಾಜ ಸಂಘ, ದಾವಣಗೆರೆ ಮತ್ತು ಜಿಲ್ಲೆಯ ವಿಶ್ವಕರ್ಮ ಸಮಾಜದ ಎಲ್ಲ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ 43ನೇ ವರ್ಷದ ಸಾಮೂಹಿಕ ಉಪನಯನ ಮತ್ತು ವಿವಾಹ ಮಹೋತ್ಸವವನ್ನು ಮೇ 6ರಂದು ಇಲ್ಲಿನ ಶ್ರೀ ಕಾಳಿಕಾ ದೇವಿ ರಸ್ತೆಯ ಶ್ರೀ ಕಾಳಿಕಾಂಬ ವಿಶ್ವಕರ್ಮ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದೆ ಎಂದು ಸಂಘದ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಆರ್. ವಿಜಯಕುಮಾರ ಹಾಗೂ ಪ್ರಧಾನ ಕಾರ್ಯದರ್ಶಿ ವಿ.ಎಂ.ಕೊಟ್ರೇಶಾಚಾರ್ ತಿಳಿಸಿದರು.

ಭಾನುವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಬೆಳಗ್ಗೆ 6.30ರಿಂದ 8.25ರವರೆಗೆ ಯಜ್ಞೋಪವೀತ ಧಾರಣೆ ಮತ್ತು ಬ್ರಹ್ಮೋಪದೇಶದ ನಂತರ 8.30 ರಿಂದ 9.30 ರವರೆಗೆ ಸಾಮೂಹಿಕ ವಿವಾಹಗಳು, ಮಾಂಗಲ್ಯಧಾರಣೆ, ಲಾಜಹೋಮ ಹಾಗೂ ಸಪ್ತಪದಿ ನಾಗವಲ್ಲಿ ಮುಂತಾದ ವಿವಾಹ ವಿಧಿವಿಧಾನಗಳು ಜರುಗಲಿವೆ ಎಂದು ತಿಳಿಸಿದರು.

ಬೆಳಗ್ಗೆ 11 ಗಂಟೆಗೆ ಧಾರ್ಮಿಕ ಸಭಾ ಕಾರ್ಯಕ್ರಮವು ಕೊಪ್ಪಳ ಜಿಲ್ಲೆಯ ಶ್ರೀಮದ್ ಆನೇಗುಂದಿ ಮಹಾಸಂಸ್ಥಾನ ಸರಸ್ವತಿ ಪೀಠ ಶ್ರೀಮಠ ಗಿಣಿಗೇರಾದ ಅಭಿನವಶ್ರೀಕಂಠಸ್ವಾಮಿಗಳು, ಅವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ



ದಾವಣಗೆರೆಯಲ್ಲಿ ವಿಶ್ವಕರ್ಮ ಸಮಾಜ ಸಂಘದಿಂದ ರಂದು ಸಾಮೂಹಿಕ ಉಪನಯನ, ವಿವಾಹ ಮಹೋತ್ಸವ ಹಮ್ಮಿಕೊಂಡಿರುವ ಕುರಿತು ಆರ್. ವಿಜಯಕುಮಾರ, ವಿ.ಎಂ. ಕೊಟ್ರೇಶಾಚಾರ್ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಶಿವಾಚಾರ್ಯಸ್ವಾಮಿ ಗಳ ಸಾನ್ನಿಧ್ಯದಲ್ಲಿ ನಡೆಯಲಿದೆ. ಅಧ್ಯಕ್ಷತೆಯನ್ನು ವಿಶ್ವಕರ್ಮ ಸಮಾಜ ಸಂಘದ ಅಧ್ಯಕ್ಷ ಆರ್. ವಿಜಯಕುಮಾರ ವಹಿಸುವರು ಎಂದು ತಿಳಿಸಿದರು.

ಬಿ.ಎಸ್.ಚನ್ನಬಸಪ್ಪ ಅಂಡ್ ಸನ್ಸ್ ಮಾಲೀಕ ಬಿ.ಸಿ.ಉಮಾಪತಿ, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷ ಬಸಾಪುರದ ಬಿ.ನಾಗೇಂದ್ರಚಾರ್, ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಶ್ರೀಕ್ಷೇತ್ರ ವರವಿಯ ಅಧ್ಯಕ್ಷ ಮೋಹನ್ ಎಸ್.ನರಗುಂದ, ಶೈಕ್ಷಣಿಕ ಬಹುಮಾಧ್ಯಮ ಸಂಶೋಧನ ಕೇಂದ್ರದ ಪ್ರಾಧ್ಯಾಪಕ ಡಾ. ಬಿ. ಶ್ರೀಕಂಠಾಚಾರ್, ಶ್ರೀ ಮಹಿಷಮರ್ದಿನಿ ಶ್ರೀರೇಣುಕ ಯಲ್ಲಮ್ಮದೇವಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಸರ್ವೇಶಾಚಾರ್, ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜದ ನಿರ್ದೇಶಕ ಎಚ್.ಪಿ. ರಾಜೇಂದ್ರಚಾರ್, ಸಿದ್ದಾಪುರದ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿಯ ತರಬೇತಿದಾರ ಪ್ರಶಾಂತ್ ಜಿ. ಆಚಾರ್ಯ, ಮುಖ್ಯಶಿಕ್ಷಕ ಬಿ.ಮಂಜುನಾಥಾಚಾರ್ ಇತರರು ಭಾಗವಹಿಸುವರು ಎಂದರು.

ಸುದ್ದಿಗೋಷ್ಠಿಯಲ್ಲಿ ವಿಶ್ವಕರ್ಮ ಸಮಾಜದ ಕೆ.ಎ.ಮನೋಹರ, ಸಿ.ಪಿ. ಪೂರ್ವಾಚಾರ್, ಎಂ.ಡಿ. ಮೌನೇಶ್ವರಾಚಾರ್, ಬಿ.ವಿ.ರಾಜಶೇಖರ, ಎ.ಆರ್. ಮುರುಳಿ ಧರಾಚಾರ್, ಬಿ.ಟಿ.ಸತೀಶ್ ಕುಮಾರ, ಕೆ.ಎಂ.ಬಸವರಾಜ, ವರದಾಚಾರ್‌ಪುಟಗ ನಾಳ್, ಜಿ.ಎನ್. ಗಣೇಶ್, ಎಂ.ಪಿ. ರಮೇಶಾಚಾರ್ ಮುದಹದಡಿ, ಬಿ.ಸಿ. ರಮೇಶಾಚಾರ್ ದೊಡ್ಡಬಾತಿ, ರಾಘವೇಂದ್ರ ಚಾರ್‌ಶಿಲ್ಪಿ, ಈ. ಲಿಂಗರಾಜ್ ಇದ್ದರು.

ಧಾರ್ಮಿಕ ಸೇವೆ | ಬಳ್ಳೇಶ್ವರದಲ್ಲಿ ನಾಗಶಿಲಾ ಪುನರ್ ಪ್ರತಿಷ್ಠಾಪನೆ ಧರ್ಮ ಸಭೆಯಲ್ಲಿ ಈಶ್ವರಾನಂದಪುರಿ ಶ್ರೀ ಅಭಿಮತ

ಜಗತ್ತು ಜೈನ ಧರ್ಮ ಒಪ್ಪಿದ್ದರೆ ಯುದ್ಧಗಳೇ ಇರುತ್ತಿರಲಿಲ್ಲ

• **ಕನ್ನಡಪ್ರಭ ವಾರ್ತೆ** ಹೊನ್ನಾಳಿ

ಅಹಿಂಸಾ ತತ್ವದ ಜೈನ ಧರ್ಮವನ್ನು ಇಡೀ ವಿಶ್ವ ಒಪ್ಪಿಕೊಂಡಿದ್ದರೆ ಜಗತ್ತಿನಲ್ಲಿ ಯುದ್ಧಗಳೇ ಇರುತ್ತಿರಲಿಲ್ಲ ಎಂದು ಹೊಸದುರ್ಗ ಕೆಲ್ಲೋಡು ಕನಕ ಗುರುಪೀಠದ ಈಶ್ವರಾನಂದಪುರಿ ಮಹಾಸ್ವಾಮಿಜಿ ಅಭಿಮತ ವ್ಯಕ್ತಪಡಿಸಿದರು.

ತಾಲೂಕಿನ ಬಳ್ಳೇಶ್ವರ ಗ್ರಾಮದಲ್ಲಿ 1008 ಭಗವಾನ್. ಪಾರ್ಶ್ವನಾಥ ದಿಗಂಬರ ಜೈನ ಟ್ರಸ್ಟ್ ವತಿಯಿಂದ ಭಾನುವಾರ ಐತಿಹಾಸಿಕ ನಾಗಶಿಲಾ ಪುನರ್‌ಪ್ರತಿಷ್ಠಾಪನೆ ನಿಮಿತ್ತ ವಿವಿಧ ಧಾರ್ಮಿಕ ಕೈಂಕರ್ಯಗಳು ನಡೆದ ಬಳಿಕ ಧರ್ಮಸಭೆ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಎಲ್ಲಾ ಧರ್ಮಗಳ ಸಾರ ಒಂದೇ ಆಗಿದೆ. ಎಲ್ಲರೂ ಕೂಡಿ ಬಾಳಿದರೆ ಸ್ವರ್ಗ ಸುಖ ಎಂದು ಮಹಾತ್ಮರು ಸಮಾಜಕ್ಕೆ ತಿಳಿಸಿಕೊಟ್ಟಿದ್ದಾರೆ. ಇದರಂತೆ ಸಮಾಜದಲ್ಲಿ ಎಲ್ಲರೂ ಶಾಂತಿ, ಸಹಬಾಳ್ವೆಯಿಂದ ಬದುಕಿದರೆ ಸ್ವರ್ಗದ ಸಾಕ್ಷಾತ್ಕಾರವನ್ನು ಕಾಣಬಹುದು ಎಂದರು.

ಸಾನ್ನಿಧ್ಯ ವಹಿಸಿದ್ದ ಹೊಸದುರ್ಗದ ಕುಂಚಿಟಿಗ ಮಹಾಸಂಸ್ಥಾನದ ಡಾ.ಶಾಂತವೀರ ಮಹಾಸ್ವಾಮೀಜಿ ಮಾತನಾಡಿ, ಜಗತ್ತಿನಲ್ಲಿ ಬುದ್ಧ, ಬಸವ, ಗಾಂಧೀಜಿಯವರ ತತ್ವ-ಸಿದ್ಧಾಂತಗಳನ್ನು ಅಕ್ಷರಶಃ ಪರಿಪಾಲಿಸಿಕೊಂಡು ಬರುತ್ತಿರುವುದು ಜೈನ ಧರ್ಮ. ಹೊನ್ನಾಳಿ ಕ್ಷೇತ್ರದ ಶಾಸಕ ಡಿ.ಜಿ.ಶಾಂತನಗೌಡ ಅವರು ತಾವು ಕಂಡಂತೆ ಎಲ್ಲ ಜಾತಿ ಧರ್ಮ, ಸಮಾಜದವರನ್ನು ಸಮಾನವಾಗಿ ಕಾಣುವ ವ್ಯಕ್ತಿತ್ವ ಹೊಂದಿದ್ದಾರೆ. ಸರ್ಕಾರದ ₹50 ಕೋಟಿಯಲ್ಲಿ ಸುಮಾರು ₹13 ಕೋಟಿ ಅನುದಾನವನ್ನು ಸಮನಾಗಿ ಎಲ್ಲ ಧರ್ಮದವರಿಗೆ ನೀಡುವ ಮನೋಭಾವನೆ ತೋರಿರುವುದು ಶ್ಲಾಘನೀಯ ಎಂದು ಹೇಳಿದರು.



ಹೊನ್ನಾಳಿ ತಾ. ಬಳ್ಳೇಶ್ವರದಲ್ಲಿ ಐತಿಹಾಸಿಕ ನಾಗಶಿಲಾ ಪುನರ್‌ಪ್ರತಿಷ್ಠಾಪನೆ ಧರ್ಮಸಭೆಯಲ್ಲಿ ಕನಕ ಗುರುಪೀಠದ ಈಶ್ವರಾನಂದಪುರಿ ಸ್ವಾಮೀಜಿ ಆಶೀರ್ವಚನ ನೀಡಿದರು. ಕುಂಚಿಟಿಗ ಗುರುಪೀಠ, ಶಾಸಕ ಡಿ.ಜಿ.ಶಾಂತನಗೌಡ ಮತ್ತಿತರ ಗಣ್ಯರು ಇದ್ದರು.

ಹೊನ್ನಾಳಿ ಹಿರೇಕಲ್ಮಠದ ಡಾ. ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮೀಜಿ ಕೂಡ ಕಾರ್ಯಕ್ರಮ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ, ಬಳ್ಳೇಶ್ವರ ಗ್ರಾಮ ಜೈನ ಬಸದಿ ಹಾಗೂ ದೇಗುಲವಿರುವ ಪರಮಪವಿತ್ರ ಹಾಗೂ ಅತ್ಯಂತ ಶಾಂತಿ ಸಹಬಾಳ್ವೆಯ ಗ್ರಾಮವಾಗಿದೆ. ಈ ಗ್ರಾಮದಲ್ಲಿ ಐತಿಹಾಸಿಕ ಹಿನ್ನಲೆಯುಳ್ಳ ನಾಗಶಿಲೆಯ ಪುನರ್‌ಪ್ರತಿಷ್ಠಾಪನೆ ಕೂಡ ತುಂಬಾ ಉತ್ತಮ ಕೆಲಸವಾಗಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಿ.ಜಿ.ಶಾಂತನಗೌಡ ಮಾತನಾಡಿ, ಇಲ್ಲಿನ ಜೈನ ಬಸದಿ ಸಮೀಪದಲ್ಲಿ ನೂತನವಾಗಿ ಸಮುದಾಯ ಭವನ ನಿರ್ಮಾಣಕ್ಕೆ ಚಾಲನೆ ನೀಡಿದ್ದು, ಸುಮಾರು ₹20 ಲಕ್ಷ ಅನುದಾನ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಕೂಡ ಅನುದಾನ ನೀಡಲಾಗುವುದು. ಈ ಕೆಲಸವನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕಾಗಿದೆ ಎಂದರು.

ಗ್ರಾಮದ ಯುವ ಮುಖಂಡ ದರ್ಶನ್ ಬಳ್ಳೇಶ್ವರ ಪ್ರಾಸ್ತಾವಿಕವಾಗಿ ಮಾತನಾಡಿ, ಇಲ್ಲಿಯವರೆಗೆ ನಾಗಶಿಲಾದ ಐತಿಹಾಸಿಕ ಹಿನ್ನೆಲೆ ಬಗ್ಗೆ ತಿಳಿದಿರಲಿಲ್ಲ. ಇತಿಹಾಸತಜ್ಞರಿಂದಾಗಿ ಈ ನಾಗಶಿಲೆ ಇಂದಿನದಲ್ಲ, ಹೊಯ್ಸಳ ಕಾಲದ 8ನೇ ಶತಮಾನದ್ದು ಎಂದು ತಿಳಿದುಬಂದಿದೆ. ಇದೀಗ ಅದು ಪುನರ್‌ಪ್ರತಿಷ್ಠಾಪನೆಯಾಗುತ್ತಿದೆ ಎಂದು ತಿಳಿಸಿದರು.

ಮುಖಂಡ ಸುರೇಶ್, ಭದ್ರಾವತಿ ಪ್ರಕಾಶ್ ಚಂದ್ ಜೈನ್, ಪಿ.ಭರತ್ ರಾಜ್, ಚಳ್ಳಕೆರೆ ಮಾತನಾಡಿದರು. ಅಧ್ಯಕ್ಷತೆಯನ್ನು 1008 ಭಗವಾನ್ ಪಾರ್ಶ್ವನಾಥ ದಿಗಂಬರ ಜೈನ ಟ್ರಸ್ಟ್ ಅಧ್ಯಕ್ಷ ಎಂ. ಪ್ರಮೋದ್ ವಹಿಸಿದ್ದರು. ಗ್ರಾಮದ ಮುಖಂಡರು, ಗ್ರಾಮಸ್ಥರು ಭಾಗವಹಿಸಿದ್ದು, ಅನ್ನಸಂತರ್ಪಣೆ ನಡೆಯಿತು.



ಹರಿಹರದ ತಾಪಂನಲ್ಲಿ ಶನಿವಾರ ಅಂಗವಿಕಲರ ಕಲ್ಯಾಣ ಇಲಾಖೆಯಿಂದ ಫಲಾನುಭವಿಗೆ ಶಾಸಕ ಬಿ.ಪಿ.ಹರೀಶ್ ತ್ರಿಚಕ್ರ ವಾಹನ ವಿತರಿಸಿದರು. ಇಲಾಖೆ ತಾಲೂಕು ಅಧಿಕಾರಿ ಶಶಿಕಲಾ, ಕೃಷಿ ಇಲಾಖೆ ಎಡಿ ನಟರಾಜ್ ಎಸ್., ಆಟೋ ಹನುಮಂತಪ್ಪ ಹಾಗೂ ಇತರರು ಇದ್ದರು.

ಶಿವಶಂಕರೇ ಗೌಡ ಪ್ರವಾಸ ಕಾರ್ಯಕ್ರಮ

ದಾವಣಗೆರೆ: ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಟಿ.ಜಿ. ಶಿವಶಂಕರೇ ಗೌಡ ಮೇ 4 ರಂದು ಸಂಜೆ 4.30ಕ್ಕೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಪರಿವೀಕ್ಷಣೆಯನ್ನು ಕೈಗೊಳ್ಳಲಿದ್ದಾರೆ ಎಂದು ಆಯೋಗದ ರಿಜಿಸ್ಟ್ರಾರ್ ಹಾಗೂ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.